ಸಂಪುಟ: 04 ಸಂಚಿಕೆ: 335 ಪುಟಗಳು: 08 ಭಾನುವಾರ 16 ಫೆಬ್ರವರಿ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

9448225696 +91 8035841833 ₹5

ಮುಂಜಾನೆ ಮಾತು

ಮನಸ್ಸಿಗೆ ಮದವೇರಿದಾಗ ಸ್ಮಶಾನದಲ್ಲಿ ತಿರುಗಾಡಿ ಬರಬೇಕಂತೆ, ಏಕೆಂದರೆ ಅಲ್ಲಿ ನಾನು, ನನ್ನಿಂದಲೇ ಎಂದು ಹೇಳಿದ ಎಷ್ಟು ಜನ ಮಣ್ಣಾಗಿರುವರು ಕಾಣಿ ಸಿಗುತ್ತಾರೆ.

ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ಮೆಜೆಸ್ಟಿಕ್-ಕೆಂಗೇರಿ ಡಬಲ್ ಡೆಕ್ಕರ್ ಫ್ಲೈ ಓವರ್, ಯೋಜನೆ

• ಉದಯವಾಹಿನಿ, ಬೆಂಗಳೂರು

ಉದ್ಯಾನ ನಗರಿ ಬೆಂಗಳೂರಿನ ಸಂಚಾರ ದಟ್ಟಣೆ ಕಡಿಮೆ ಮಾಡಲು ಒಟ್ಟು 4 ಕಾರಿಡಾರ್‌ನ ಬೆಂಗಳೂರು ಉಪನಗರ ರೈಲು ಯೋಜನೆ (ಬಿಎಸ್‌ಆರ್‌ಪಿ)ಯನ್ನು ಕರ್ನಾಟಕ ರೈಲು ಮೂಲಸೌಲಭ್ಯ ಅಭಿವೃದ್ಧಿ ಕಂಪನಿ ನಿಯಮಿತ (ಕೆ-ರೆಡ್) ಮೂಲಕ ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಲ್ಲಿ ಈಗ ಡಬಲ್ ಡೆಕ್ಕರ್ ಫ್ಲೈ ಓವರ್ ನಿರ್ಮಾಣ ಮಾಡುವ ಪ್ರಸ್ತಾವನೆ ಸಿದ್ಧಗೊಳಿಸಲಾಗಿದೆ. 'ಪಾರಿಜಾತ' ಕಾರಿಡಾರ್‌ನಲ್ಲಿ ಈ ಪ್ರಸ್ತಾವಿತ ಯೋಜನೆ ಸೇರಿದೆ. ಬೆಂಗಳೂರು ಸಬ್ ಅರ್ಬನ್ ರೈಲು ಯೋಜನೆಯಲ್ಲಿ ಕಾರಿಡಾರ್-3 'ಪಾರಿಜಾತ, 35.5 ಕಿ. ಮೀ. ಉದ್ದದ ಈ ಮಾರ್ಗ 13 ನಿಲ್ದಾಣಗಳನ್ನು ಹೊಂದಿದೆ.

ಭವಿಷ್ಯದಲ್ಲಿ ಈ ಮಾರ್ಗವನ್ನು ರಾಮನಗರ, ಮೈಸೂರು, ಬಂಗಾರಪೇಟೆ, ಕೆಜಿಎಫ್ ತನಕ ವಿಸ್ತರಣೆ ಮಾಡುವ ಗುರಿಯನ್ನು ಸರ್ಕಾರ ಹೊಂದಿದೆ. ಈ 'ಪಾರಿಜಾತ' ಕಾರಿಡಾರ್‌ನಲ್ಲಿ ರೈಲು ಮತ್ತು ವಾಹನಗಳು ಸಂಚಾರ ನಡೆಸುವ 16 ಕಿ. ಮಿ. ಡಬಲ್ ಡೆಕ್ಕರ್ ಫ್ಲೈ ಓವರ್ ನಿರ್ಮಾಣದ ಪ್ರಸ್ತಾವನೆ ಇದೆ. ಈ ಫ್ಲೈ ಓವರ್ ಕೆಎಸ್‌ಆರ್ ಬೆಂಗಳೂರು (ಮೆಜೆಸ್ಟಿಕ್) ನಿಲ್ದಾಣ ಮತ್ತು ಕೆಂಗೇರಿ ನಡುವೆ ನಿರ್ಮಾಣವಾಗಲಿದೆ. ನಗರದ ಸಂಚಾರ ದಟ್ಟಣೆ ತಪ್ಪಿಸುವಲ್ಲಿ ಈ ಫ್ಲೈ ಓವರ್ ಪ್ರಮುಖ ಪಾತ್ರವಹಿಸಲಿದೆ ಎಂದು ಅಂದಾಜಿಸಲಾಗಿದೆ.

ಡಬಲ್ ಡೆಕ್ಕರ್ ಫ್ಲೈ ಓವರ್

ಕೆ-ರೈಡ್ ಪ್ರಾಥಮಿಕವಾಗಿ ಈ ಯೋಜನೆಗೆ ಒಪ್ಪಿಗೆ ನೀಡಿವೆ. ಈಗಾಗಲೇ 'ಪಾರಿಜಾತ ಕಾರಿಡಾರ್ ನಿರ್ಮಾಣಕ್ಕೆ ಟೆಂಡರ್ ಕರೆಯಲಾಗಿದೆ. ಈಗ ಯೋಜನೆಯಲ್ಲಿ ಬದಲಾವಣೆಯಾಗುವ ಹಿನ್ನಲೆಯಲ್ಲಿ ಹೊಸ ಟೆಂಡರ್ ಕರೆಯಲಾಗುತ್ತದೆ. ಕೆ-ರೆಡ್ ಮಾಹಿತಿಯಂತೆ ಡಬಲ್ ಡೆಕ್ಕರ್ ಫ್ಲೈ ಓವರ್‌ನಲ್ಲಿ ಮೊದಲ ಹಂತದಲ್ಲಿ ವಾಹನಗಳು ಸಂಚಾರ ನಡೆಸುವ ರಸ್ತೆ, 2ನೇ ಹಂತದಲ್ಲಿ ರೈಲು ಸಂಚಾರಕ್ಕೆ ಮಾರ್ಗ ನಿರ್ಮಾಣವಾಗಲಿದೆ.

1 ಲಕ್ಷ ಪ್ರಯಾಣಿಕರನ್ನು ಕಳೆದುಕೊಂಡ ಮೆಟ್ರೋ

• ಉದಯವಾಹಿನಿ, ಬೆಂಗಳೂರು

ನಮ್ಮ ಮೆಟ್ರೋ ಸಿಲಿಕಾನ್ ಸಿಟಿ ಬೆಂಗಳೂರಿನ ಪ್ರಯಾಣಿಕರ ಮೆಚ್ಚಿನ ಆಯ್ಕೆಯಾಗಿತ್ತು ಟ್ರಾಫಿಕ್ ಕಿರಿಕಿರಿಯಿಂದ ತಪ್ಪಿಸಿಕೊಳ್ಳಲು ಹಾಗೂ ಸಮಯ ಉಳಿಸಲು ಪ್ರತಿನಿತ್ಯ ಲಕ್ಷಾಂತರ ಜನರು ನಮ್ಮ ಮೆಟ್ರೋದಲ್ಲಿ ಸಂಚಾರ ನಡೆಸುತ್ತಿದ್ದರು. ಕೊಟ್ಟಿರುವ ಟಿಕೆಟ್ ದರಕ್ಕೆ ಮೋಸ ಇಲ್ಲದ ಪ್ರಯಾಣ ಎಂದುಕೊಂಡು ಜನರು ನಮ್ಮ ಮೆಟ್ರೋದಲ್ಲೇ ಸಂಚರಿಸುತ್ತಿದ್ದರು. ಜನ ಹೆಚ್ಚಾದಂತೆ ದರ ಹೆಚ್ಚು ಎನ್ನುವಂತೆ ನಮ್ಮ ಮೆಟ್ರೋ ಸಂಸ್ಥೆ ಕೂಡ ಟಿಕೆಟ್ ದರ ಏರಿಕೆ ಮಾಡಿದೆ. ಮೆಟ್ರೋ ಟಿಕೆಟ್ ದರ ಏರಿಕೆಯಾಗಲಿದೆ ಎನ್ನುವ ಸುದ್ದಿ ಈ ಮೊದಲೇ ಎಲ್ಲೆಡೆ ಹರಿದಾಡುತ್ತಿತ್ತು. ಈಗಿರುವ ಟಿಕೆಟ್ ದರಕ್ಕಿಂತ ಹತ್ತೋ ಇಪ್ಪತ್ತೋ ಶೇಕಡದಷ್ಟು ದರ ಏರಿಕೆ ಮಾಡಬಹುದು ಎನ್ನುವ ಲೆಕ್ಕಾಚಾರದಲ್ಲಿದ್ದ ನಮ್ಮ ಮೆಟ್ರೋ ಪ್ರಯಾಣಿಕರಿಗೆ ಬಿಎಂಆರ್‌ಸಿಎಲ್ ದೊಡ್ಡ ಶಾಕ್ ಕೊಟ್ಟಿದ್ದು, ಬರೋಬ್ಬರಿ 46%ದಷ್ಟು ದರ ಏರಿಕೆ ಮಾಡಿದೆ.

ಮೆಟ್ರೋ ಟಿಕೆಟ್ ದರ ದುಪ್ಪಟ್ಟು

ಮೆಟ್ರೋ ಟಿಕೆಟ್ ದರ ದುಪ್ಪಟ್ಟು ಮಾಡಿರುವುದು ಪ್ರಯಾಣಿಕರ ಆಕ್ರೋಶಕ್ಕೆ ಕಾರಣವಾಗಿತ್ತು, ವ್ಯಾಪಕ ಆಕ್ರೋಶ ಹಾಗೂ ಮೆಟ್ರೋದಲ್ಲಿ ಪ್ರಯಾಣಿಸುವವರ ಸಂಖ್ಯೆ ಗಣನೀಯವಾಗಿ ಇಳಿಕೆಯಾದ ಹಿನ್ನೆಲೆಯಲ್ಲಿ ಬಿಎಂಆರ್‌ಸಿಎಲ್ ಸಂಸ್ಥೆ ಸದ್ಯ ಟಿಕೆಟ್ ದರ ಇಳಿಕೆ ಮಾಡಿದೆ. ನಿನ್ನೆಯಿಂದ ಹೊಸ ದರ ಜಾರಿ ಮಾಡಿದೆ. ದುಪ್ಪಟ್ಟು ದರ ಏರಿಕೆ ಮಾಡಲಾದ ಕೆಲವು ಮಾರ್ಗಗಳಿಗೆ ಹತ್ತು ರೂಪಾಯಿ ದರ ಇಳಿಕೆ ಮಾಡಲಾಗಿದೆ. ಯಾವಾಗ ಮೆಟ್ರೋ ದರ ದುಪ್ಪಟ್ಟಾಯ್ತೋ ಜನರು ಕೂಡ ಮೆಟ್ರೋಗೆ ಬಾಯ್ ಬಾಯ್ ಹೇಳಿ ಮತ್ತೆ ಬಸ್ ಹಾಗೂ ಆಟೋ ಕಡೆ ಮುಖ ಮಾಡಿದ್ದರು. ಆದರೂ ಟಿಕೆಟ್ ದರ ಇಳಿಕೆಯಾಗಬಹುದು ಎನ್ನುವ ಆಶಾಭಾವನೆ ಪ್ರಯಾಣಿಕರಲ್ಲಿತ್ತು. ಆದರೆ ಬಿಎಂಆರ್‌ಸಿಎಲ್ ಕೊಂಚ ಅಂದರೆ ಹತ್ತು ರೂಪಾಯಿ ಬೆಲೆ ಇಳಿಸಿ ಮೂಗಿಗೆ ತುಪ್ಪ ಸವರುವ ಕೆಲಸ ಮಾಡಿದ ಮೇಲಂತೂ ಜನ ನಮ್ಮ ಮೆಟ್ರೋ ಕಡೆ ತಲೆ ಹಾಕುತ್ತಿಲ್ಲ.

ಮಕ್ಕಳ ಹೆಸರು ಬದಲಾವಣೆ ಕುರಿತು ಮಹತ್ವದ ಆದೇಶ..!

• ಉದಯವಾಹಿನಿ, ಬೆಂಗಳೂರು

ಮಕ್ಕಳ ಹೆಸರು ಬದಲಾವಣೆ ಬಯಸುವ ಪೋಷಕರು ಅಥವಾ ಮಕ್ಕಳು ಎದುರಿಸುತ್ತಿರುವ ತೊಂದರೆಗಳನ್ನು ಗಮನಿಸಿದ ಕರ್ನಾಟಕ ಹೈಕೋರ್ಟ್, ಜನನ ಮತ್ತು ಮರಣ ನೋಂದಣಿ ಕಾಯ್ದೆ ಅಥವಾ ನಿಯಮಗಳಿಗೆ ತಿದ್ದುಪಡಿ ತರುವವರೆಗೆ ಜನನ ಪ್ರಮಾಣ ಪತ್ರಗಳಲ್ಲಿ ಅದಕ್ಕಾಗಿ ಒಂದು ಕಾರ್ಯವಿಧಾನವನ್ನು ರೂಪಿಸಿದೆ. ಮಕ್ಕಳ ಹೆಸರು ಬದಲಾವಣೆಗೆ ಪೋಷಕರು ಎದುರಿಸುತ್ತಿರುವ ತೊಂದರೆಗಳನ್ನು ಗಮನಿಸಿದ ಕರ್ನಾಟಕ ಹೈಕೋರ್ಟ್) ಮಹತ್ವದ ಆದೇಶ ಹೊರಡಿಸಿದೆ. 1969ರ ಜನನ ಮತ್ತು ಮರಣ ನೋಂದಣಿ ಕಾಯ್ದೆಗೆ ತಿದ್ದುಪಡಿ ತರುವ ಮೂಲಕ ಜನನ ನೋಂದಣಿಯಲ್ಲಿ ಹೆಸರು ಬದಲಾವಣೆಗೆ ಅವಕಾಶ ಕಲ್ಪಿಸುವಂತೆ ಹೈಕೋರ್ಟ್ ಶಾಸಕಾಂಗಕ್ಕೆ ಸೂಚಿಸಿದೆ. ನ್ಯಾ.ಎನ್.ಎಸ್.ಸಂಜಯ್ ಗೌಡ ಅವರಿದ್ದ ಹೈಕೋರ್ಟ್ ಪೀಠ ಶುಕ್ರವಾರ ಈ ಬಗ್ಗೆ ಆದೇಶ ಹೊರಡಿಸಿದೆ.

ಮಹಿಳೆಯರು ಹಣ ವಾಪಾಸ್ ನೀಡಿ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳಿಂದ ಆರ್ಥಿಕತೆ ಹಾಳಾಗಿದೆ. ಅಭಿವೃದ್ಧಿಗೆ ಹಣ ಇಲ್ಲ ಎಂದು ವಿಪಕ್ಷಗಳು ಆರೋಪ ಮಾಡುತ್ತಿವೆ. ಈ ಮಧ್ಯೆ ಗ್ಯಾರಂಟಿ ಯೋಜನೆಗಳ ಪರಿಶೀಲನಾ ಸಭೆಯಲ್ಲಿ ಮಹಿಳೆಯರಿಗೆ ಗೃಹ ಲಕ್ಷ್ಮೀ ಹಣ ಹಿಂತಿರುಗಿಸುವಂತೆ ಮನವಿಯೊಂದು ಮಾಡಲಾಗಿದೆ. ಬಿಬಿಎಂಪಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರು ಇಂಥದ್ದೊಂದು ಮನವಿ ಇಟ್ಟಿದ್ದಾರೆ. ಹೌದು, ಬಿಬಿಎಂಪಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ, ಅಧ್ಯಕ್ಷರಾದ ಜಿ.ಕೃಷ್ಣಪ್ಪ ಅವರು ಶನಿವಾರ ಬೆಂಗೂರಿನ ಬೊಮ್ಮನಹಳ್ಳಿ ವಿಧಾನ ಸಭಾ ಕ್ಷೇತ್ರದ ಕಛೇರಿಯಲ್ಲಿ ಸಭೆ ನಡೆಸಿದರು. ಗ್ಯಾರಂಟಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನದ ಬಗ್ಗೆ, ಮುಖಂಡರು, ಸ್ಥಳೀಯರ ಜೊತೆಗೆ ಚರ್ಚಿಸಿದರು. ಸ್ವಯಂ ಪ್ರೇರಿತವಾಗಿ ಹಣ ನೀಡುವಂತೆ ಮನವಿ ರಾಜ್ಯದಲ್ಲಿ ಗೃಹ ಲಕ್ಷ್ಮಿ ಯೋಜನೆ ಜಾರಿಯಲ್ಲಿದೆ. ಮಾಸಿಕವಾಗಿ ಮಹಿಳೆಯರಿಗೆ 2000 ರೂಪಾಯಿ ನೀಡಲಾಗುತ್ತಿದೆ. ಈ ಹಣ ಮನೆಯ ಮುಖ್ಯಸ್ಥ ಖಾತೆಗೆ ಜಮೆ ಆಗುತ್ತಿದೆ. ಆರ್ಥಿಕವಾಗಿ ಸಬಲರಾಗಿರುವ ಮಹಿಳೆಯರು ತಾವು ಪಡೆಯುತ್ತಿರುವ ಗೃಹಲಕ್ಷ್ಮಿ ಯೋಜನೆಯ ಹಣವನ್ನು ಸರ್ಕಾರಕ್ಕೆ ಸ್ವಯಂಪ್ರೇರಿತವಾಗಿ ಬಿಟ್ಟುಕೊಡಬೇಕೆಂದು ಅವರು ಗೃಹಲಕ್ಷ್ಮಿ ಫಲಾನುಭವಿಗಳಿಗೆ ಮನವಿ ಮಾಡಿದ್ದಾರೆ.

ದರೋಡೆ ಪ್ರಕರಣ, ಆರೋಪಿಗಳ ಚಿತ್ರ ಬಿಡುಗಡೆ, ರೂ. 5 ಲಕ್ಷ ಬಹುಮಾನ

• ಉದಯವಾಹಿನಿ, ಬೆಂಗಳೂರು

ರಾಜ್ಯವನ್ನೆ ಬೆಚ್ಚಿ ಬಿಳಿಸಿದ್ದ ಬೀದರ್ ಎಟಿಎಂ ದರೋಡೆ ಹಾಗೂ ವ್ಯಾನ್ ಸಿಬ್ಬಂದಿಯನ್ನು ಗುಂಡಿಕ್ಕಿ ಕೊಂದ ಇಬ್ಬರು ದರೋಡೆಕೋರರ ಚಿತ್ರಗಳನ್ನು ಪೊಲೀಸರು ಶನಿವಾರ ಬಿಡುಗಡೆ ಮಾಡಿದ್ದಾರೆ. ಆರೋಪಿಗಳ ಬಗ್ಗೆ, ಮಾಹಿತಿ ನೀಡಿದವರಿಗೆ ರೂ. 5 ಲಕ್ಷ ನಗದು ಬಹುಮಾನ ಘೋಷಿಸಿದ್ದಾರೆ. ದರೋಡೆ ಮತ್ತು ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಹಾರದ ವೈಶಾಲಿ ಜಿಲ್ಲೆಯ ಫತೇಪುರ್ ಫುಲ್ಕಾರಿಯಾ ನಿವಾಸಿ ಅಮನ್ ಕುಮಾರ್ ಮತ್ತು ಬಿಹಾರದ ವೈಶಾಲಿ ಜಿಲ್ಲೆಯ ಜನದಾಹಾ ಬಳಿಯ ಮಹಿಸೂರ್ ನಿವಾಸಿ ಅಲೋಕ್ ಕುಮಾರ್ ಅಕಾ ಅಶುತೋಷ್ ಅಕಾ ಅಂಬಾನಿ ಅವರು ಬೇಕಾಗಿದ್ದಾರೆ ಎಂದು ಕರ್ನಾಟಕ ಪೊಲೀಸರು ತಿಳಿಸಿದ್ದಾರೆ. ಅಮನ್ ಕುಮಾರ್ ಮತ್ತು ಅಲೋಕ್ ಕುಮಾರ್ ಬಂಧನಕ್ಕೆ ಸುಳಿವು ನೀಡುವ ಯಾವುದೇ ವ್ಯಕ್ತಿಗೆ ರೂ. 5 ಲಕ್ಷ ನಗದು ಬಹುಮಾನ ನೀಡಲಾಗುವುದು, ಮಾಹಿತಿ ನೀಡಿದವರ ಹೆಸರನ್ನು ಗೌಪ್ಯವಾಗಿಡಲಾಗುವುದು ಎಂದು ಪೊಲೀಸರು ಭರವಸೆ ನೀಡಿದ್ದಾರೆ.

ಕೆಪಿಸಿಸಿ ಅಧ್ಯಕ್ಷಗಾದಿ ಡಿಕೆ-ಜಾರಕಿ ಜಟಾಪಟಿ

- ಕೆಪಿಸಿಸಿ ಡಿಶುಂ, ಡಿಶುಂ...!
- ಹೈಕಮಾಂಡ್‌ಗೆ ಸತೀಶ್ ಜಾರಕಿಹೊಳಿ ಡಿಮ್ಯಾಂಡ್
- ಸಿದ್ದರಾಮಯ್ಯ ನಮಗೆ ಬೇಕೇ ಬೇಕು,
- ಮುಂದಿನ ನಾಯಕತ್ವ ಬೆಳೆಸೋವರೆಗೆ ಇರಬೇಕು:
- ಕೆಪಿಸಿಸಿ ಪಟ್ಟದ ಜೊತೆಗೆ ಆ ಸ್ಥಾನಕ್ಕೆ ಹೈಕಮಾಂಡ್ ಬಳಿ ಡಿಮ್ಯಾಂಡ್ ಇಟ್ಟ ಸತೀಶ್ ಜಾರಕಿಹೊಳಿ
- ಕಾಂಗ್ರೇಸ್‌ನಲ್ಲಿ ನಿಲ್ಲದ ಕೆಪಿಸಿಸಿ ಅಧ್ಯಕ್ಷ ಸ್ಥಾನದ ಫೈಟ್

• ಉದಯವಾಹಿನಿ, ಬೆಂಗಳೂರು

ರಾಜ್ಯ ಕಾಂಗ್ರೇಸ್‌ನಲ್ಲಿ ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಕುರಿತು ದಲಿತ ನಾಯಕರೆಲ್ಲಾ ಒಂದಾದಂತೆ ಕಾಣುತ್ತಿದೆ. ಕೆಪಿಸಿಸಿ ಹಾಲಿ ಅಧ್ಯಕ್ಷರಾದ ಡಿಕೆ ಶಿವಕುಮಾರ್ ಅವರ ವಿರುದ್ಧ ಕಾಂಗ್ರೇಸ್ ಹಲವು ಸಚಿವರು ಹಾಗೂ ದಲಿತ ನಾಯಕರು ಮುಂದಾಗಿದ್ದು, ಹೈಕಮಾಂಡ್ ಮುಂದೆ ಸಚಿವ ಸತೀಶ್ ಜಾರಕಿಹೊಳಿ ಎರಡು ಬೇಡಿಕೆಯನ್ನ ಇಟ್ಟಿದ್ದಾರೆ. ಈಗಾಗಲೇ ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ್ ಖರ್ಗೆ ಅವರನ್ನ ನವದೆಹಲಿಯಲ್ಲಿ ಸಹಕಾರ ಸಚಿವ ಕೆ.ಎನ್ ರಾಜಣ್ಣ ಹಾಗೂ ಸಚಿವ ಸತೀಶ್ ಜಾರಕಿಹೊಳಿ ಅವರು ಭೇಟಿಯಾಗಿದ್ದು, ರಾಜ್ಯ ರಾಜಕೀಯದ ಕುರಿತು ಸುಧೀರ್ಘವಾಗಿ ಚರ್ಚೆ ನಡೆಸಿದ್ದಾರೆ. ಈ ವೇಳೆ ಸಚಿವ ಸತೀಶ್ ಜಾರಕಿಹೊಳಿ ಅವರು ಹೈಕಮಾಂಡ್ ಮುಂದೆ ಎರಡು ಬೇಡಿಕೆ ಇಟ್ಟಿದ್ದಾರೆ.

ಸಚಿವ ಸತೀಶ್ ಜಾರಕಿಹೊಳಿ ಅವರು ಕೂಡ ಮೂರು ವರ್ಷ ಮಂತ್ರಿ ಸ್ಥಾನದ ಜೊತೆಗೆ ಕೆಪಿಸಿಸಿ ಅಧ್ಯಕ್ಷ ನಿಭಾಯಿಸುತ್ತೇನೆ ಎಂದು ಬೇಡಿಕೆ ಇಟ್ಟಿದ್ದಾರೆ. ಡಿಕೆಶಿವಕುಮಾರ್ ಅವರಂತೆ ನನಗೂ ಸಹ ಕೆಪಿಸಿಸಿ ಅಧ್ಯಕ್ಷ ಸ್ಥಾನ ಹಾಗೂ ಸಚಿವ ಸ್ಥಾನದ ಜವಾಬ್ದಾರಿಯನ್ನ ನೀಡಿ ಎಂದು ಸತೀಶ್ ಜಾರಕಿಹೊಳಿ ಅವರು ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ್ ಖರ್ಗೆ ಅವರ ಬಳಿ ತಿಳಿಸಿದ್ದಾರೆ. ಕಳೆದ ಲೋಕಸಭಾ ಚುನಾವಣೆಯ ಸಂದರ್ಭದಲ್ಲೇ ಸಚಿವ ಸತೀಶ್ ಜಾರಕಿಹೊಳಿ ಅವರು ಕೆಪಿಸಿಸಿ ಅಧ್ಯಕ್ಷ ಸ್ಥಾನದ ಮೇಲೆ ಕಣ್ಣಿಟ್ಟಿದ್ರು. ಆಗ ಕಾಂಗ್ರೇಸ್ ವರಿಷ್ಠರು ಲೋಕಸಭಾ ಚುನಾವಣೆಯ ಬಳಿಕ ಅಧ್ಯಕ್ಷರ ಬದಲಾವಣೆ ಮಾಡಲಾಗುವುದು ಎಂದು ಹೇಳಿತ್ತು. ಇದೀಗ ಲೋಕಸಭಾ ಚುನಾವಣೆ ಮುಗಿದು ಹಲವು ತಿಂಗಳುಗಳೇ ಕಳೆದಿದ್ದು, ಇದೀಗ ಕೆಪಿಸಿಸಿ ಅಧ್ಯಕ್ಷರ ಬದಲಾವಣೆಗೆ ಸಚಿವ ಸತೀಶ್ ಜಾರಕಿಹೊಳಿ ಪಟ್ಟು ಹಿಡಿದಿದ್ದಾರೆ. ಕಳೆದ ವಾರ ದೆಹಲಿ ವರಿಷ್ಠರನ್ನ ಭೇಟಿಯಾದ ಸತೀಶ್ ಜಾರಕಿಹೊಳಿ ಅವರು, ಈ ಎರಡು ಬೇಡಿಕೆಯನ್ನ ಇಟ್ಟಿದ್ದಾರೆ ಎಂದು ತಿಳಿದು ಬಂದಿದೆ.



1. 'ಕೈ'ಯಲ್ಲಿ ಮತ್ತೆ ಪೂರ್ಣಾವಧಿ ಸಿಎಂ ಚರ್ಚೆ; ದೇವರಾಜ ಅರಸು ದಾಖಲೆ ಮುರೀತಾರಾ ಸಿದ್ದು...?
2. KPCC ಅಧ್ಯಕ್ಷರ ಬದಲಾವಣೆ ಅಷ್ಟು ಸುಲಭವಲ್ಲ: ಡಿಕೆಶಿ
3. ಚುನಾವಣೆಗೆ ನಿಲ್ಲದಿದ್ದರೂ ಸರಿಯೇ, ಸಿದ್ದರಾಮಯ್ಯ ರಾಜಕಾರಣದಲ್ಲಿರಬೇಕು ಎಂದು ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ.

ದಲಿತ ಮುಖ್ಯಮಂತ್ರಿ ಪ್ರಸ್ತಾಪ ಅನಾವಶ್ಯಕ

ರಾಜ್ಯದಲ್ಲಿ ಯಾರು ಮುಖ್ಯಮಂತ್ರಿ ಆಗಬೇಕು, ಯಾರು ಉಪ ಮುಖ್ಯಮಂತ್ರಿಯಾಗಬೇಕು ಮತ್ತು ಕೆಪಿಸಿಸಿ ಅಧ್ಯಕ್ಷರಾಗಬೇಕು ಎಂಬ ಕುರಿತು 2023ರ ಮೇ 18ರಂದು ಎಐಸಿಸಿ ಹೊರಡಿಸಿರುವ ನೋಟಿಫಿಕೇಶನ್‌ನಲ್ಲಿ ಪ್ರಸ್ತಾಪಿಸಲಾಗಿದೆ. ಇದನ್ನು ಸ್ಪಷ್ಟಪಡಿಸಬೇಕೆಂದು ಹೈಕಮಾಂಡ್ ಗಮನಕ್ಕೆ ತಂದಿದ್ದೇನೆ ಎಂದು ಸಹಕಾರ ಸಚಿವ ಕೆ. ಎನ್. ರಾಜಣ್ಣ ತಿಳಿಸಿದ್ದಾರೆ. ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ಕಾಂಗ್ರೇಸ್ ಮುಖಂಡರ ಬಳಿ ದೆಹಲಿಯಲ್ಲಿ ಇದನ್ನು ಪ್ರಸ್ತಾಪಿಸಿದ್ದೇನೆ. ಅವರ ಪ್ರತಿಕ್ರಿಯೆಗಾಗಿ ನಾನು ಕಾಯುತ್ತಿದ್ದೇನೆ ಎಂದರು.

ಈ ಕುರಿತು ಮಾಧ್ಯಮಗಳ ಜೊತೆಗೆ ಸಚಿವ ಸತೀಶ್ ಜಾರಕಿಹೊಳಿ ಅವರು ಮಾತನಾಡಿ, ಸಚಿವ ಸ್ಥಾನದ ಜೊತೆಗೆ ಅಧ್ಯಕ್ಷ ಸ್ಥಾನ ನೀಡಿದರೆ ನಿಭಾಯಿಸುತ್ತೇನೆ ಎಂದು ತಿಳಿಸಿದ್ದಾರೆ. ಡಿಕೆ ಶಿವಕುಮಾರ್ ರೀತಿ ನನಗೂ ಕೂಡ ಕೆಪಿಸಿಸಿ ಅಧ್ಯಕ್ಷ ಸ್ಥಾನ ನೀಡಿ. ಮೂರು ವರ್ಷ ಮಂತ್ರಿ ಸ್ಥಾನದ ಜೊತೆಗೆ ಅಧ್ಯಕ್ಷ ಗಾದಿಯನ್ನು ಸಹ ನಿಭಾಯಿಸುತ್ತೇನೆ ಪಕ್ಷದ ಸಾರಥ್ಯಕ್ಕೆ ನಾನು ರೆಡಿ ಅಂತ ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ.

ಸಿದ್ದರಾಮಯ್ಯ ಸಿಎಂ ಆಗಿ ಮುಂದುವರೆದ್ರೆ ಒಳ್ಳೆಯದೇ ಎಂದು ಸಚಿವ ಸತೀಶ್ ಜಾರಕಿಹೊಳಿ ಹೇಳಿದರು. ಕೆಪಿಸಿಸಿ ಅಧ್ಯಕ್ಷರ ಆಯ್ಕೆ ವಿಚಾರ ಯಥಾಸ್ಥಿತಿ ಹಾಗೇ ಇದೆ ನಮ್ಮ ಕೈಯಲ್ಲಿ ಏನು ಇಲ್ಲ ಹೈಕಮಾಂಡ್ ನಿರ್ಧಾರ ಎಂದು ಹೇಳಿದರು. ಎಲ್ಲಾರ ಅಭಿಮಾನಿಗಳು ಅವರವ ನಾಯಕ ಸಿಎಂ ಆಗಬೇಕು ಎಂದು ಹೇಳುತ್ತಾರೆ, ಹಾಗೆ ನಮ್ಮ ಅಭಿಮಾನಿಗಳು ನಾನು ಸಿಎಂ ಆಗಬೇಕು ಅಂತ ಹೇಳ್ತಾರೆ ಅದರಲ್ಲಿ ತಪ್ಪೇನು ಇಲ್ಲ, ಅಧ್ಯಕ್ಷ ಸ್ಥಾನದ ಬದಲಾವಣೆ ಬಗ್ಗೆ ಖರ್ಗೆಯವರೇ ಹೇಳಿದ್ದಾರೆ, ಮುಂದಿನ ದಿನಗಳಲ್ಲಿ ಚರ್ಚೆ ಮಾಡುತ್ತೇವೆ, ಬದಲಾವಣೆ ಆಗಬಹುದು ಎಂದು ಹೇಳಿದರು. ಕೆಪಿಸಿಸಿ ಅಧ್ಯಕ್ಷ ಸ್ಥಾನದ ವಿಚಾರದಲ್ಲಿ ಕೆಸಿ ವೇಣುಗೋಪಾಲ, ಸುರ್ಜೆವಾಲಾ ಜೊತೆಗೆ ಮಾತನಾಡಿದ್ದು, ಮಂತ್ರಿ ಸ್ಥಾನದ ಜೊತೆಗೆ ಅಧ್ಯಕ್ಷ ಸ್ಥಾನ ನೀಡಲು ಹೈಕಮಾಂಡ್ ಹಿಂದೇಟು ಹಾಕುತ್ತಿದ್ದಾರೆ. ಒನ್ ಮ್ಯಾನ್ ಒನ್ ಪೋಸ್ಟ್ ವಿರುದ್ಧ ನಿರ್ಣಯಿಸಲ್ಲ. ಉದಯಪುರ ಡಿಕ್ಲರೇಷನ್ ಗೆ ವಿರುದ್ಧವಾಗಿ ನಿರ್ಧಾರ ಇಲ್ಲ ಅದು ಕಷ್ಟ ಸಾಧ್ಯ ಎಂದು ಹೈಕಮಾಂಡ್ ನಾಯಕರು ತಿಳಿಸಿದ್ದಾರೆ. ಈ ಬಗ್ಗೆ ರಾಹುಲ್ ಗಾಂಧಿ ಜೊತೆಗೆ ಚರ್ಚಿಸಿ ಮುಂದಿನ ನಿರ್ಧಾರ ತಿಳಿಸುವುದಾಗಿ ಹೈಕಮಾಂಡ್ ಸಚಿವ ಸತೀಶ್ ಜಾರಕಿಹೊಳಿ ಅವರಿಗೆ ಹೇಳಿದೆ.

ಕುತೂಹಲ ಮೂಡಿಸಿದ ಡಿಕೆಶಿ-ಸಿಎಂ ಭೇಟಿ

ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕಾಗಿ ದಲಿತ ಸಚಿವರ ಬೇಡಿಕೆ ಬೆನ್ನಲ್ಲೇ, ಡಿ.ಕೆ.ಶಿವಕುಮಾರ್ ನಿನ್ನೆ ರಾತ್ರಿ ಸಿಎಂ ಸಿದ್ದರಾಮಯ್ಯರನ್ನು ಭೇಟಿಯಾ

ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ

ಪ್ರಯಾಗರಾಜ್‌ನ ಕುಂಭ ಚಿತ್ರಣ

ಗಂಗಾ ಯಮುನಾ ಸರಸ್ವತೀ ನದಿಗಳು ಹರಿದು ಕೂಡುವ ಈ ಪ್ರದೇಶ ಬಹಳ ವಿಸ್ತಾರ. ನದೀತಟದ ಒಳಹೊರಗೆ ಅನೇಕ ಶಾಶ್ವತ ಹಾಗೂ ತಾತ್ಕಾಲಿಕ ವಿಸ್ತಾರ ರಸ್ತೆಗಳು. ರಸ್ತೆಗಳ ಇಕ್ಕೆಲಗಳಲ್ಲಿ ಧರ್ಮಚ್ಛತ್ರ ಆಶ್ರಮ ದೇವಸ್ಥಾನಗಳು. ನಾಗಾ ಸಾಧು ಸಂತರ ಬಿಡಾರಗಳು. ಅಂಗಡಿ ಮುಂಗಟ್ಟು ಚಿಕಿತ್ಸಾ ಪರಿಹಾರ ಕೇಂದ್ರಗಳು. ಪ್ರೇರಣೆ ನೀಡಬಲ್ಲ ಸನಾತನ ಗರ್ವ ಮಹಾಕುಂಭ ಪರ್ವ ಮುಂತಾದ ಘೋಷವಾಕ್ಯದ, ಮೋದಿ-ಯೋಗಿ ಚಿತ್ರಸಹಿತ ಬ್ಯಾನರ್ ಗಳು. ವೇದಮಂತ್ರ ಗುರು-ದೇವತಾಸ್ತೋತ್ರ ಭಜನೆಗಳ ನಿರಂತರ ನಿನಾದ. ಹಗಲು ರಾತ್ರಿ ಹರಿದು ಬರುವ ಹೋಗುವ ಜನಸಾಗರ. ಹರ ಹರ ಮಹಾದೇವ ಹರ ಹರ ಗಂಗೆ! ಜೈ ಸೀತಾರಾಂ ಜಯಘೋಷ ಅಲ್ಲಲ್ಲಿ ಸಾಕಷ್ಟು ಸಂಖ್ಯೆಯ ಭೂದಳ ಜಲದಳ ವಾಯುದಳ ರಕ್ಷಣಾ ಸಿಬ್ಬಂದಿ. ಹಿಂದು ನಾವಿಲ್ಲಿ ಸುಭದ್ರ ಎಂಬ ಭಾವ. ಲೆಕ್ಕವಿಲ್ಲದ ಸಾರ್ವಜನಿಕ ಶೌಚಾಲಯ. ಶೌಚಾಲಯದ ಕೊಳೆ ಗಂಗೆ ಸೇರದಂಥ ಅದ್ಭುತ ವ್ಯವಸ್ಥೆ. ಅಲ್ಲಲ್ಲಿ ಉಚಿತ ಅನ್ನಸೇವಾ ಕೇಂದ್ರಗಳು. ಲೆಕ್ಕವಿಲ್ಲದ ಸ್ನಾನ ಕೇಂದ್ರ - ಘಾಟ್‌ಗಳು. ಅಲ್ಲಿ ಸುಂದರ ವಿಸ್ತಾರ ಮೆಟ್ಟಿಲು ಸಾಲು ಸಾಲು, ವಿಶ್ರಾಂತಿ ಗೋಪುರ ವಸ್ತ್ರಬದಲಿಸುವ ಕೋಣೆಗಳು. ನದಿಯಲ್ಲಿ ನೌಕೆ ತೀರದಲ್ಲಿ ಭಕ್ತ ಸಾಗರ. ಗಂಡು ಹೆಣ್ಣು ಅವರಿವರೆನ್ನದೇ ದೇಹಭಾವ ಕಾಮಭಾವ ಬಿಟ್ಟು ಭಕ್ತಿ ಭಾವದಿಂದ ತೀರ್ಥದಲ್ಲಿ ಮಿಂದೆದ್ದು ಪ್ರಾರ್ಥಿಸುವ ದಿವ್ಯಾತ್ಮರು! ಇದು ಹಿಂದುಗಳ ವಿಶ್ವದಾಖಲೆಯ ಧಾರ್ಮಿಕ ಹಬ್ಬ. ಪ್ರಪಂಚದ ಯಾವ ಧರ್ಮದಲ್ಲೂ ಇಂಥ ಹಬ್ಬ ನಡೆಯದು. ಮುಳುಗುವ ಉದಯಸ್ಟಾಲಿನ್ ಅವರಿವರ ಸನಾತನ ಧರ್ಮದ ಟೀಕೆಗೆ ಇದು ಸವಾಲು. ಸನಾತನ ಧರ್ಮ ಅಮರ ಹೈ.

ನದಿ ಜೋಡಣೆಗೆ ಎಲ್ಲರೂ ಧ್ವನಿ ಎತ್ತಲಿ

• **ಉದಯವಾಹಿನಿ ಬೆಂಗಳೂರು**

ನಗರದ ಶೇಷಾದ್ರಿಪುರಂನ ಜೆಡಿಎಸ್ ಪಕ್ಷದ ಕಚೇರಿಯಲ್ಲಿ ನಡೆದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡುತ್ತಿರುವ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ, ಮಾಜಿ ಸಂಸದ ಕುಪೇಂದ್ರರೆಡ್ಡಿ ಶಾಸಕ ಸುರೇಶ್ ಬಾಬು, ಎಂಎಲ್‌ಸಿ ಟಿ.ಎ. ಶರವಣ, ಮಾಜಿ ಶಾಸಕ ಪುಟ್ಟರಾಜು, ಮಾಜಿ ಎಂಎಲ್‌ಸಿ ರಮೇಶ್ ಗೌಡ ಉಪಸ್ಥಿತರಿದ್ದರು. ಬೆಂಗಳೂರು, ಫೆ. 15 - ರಾಜ್ಯದಲ್ಲಿ ಗೋದಾವರಿ, ಕೃಷ್ಣ, ಕಾವೇರಿ ನದಿ ಜೋಡಣೆ ಆಗಲೇಬೇಕಿದೆ. ಈ ಬಗ್ಗೆ ಎಲ್ಲರೂ ಧ್ವನಿ ಎತ್ತಿ ಹೋರಾಟಕ್ಕೆ ಮುಂದಾಗಬೇಕು ಎಂದು ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ ಅವರು ಹೇಳಿದರು. ಬೆಂಗಳೂರಿನ ಜೆಡಿಎಸ್ ಕಚೇರಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯಸಭೆಯಲ್ಲಿ ಗೋದಾವರಿ, ಕೃಷ್ಣ, ಕಾವೇರಿ ನದಿ ಜೋಡಣೆ ಬಗ್ಗೆ ತಮಿಳುನಾಡಿನ ರಾಜ್ಯಸಭಾ ಸದಸ್ಯರು ಸೇರಿದಂತೆ ಎಲ್ಲರೂ ಧ್ವನಿ ಎತ್ತಿದ್ದೇವೆ. ಗೋದಾವರಿ, ಕೃಷ್ಣ, ಕಾವೇರಿ ನದಿ ಜೋಡಣೆ ಆಗಲೇಬೇಕಿದೆ ಎಂದರು ರಾಜ್ಯದ ಹಲವು ಜಿಲ್ಲೆಗಳು ನೀರಿನ ಬರ ಎದುರಿಸುತ್ತಿವೆ. ಇದನ್ನು ತಪ್ಪಿಸಲು ನದಿ ಜೋಡಣೆಯೇ ಮದ್ದು, ನಾನು ನೀರಾವರಿ ಸಚಿವನಾಗಿದ್ದಾಗಿನಿಂದಲೂ ನದಿ ಜೋಡಣೆ ಬಗ್ಗೆ ಹೋರಾಟ ನಡೆಸಿದ್ದೇನೆ. ಪ್ರಧಾನಿ ಮೋದಿ ಅವರಿಗೂ ಪತ್ರ ಬರೆದಿದ್ದೇನೆ ಎಂದರು.

ಇಂಧನ ಪ್ರಾತ್ಯಕ್ಷತೆ ಮಳಿಗೆ ಆಯೋಜನೆ

• **ಉದಯವಾಹಿನಿ ಬೆಂಗಳೂರು**

ಇನ್ವೆಸ್ಟ್ ಕರ್ನಾಟಕ, ಜಾಗತಿಕ ಹೂಡಿಕೆದಾರರ ಸಮಾವೇಶ 2025 ದಲ್ಲಿ ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ ಜೈವಿಕ ಇಂಧನ ಕ್ಷೇತ್ರದಲ್ಲಿ ಮಂಡಳಿ ಕಳೆದ ಒಂದು ದಶಕದಲ್ಲಿ ಅನುಷ್ಠಾನಗೊಳಿಸಿರುವ ಕಾರ್ಯ ಯೋಜನೆಗಳು ಹಾಗೂ ಮಂಡಳಿಯು ಮುಂದಿನ ದಿನಗಳಲ್ಲಿ ರೂಪಿಸಲಿರುವ ಜೈವಿಕ ಇಂಧನ ಕಾರ್ಯ ಯೋಜನೆಗಳ ಪ್ರಾತ್ಯಕ್ಷಿಕೆ ಮಳಿಗೆಯನ್ನು ಆಯೋಜಿಸಿದೆ. ಈ ಸಮಾವೇಶದ ಸಮಾರೂಪ ಸಮಾರಂಭದಲ್ಲಿ ಭಾಗಿಯಾಗಿದ್ದ ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಾದ ಪ್ರಿಯಾಂಕ್ ಖರ್ಗೆ, ಲೋಕಸಭಾ ಸದಸ್ಯ ಶಶಿ ತರೂರ್, ಶಾಸಕರು ಹಾಗೂ ಕಿಯೋನಿಕ್ಸ್ ಅಧ್ಯಕ್ಷರಾದ ಶರತ್ ಬಚ್ಚೇಗೌಡ ಅವರು ಮಂಡಳಿಯ ಮಳಿಗೆಗೆ ಭೇಟಿ ನೀಡಿದರು. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಮಂಡಳಿಯ ಜೈವಿಕ ಇಂಧನ ಕಾರ್ಯಯೋಜನೆಗಳಾದ ಬಯೋ ಡೀಸೆಲ್, ಬಯೋ ಬ್ರಿಕೇಟ್, ಪೈಲೆಟ್, ಕಂಪ್ರೆಸ್ಟ್ ಬಯೋ ಗ್ಯಾಸ್ ಮುಂತಾದವುಗಳ ಕುರಿತು ಶಶಿ ತರೂರ್ ಅವರಿಗೆ ಪರಿಚಯ ಮಾಡಿಕೊಟ್ಟರು. ಮಂಡಳಿಯ ಅಧ್ಯಕ್ಷ ಎಸ್ ಈ ಸುಧೀಂದ್ರ ಅವರು ಮಂಡಳಿಯ ಜೈವಿಕ ಇಂಧನ ಕಾರ್ಯ ಯೋಜನೆಗಳು ಹಾಗೂ ಮುಂದಿನ ದಿನಗಳಲ್ಲಿ ಮಂಡಳಿಯು ಕೈಗೊಳ್ಳಲಿರುವ ಉನ್ನತೀಕರಣ ಹಾಗೂ ವಾಣಿಜೀಕರಣ ಕಾರ್ಯಯೋಜನೆಗಳ ಕುರಿತು ವಿವರಿಸಿದರು.

ಚರಂಡಿ ಅಭಿವೃದ್ಧಿ ಕಾಮಗಾರಿಗೆ ಚಾಲನೆ

• **ಉದಯವಾಹಿನಿ ಕೆ.ಆರ್.ಪುರ,**

ಮಹದೇವಪುರ ಕ್ಷೇತ್ರದ ಬಿದರಹಳ್ಳಿ ಪಂ. ವ್ಯಾಪ್ತಿಯಲ್ಲಿ ಬರುವ ಎಸ್. ಸಿ. ಕಾಲೋನಿಗಳ ರಸ್ತೆ ಮತ್ತು ಚರಂಡಿ ಅಭಿವೃದ್ಧಿ ಕಾಮಗಾರಿಗೆ ಶಾಸಕಿ ಮಂಜುಳಾ ಅರವಿಂದ ಲಿಂಬಾವಳಿ ಅವರು ಚಾಲನೆ ನೀಡಿದರು. ಚಾಲನೆ ನೀಡಿ ಮಾತನಾಡಿದ ಶಾಸಕಿ ಮಂಜುಳಾ ಅರವಿಂದ ಲಿಂಬಾವಳಿ ಅವರು ಗ್ರಾ.ಪಂ. ವ್ಯಾಪ್ತಿಯಲ್ಲಿ ಬರುವ ಎಸ್ ಸಿ ಸಮುದಾಯದ ನಿವಾಸಿಗಳು ವಾಸಿಸುವ ಕಾಲೋನಿಗಳ ಅಭಿವೃದ್ಧಿ ಮಾಡುವ ಉದ್ದೇಶದಿಂದ ಚರಂಡಿ, ರಸ್ತೆಗಳು, ಸ್ಮಶಾನದ ರಸ್ತೆಗಳನ್ನ ಅಭಿವೃದ್ಧಿ ಮಾಡುತ್ತಿದ್ದು ಮುಂದಿನ ದಿನಗಳಲ್ಲಿ ಎಸ್ ಸಿ ಕಾಲೋನಿ ಜನ ಏಳಿಗೆ ಶ್ರಮಿಸುವುದಾಗಿ ತಿಳಿಸಿದರು. ಕ್ಷೇತ್ರದ ಸಮಗ್ರ ಅಭಿವೃದ್ಧಿ ನಮ್ಮ ಗುರಿಯಾಗಿದ್ದು ಬಿದರಹಳ್ಳಿ ಹೋಬಳಿಗೆ ಹೆಚ್ಚು ಅನುದಾನ ನೀಡಿ ಮತ್ತಷ್ಟು ಅಭಿವೃದ್ಧಿ ಪಡಿಸುವುದಾಗಿ ನುಡಿದರು. ಬಿದರಹಳ್ಳಿ ಗ್ರಾಮ ಪಂಚಾಯತಿಯ ಮಾರಗೊಂಡನಹಳ್ಳಿ ಗ್ರಾಮದ ಎಸ್ ಸಿ ಕಾಲೋನಿ, ಕನ್ನಮಂಗಲ ಗ್ರಾಮದ ಎಸ್ ಸಿ ಕಾಲೋನಿ, ದೊಡ್ಡ ಬನ ಹಳ್ಳಿ ಗ್ರಾ.ಪಂಚಾಯತಿ ಎಸ್.ಸಿ ಕಾಲೋನಿಗಳಲ್ಲಿ ರಸ್ತೆ, ಚರಂಡಿ ಅಭಿವೃದ್ಧಿ ಕಾಮಗಾರಿಗೆ ಚಾಲನೆ ಕಿತ್ತಗನೂರು ಗ್ರಾಮದ ಎಸ್ ಸಿ ಸಮುದಾಯದ ಸ್ಮಶಾನ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಪೂಜೆಯನ್ನು ಮಾಡುವ ಮೂಲಕ ಚಾಲನೆ ನೀಡಲಾಯಿತು.

9 ವಿವಿಗೆ ಬೀಗ, ಬಿಜೆಪಿ ವಿರೋಧ

ಯಾವುದೇ ಕಾರಣಕ್ಕೂ ಈ ವಿಶ್ವವಿದ್ಯಾನಿಲಯಗಳನ್ನು ಬಂದ್ ಮಾಡದಂತೆ ಒತ್ತಾಯ

• **ಉದಯವಾಹಿನಿ ಬೆಂಗಳೂರು**

ರಾಜ್ಯದ ಮಂಡ್ಯ ವಿಶ್ವವಿದ್ಯಾನಿಲಯ ಸೇರಿದಂತೆ 9 ವಿಶ್ವ ವಿದ್ಯಾನಿಲಯಗಳನ್ನು ಮುಚ್ಚಲು ಹೊರಟಿರುವ ರಾಜ್ಯ ಸರ್ಕಾರದ ನಿರ್ಧಾರಕ್ಕೆ ಬಿಜೆಪಿ ವಿರೋಧ ವ್ಯಕ್ತಪಡಿಸಿದ್ದು, ಯಾವುದೇ ಕಾರಣಕ್ಕೂ ಈ ವಿಶ್ವವಿದ್ಯಾನಿಲಯಗಳನ್ನು ಬಂದ್ ಮಾಡದಂತೆ ಒತ್ತಾಯಿಸಿದೆ. ವಿಧಾನಸೌಧದಲ್ಲಿಂದು ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಪ್ರತಿಪಕ್ಷ ನಾಯಕರಾದ ಆರ್. ಅಶೋಕ್ ಮತ್ತು ಛಲವಾದಿ ನಾರಾಯಣಸ್ವಾಮಿ ಅವರು, ಬಿಜೆಪಿ ಅವಧಿಯಲ್ಲಿ ವಿಶ್ವವಿದ್ಯಾನಿಲಯಗಳನ್ನು ಆರಂಭಿಸಲಾಗಿತ್ತು. ಆ ಕಾರಣಕ್ಕೆ ವಿಶ್ವವಿದ್ಯಾನಿಲಯಗಳನ್ನು ಮುಚ್ಚಲು ಕಾಂಗ್ರೇಸ್ ಸರ್ಕಾರ ಹೊರಟಿರುವುದು ಸರಿಯಲ್ಲ. ಬಿಜೆಪಿ ಅಧಿಕಾರದಲ್ಲಿದ್ದಾಗ ಈ ರೀತಿ ಎಂದೂ ಮಾಡಿಲ್ಲ ಎಂದರು. ಮಂಡ್ಯ ವಿಶ್ವವಿದ್ಯಾನಿಲಯವನ್ನು ಬಂದ್ ಮಾಡಿ ಅಲ್ಲಿ ಜಲಕ್ರೀಡೆಗೆ ಅವಕಾಶ ಕೊಡಲು ಮುಂದಾಗಿರುವುದಕ್ಕೂ ಕಿಡಿಕಾರಿದ ಇವರಿಬ್ಬರು, ಸರ್ಕಾರ ಇರುವುದು ರಿಯಲ್ ಎಸ್ಟೇಟ್ ಮಾಡಲಿಕ್ಕಲ್ಲ ಎಂದು ವಾಗ್ದಾಳಿ ನಡೆಸಿದರು.

ರಿಯಲ್ ಎಸ್ಟೇಟ್ ಮಾಡಲಿಕಲ್ಲ ವಾಗ್ದಾಳಿ

ಸರ್ಕಾರಕ್ಕೆ ಶಿಕ್ಷಣ, ಆರೋಗ್ಯ ಇದ್ಯಾವುದೂ ಮುಖ್ಯ ಆಗುತ್ತಿಲ್ಲ, ವಿವಿಗಳನ್ನು ಮುಚ್ಚಲು ಹೊರಟಿರುವುದು ಸರಿಯಲ್ಲ. ವ್ಯಾಪಾರ ಆಗುತ್ತಿಲ್ಲ, ಆದಾಯ ಬರುತ್ತಿಲ್ಲ ಎಂದು ವಿಶ್ವವಿದ್ಯಾನಿಲಯಗಳನ್ನು ಮುಚ್ಚಲು ಹೊರಟಿದ್ದಾರೆ. ಇದೇನು ರಿಯಲ್ ಎಸ್ಟೇಟ್ ಸರ್ಕಾರವೇ ಎಂದು ಪ್ರಶ್ನಿಸಿದರು.



ಯಾವುದೇ ಕಾರಣಕ್ಕೂ 9 ವಿಶ್ವವಿದ್ಯಾನಿಲಯಗಳನ್ನು ಬಂದ್ ಮಾಡಬಾರದು. ವಿವಿಗಳಿಗೆ ಅಗತ್ಯವಾದ 342 ಕೋಟಿ ರೂ.ಗಳನ್ನು ಕೊಡಬೇಕು. 4 ಲಕ್ಷ ಕೋಟಿ ಬಜೆಟ್ ಮಂಡನೆ ಮಾಡಲು ಹೊರಟಿರುವ ಸರ್ಕಾರಕ್ಕೆ ವಿಶ್ವವಿದ್ಯಾಲಯಗಳಿಗೆ 342 ಕೋಟಿ ರೂ. ಕೊಡುವ ಯೋಗ್ಯತೆ ಇಲ್ಲವೇ ಎಂದು ಪ್ರಶ್ನಿಸಿದರು. ವಿಶ್ವವಿದ್ಯಾಲಯ ಬದಲು 300 ಬಾರ್‌ಗಳನ್ನು ಬಂದ್ ಮಾಡಲಿ ನೋಡೋಣ ಎಂದು ಸವಾಲು ಹಾಕಿದ ಇವರು, ಮಾನವ ಸಂಪನ್ಮೂಲ ಸಿಗುತ್ತದೆ ಎಂದು ಬಂಡವಾಳ ಹೂಡಿಕೆದಾರರು ರಾಜ್ಯದಲ್ಲಿ ಹೂಡಿಕೆ ಮಾಡಲು ಬರುತ್ತಾರೆ. ಇವರನ್ನು ನೋಡಿದರೆ ವಿಶ್ವವಿದ್ಯಾಲಯಗಳನ್ನು ಮುಚ್ಚುತ್ತಿದ್ದಾರೆ. ಹೀಗಾದರೆ ಹೂಡಿಕೆ ಹೇಗೆ ಸಾಧ್ಯ ಎಂದು ಪ್ರಶ್ನಿಸಿದರು. ವಿಶ್ವವಿದ್ಯಾಲಯಗಳಲ್ಲಿ ರೈತರ ಮಕ್ಕಳು ಓದುತ್ತಿದ್ದಾರೆ. ಮಂಡ್ಯದಲ್ಲಿ ರೈತರ ಮಕ್ಕಳಿಗೆ ಅನೂಕೂಲವಾಗಲಿ ಎಂದೇ ವಿಶ್ವವಿದ್ಯಾಲಯ ಸ್ಥಾಪಿಸಲಾಗಿತ್ತು. ಅಲ್ಲಿ ಈಗ ವಿಶ್ವವಿದ್ಯಾಲಯ ಬಂದ್ ಮಾಡಿ ಜಲಕ್ರೀಡೆಗೆ 1 ಸಾವಿರ ಕೋಟಿ ರೂಪಾಯಿ ಕೊಡಲು ಸರ್ಕಾರ ಹೊರಟಿದೆ. ಇದು ಸರಿಯಲ್ಲ ಎಂದು ಟೀಕಿಸಿದರು. ಬೇರೆ ದೇಶಗಳಿಂದ ರಾಜ್ಯಕ್ಕೆ ಬಂದು ಓದುತ್ತಿದ್ದಾರೆ. ಸಿದ್ದರಾಮಯ್ಯ ಸರ್ಕಾರ ವಿಶ್ವವಿದ್ಯಾಲಯಗಳನ್ನು ಮುಚ್ಚಲು ಹೊರಟಿದೆ. ಇದೊಂದು ಮನೆ ಹಾಳು ಸರ್ಕಾರ, ಮಾರಿಕಣ್ಣು ಹೋರಿ ಮೇಲೆ ಎನ್ನುವ ಹಾಗೆ ಸಿದ್ದರಾಮಯ್ಯ ಕಣ್ಣು ಈಗ ವಿಶ್ವವಿದ್ಯಾಲಯಗಳ ಮೇಲೆ ಬಿದ್ದಿದೆ ಎಂದು ಹರಿಹಾಯ್ದರು. ಸುದ್ದಿಗೋಷ್ಠಿಯಲ್ಲಿ ಮಾಜಿ ಡಾ. ಸಿ.ಎನ್. ಅಶ್ವತ್ಥನಾರಾಯಣ ಉಪಸ್ಥಿತರಿದ್ದರು.

ಗಲಭೆ ಪೂರ್ವ ಯೋಜಿತ

ಮೈಸೂರಿನ ಉದಯಗಿರಿ ಪೊಲೀಸ್ ಠಾಣೆ ಮುಂದೆ ನಡೆದ ಗಲಭೆ ಪೂರ್ವನಿಯೋಜಿತ. ಪ್ರಚೋದನಕಾರಿ ಭಾಷಣ ಮಾಡಿದ ಮುಲ್ಲಾ ವಿರುದ್ಧ ಇದುವರೆಗೂ ಕ್ರಮ ಆಗಿಲ್ಲ. ಮುಸ್ಲಿಂರ ಖುಣದಲ್ಲಿರುವ ಕಾಂಗ್ರೇಸ್ ಸರ್ಕಾರ ಅವರ ರಕ್ಷಣೆಗೆ ನಿಂತಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ಟೀಕಿಸಿದರು. ಈ ಗಲಭೆಗೆ ಆರ್‌ಎಸ್‌ಎಸ್‌ನವರೇ ಕಾರಣ ಎಂದೆಲ್ಲಾ ಕಾಂಗ್ರೇಸ್ ನಾಯಕರು ಹೇಳುತ್ತಿದ್ದಾರೆ. ಆರ್‌ಎಸ್‌ಎಸ್ ನವರು ಗಡ್ಡ ಹಾಕಿಕೊಂಡು, ಪೈಜಾಮ, ಟೋಪಿ ಹಾಕಿಕೊಂಡು ಎಲ್ಲಿ ಬರುತ್ತಾರೆ. ಸಿಸಿಟಿವಿಯಲ್ಲಿ ಯಾವ ಆರ್‌ಎಸ್‌ಎಸ್ ಬಂದಿದ್ದಾರೆ ಎಂಬುದನ್ನು ತೋರಿಸಲಿ ಎಂದು ಸವಾಲು ಹಾಕಿದ ಅವರು, ಸಿಸಿಟಿವಿಯಲ್ಲಿ ಕಾಣುತ್ತಿರುವವರೆಲ್ಲಾ ದಾಡಿಗಳೇ ಎಂದರು. ಹಿಂದೂಗಳು ಯಾವತ್ತಾದರೂ ಪೊಲೀಸ್ ಠಾಣೆಗೆ ನುಗ್ಗಿ ಗಲಾಟೆ ಮಾಡಿದ್ದಾರಾ, ಪೊಲೀಸ್ ಠಾಣೆಯನ್ನು ಸುಟ್ಟಿದ್ದಾರಾ ಎಂದು ಪ್ರಶ್ನಿಸಿದ ಅವರು, ಕಾಂಗ್ರೇಸ್‌ನವರು ಮುಸ್ಲಿಂರ ಭಿಕ್ಷೆಯಲ್ಲಿದ್ದಾರೆ. ಖುಣ ತೀರಿಸಲು ಗಲಭೆ ಮಾಡಿರುವವರು ಆರ್‌ಎಸ್‌ಎಸ್‌ನವರು, ಕಲ್ಲು ಎಸೆದವರು ಮಕ್ಕಳು ಎಂದೆಲ್ಲಾ ಬುರುಡೆ ಬಿಡುತ್ತಿದ್ದಾರೆ ಎಂದು ಟೀಕಿಸಿದರು. ರಾಜ್ಯ ಸರ್ಕಾರ ಕೂಡಲೇ ಉದಯಗಿರಿ ಗಲಾಟೆಗೆ ಸಂಬಂಧಿಸಿದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದರು.

ಅಪಘಾತದಲ್ಲಿ ಗಾಯಗೊಂಡ ಕುರುಬೂರು ಶಾಂತಕುಮಾರ್

ಉದಯವಾಹಿನಿ ಚಿತ್ರ

• **ಉದಯವಾಹಿನಿ ಬೆಂಗಳೂರು**

ಪಂಜಾಬ್‌ನ ಪಟಿಯಾಲ ಬಳಿ ಸಂಭವಿಸಿದ ರಸ್ತೆ ಅಪಘಾತದಲ್ಲಿ ಕರ್ನಾಟಕ ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ರಾಜ್ಯಾಧ್ಯಕ್ಷ ಕುರುಬೂರ್ ಶಾಂತಕುಮಾರ್ ಗಾಯಗೊಂಡಿದ್ದು, ಪಟಿಯಾಲದ ಆಸ್ಪತ್ರೆಯೊಂದರಲ್ಲಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಆದ್ರೆ, ಕುರುಬೂರ್ ಶಾಂತಕುಮಾರ್ ಅವರನ್ನು ಪಟಿಯಾಲ ಆಸ್ಪತ್ರೆಯಿಂದ ಬೆಂಗಳೂರಿಗೆ ಏರ್ ಲಿಫ್ಟ್ ಲಿಫ್ಟ್ ಮಾಡಲು ಕೇಂದ್ರ ರೈಲ್ವೆ ರಾಜ್ಯ ಖಾತೆ ಸಚಿವ ವಿ.ಸೋಮಣ್ಣ ವ್ಯವಸ್ಥೆ ಮಾಡಿದ್ದಾರೆ. ಅಪಘಾತದಲ್ಲಿ ಶಾಂತಕುಮಾರ್ ಅವರಿಗೆ ಬೆನ್ನುಮೂಳೆಗೆ ತೀವ್ರ ಗಾಯಾವಾಗಿದ್ದು, ಬೆಂಗಳೂರಿನಲ್ಲೇ ಚಿಕಿತ್ಸೆ ಕೊಡಿಸಲು ಶಾಂತಕುಮಾರ್ ಅವರನ್ನು ಏರ್ ಲಿಫ್ಟ್ ಮಾಡಿಸಲು ಸೋಮಣ್ಣ ತೀರ್ಮಾನಿಸಿದ್ದು, ಈ ಸಂಬಂಧ ಸೋಮಣ್ಣ ಅವರು ಈಗಾಗಲೇ ಪಟಿಯಾಲ ಜಿಲ್ಲಾಧಿಕಾರಿ ಜೊತೆ ಮಾತುಕತೆ ನಡೆಸಿದ್ದಾರೆ. ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ರಾಜ್ಯಾಧ್ಯಕ್ಷ ಕುರುಬೂರ್ ಶಾಂತಕುಮಾರ್ ಪ್ರಯಾಣಿಸುತ್ತಿದ್ದ ಕಾರು ನಿನ್ನೆ(ಫೆಬ್ರವರಿ 14) ಪಂಜಾಬ್‌ನ ಪಟಿಯಾಲ ರಸ್ತೆಯಲ್ಲಿ ಡಿವೈಡರ್‌ಗೆ ಡಿಕ್ಕಿಯಾಗಿ ಅಪಘಾತಕ್ಕೀಡಾಗಿತ್ತು. ಈ ಘಟನೆಯಲ್ಲಿ ಕುರುಬೂರ್ ಶಾಂತಕುಮಾರ್ ಹಾಗೂ ಮಿಳುನಾಡಿನ ಪಾಂಡಿಯನ್ ಅವರಿಗೆ ಗಾಯಗಳಾಗಿದ್ದು, ಕೂಡಲೇ ಅವರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿತ್ತು. ದೆಹಲಿಯ ಕನೋಲಿ ಬಾರ್ಡರ್ ನಲ್ಲಿ ವಿವಿಧ ಬೇಡಿಕೆಗಳ ಆಗ್ರಹಿಸಿ ಒಂದು ವರ್ಷದಿಂದ ಪ್ರತಿಭಟನೆ ನಡೆಯುತ್ತಿದ್ದು, ಈ ಸಂಬಂಧ ದೆಹಲಿಯಲ್ಲಿ ಕರೆಯಲಾಗಿದ್ದ ಸಭೆಗೆ ತೆರಳುತ್ತಿದ್ದ ವೇಳೆ ಮಾರ್ಗ ಮಧ್ಯ ಈ ದುರ್ಘಟನೆ ಸಂಭವಿಸಿತ್ತು.

ಜಮೀನು ವಿಚಾರಕ್ಕೆ ಜೆಸಿಬಿ ಮಾಲೀಕನ ಹತ್ಯೆ

• **ಉದಯವಾಹಿನಿ ಬೆಂಗಳೂರು**

ಜಮೀನು ವಿಚಾರಕ್ಕೆ ರಕ್ತ ಸಂಬಂಧಿಕರೇ ಜೆಸಿಬಿ ಮಾಲೀಕನನ್ನು ಹೊಡೆದು ಕೊಲೆಮಾಡಿ ಪರಾರಿಯಾಗಿರುವ ಘಟನೆ ಎಲೆಕ್ಟ್ರಾನಿಕ್ ಸಿಟಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

ವಿಟ್ಟಸಂದ್ರದ ನಿವಾಸಿ ವೇಣುಗೋಪಾಲರೆಡ್ಡಿ(38) ಕೊಲೆಯಾದ ಜೆಸಿಬಿ ಮಾಲೀಕರು. ಜಮೀನು ವಿಚಾರಕ್ಕೆ ನಿನ್ನೆ ಸಂಜೆ ವೇಣುಗೋಪಾಲರೆಡ್ಡಿ ಜೊತೆ ಸಂಬಂಧಿಕರಾದ ಅಪ್ಪ-ಮಗ ಸೇರಿಕೊಂಡು ಜಗಳವಾಡಿದ್ದಾರೆ.

ಮಾತಿಗೆ ಮಾತು ಬೆಳೆದು ಜಗಳ ವಿಕೋಪಕ್ಕೆ ತಿರುಗಿ ಕೈ-ಕೈಮಿಲಾಯಿಸುವ ಹಂತಕ್ಕೆ ಹೋಗಿದೆ. ಆ ವೇಳೆ ಅಪ್ಪ-ಮಗ ಕೈಗೆ ಸಿಕ್ಕಿದ ಮಚ್ಚು ಮತ್ತು ಸಲಾಕೆಯಿಂದ ವೇಣುಗೋಪಾಲರೆಡ್ಡಿ ಮೇಲೆ ಮನಬಂದಂತೆ ತಲೆ, ಕೈ-ಕಾಲು ಹಾಗೂ ಇನ್ನಿತರ ದೇಹದ ಭಾಗಗಳ ಮೇಲೆ ಹಲ್ಲೆ ನಡೆಸಿ

ಉದಯವಾಹಿನಿ ಚಿತ್ರ

ಕೊಲೆ ಮಾಡಿ ಪರಾರಿಯಾಗಿದ್ದಾರೆ.

ಸುದ್ದಿ ತಿಳಿದು ಎಲೆಕ್ಟ್ರಾನಿಕ್ ಸಿಟಿ ಠಾಣೆ ಪೊಲೀಸರು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿ ಮೃತದೇಹವನ್ನು ಸೆಂಟ್‌ಜಾನ್ ಆಸ್ಪತ್ರೆಗೆ ರವಾನಿಸಿ ಮರಣೋತ್ತರ ಪರೀಕ್ಷೆಗೆ ಒಳಪಡಿಸಿ ನಂತರ ವಾರಸುದಾರರಿಗೆ ಹಸ್ತಾಂತರಿಸಿದ್ದಾರೆ. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಪರಾರಿಯಾಗಿರುವ ಅಪ್ಪ-ಮಗನಿಗಾಗಿ ಶೋಧ ನಡೆಸುತ್ತಿದ್ದಾರೆ.

ವಿದ್ಯಾರ್ಥಿಗಳ ಹ

ಗ್ಯಾರಂಟಿ ಯೋಜನೆಯಿಂದ ಖಜಾನೆ ಖಾಲಿ ಆಯ್ತಾ?

ಐದು ವರ್ಷದ ಹಿಂದಷ್ಟೇ ಸ್ಥಾಪನೆಯಾಗಿದ್ದ ಮಂಡ್ಯ ವಿವಿ ಮುಚ್ಚಲು ಮುಂದಾದ ಸರ್ಕಾರ?

• ಉದಯವಾಹಿನಿ ಮಂಡ್ಯ

ಗ್ಯಾರೆಂಟಿ ಯೋಜನೆಯಿಂದ ಖಜಾನೆ ಖಾಲಿಯಾಗಿದೆ ಸಿದ್ದರಾಮಯ್ಯ ನೇತೃತ್ವದ ಈ ಸರ್ಕಾರ ನೌಕರರಿಗೆ ವೇತನ ಕೊಡಲು ದುಡ್ಡಿಲ್ಲದ ದರಿದ್ರ ಸರ್ಕಾರವಾಗಿ ಎಂಬ ವಿಪಕ್ಷ ನಾಯಕ ಆರ್ ಅಶೋಕ್ ಆರೋಪ ನಿಜವೆನಿಸುವಂಥ ಬೆಳವಣಿಗೆಗಳು ನಡೆಯುತ್ತಿವೆ. ರಾಜ್ಯ ಸರ್ಕಾರದ ಖಜಾನೆ ಖಾಲಿಯಾಗಿರುವುದರಿಂದ ಅಭಿವೃದ್ಧಿಗಷ್ಟೇ ಅಲ್ಲ, ವಿಶ್ವವಿದ್ಯಾನಿಲಯ ನಿರ್ವಹಣೆಗೂ ದುಡ್ಡಿಲ್ಲದಂತಾಗಿದೆ. ಇದೀಗ ಹಣಕಾಸಿನ ಕೊರತೆ ನೆಪವೊಡ್ಡಿ ಮಂಡ್ಯ ವಿವಿಗೆ ಬೀಗ ಜಡಿಯಲು ಕಾಂಗ್ರೇಸ್ ಸರ್ಕಾರ ತಯಾರಿ ನಡೆಸಿದೆ. ಮಂಡ್ಯ ವಿವಿಯನ್ನು ಮೈಸೂರು ವಿವಿಯೊಂದಿಗೆ ವಿಲೀನಗೊಳಿಸಲು ಮುಂದಾಗಿರುವ ಸರ್ಕಾರದ ನಡೆಗೆ ಮಂಡ್ಯದಲ್ಲಿ ಭಾರೀ ಜನಾಕ್ರೋಶ ವ್ಯಕ್ತವಾಗಿದೆ.

ಮಂಡ್ಯ ವಿವಿ ವಿಲೀನ ನಿರ್ಧಾರ ವಿರೋಧಿಸಿ ಸಾಹಿತಿಗಳು, ಸಾರ್ವಜನಿಕರು, ಜನಪ್ರತಿನಿಧಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

5 ವರ್ಷದ ಹಿಂದೆ ಮಂಡ್ಯ ವಿವಿಯಾಗಿ ಬಿಜೆಪಿ ಸರ್ಕಾರ ಮೇಲ್ದರ್ಜೆಗೇರಿಸಿತ್ತು: ಮೈಸೂರು ವಿವಿಯೊಂದಿಗೆ ವಿಲಿನಗೊಳಿಸಲು ಮುಂದಾಗಿರುವ ಮಂಡ್ಯ ವಿವಿಯನ್ನ ಕಳೆದ ಐದು ವರ್ಷಗಳ ಹಿಂದೆಯಷ್ಟೆ ಬಿಜೆಪಿ ಸರ್ಕಾರ ಮಂಡ್ಯ ಜಿಲ್ಲೆಯ 47 ಕಾಲೇಜುಗಳನ್ನ ಮಂಡ್ಯ ವಿವಿಗೆ ಸೇರ್ಪಡೆ ಮಾಡಿ ಮೇಲ್ದರ್ಜೆಗೇರಿಸಿತ್ತು. ಉನ್ನತ ಶಿಕ್ಷಣ ಅಭಿವೃದ್ಧಿಪಡಿಸುವ ದೃಷ್ಟಿಯಿಂದ ವಿವಿ ಸ್ಥಾಪನೆ ಮಾಡಿದ್ದ ಆಂದಿನ ಬಿಜೆಪಿ ಸರ್ಕಾರ. ಇದೀಗ ಬಿಜೆಪಿ ಸರ್ಕಾರದ ಕೊಡುಗೆಯನ್ನು ಕಸಿಯಲು ಕಾಂಗ್ರೇಸ್ ಸರ್ಕಾರ ಪ್ಲಾನ್ ಮಾಡಿದೆಯಾ ಎಂಬ ಮಾತು ಕೇಳಿಬಂದಿದೆ. ಮಂಡ್ಯ ವಿವಿ ಸ್ಥಾಪನೆಯಿಂದ ಸಾವಿರಾರು ವಿದ್ಯಾರ್ಥಿಗಳಿಗೆ ಅನುಕೂಲವಾಗಿತ್ತು. ಆದರೆ ಇದೀಗ ಮೈಸೂರು ವಿವಿಯೊಂದಿಗೆ ವಿಲೀನಗೊಳಿಸಿದರೆ ವಿದ್ಯಾರ್ಥಿಗಳು ಮೈಸೂರಿಗೆ ಅಲೆಯಬೇಕಾದ ಪರಿಸ್ಥಿತಿ ನಿರ್ಮಾಣವಾಗಬಹುದು.

ಹೀಗಾಗಿ ಮಂಡ್ಯ ವಿಶ್ವವಿದ್ಯಾನಿಲಯದ ಘನತೆಯನ್ನ ಹಾಳುಮಾಡುತ್ತಿದೆ ಎಂದು ಆರೋಪಿಸಿ ವಿವಿಧ ಸಂಘಟನೆಗಳು ರಾಜ್ಯ ಸರ್ಕಾರದ ವಿರುದ್ಧ ಹೋರಾಟದ ಎಚ್ಚರಿಕೆ ನೀಡಿವೆ.

ಮೈಸೂರು ವಿವಿ ಘನತೆ ಉಳಿಸುವ ಸಲುವಾಗಿ ವಿಲೀನ: ಕೃಷಿ ಸಚಿವ ಮೈಸೂರು ವಿಶ್ವವಿದ್ಯಾಲಯಕ್ಕಿರುವ ಘನತೆ- ಗೌರವಗಳನ್ನು ಉಳಿಸುವ ಸಲುವಾಗಿ ಮಂಡ್ಯ ವಿಶ್ವವಿದ್ಯಾಲಯವನ್ನು ಅದರೊಂದಿಗೆ ವಿಲೀನಗೊಳಿಸುವುದಕ್ಕೆ ರಾಜ್ಯ ಸರ್ಕಾರ ನಿರ್ಧರಿಸಿದೆ ಎಂದು ಸಮರ್ಥಿಸಿಕೊಂಡಿರುವ ಕೃಷಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಅವರು, ಮೈಸೂರು ವಿಶ್ವವಿದ್ಯಾಲಯ ತನ್ನದೇ ಆದ ಇತಿಹಾಸವನ್ನು ಹೊಂದಿದೆ. ಶೈಕ್ಷಣಿಕ ಗುಣಮಟ್ಟ, ಪದವಿ ಪ್ರಮಾಣಪತ್ರಕ್ಕೆ ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಒಳ್ಳೆಯ ಹೆಸರಿದೆ. ಮಂಡ್ಯ ಜಿಲ್ಲೆಯಲ್ಲಿ ವಿಶ್ವವಿದ್ಯಾಲಯ ಮಾಡುವುದರಿಂದ ಮೈಸೂರು ವಿಶ್ವವಿದ್ಯಾಲಯಯದ ಗಂಭೀರತೆ ಕಡಿಮೆಯಾಗಿದೆ ಎಂಬುದು ಹಲವರ ಅಭಿಪ್ರಾಯವಾಗಿತ್ತು. ಅದನ್ನು ಮನಗಂಡು ವಿಲೀನ ನಿರ್ಧಾರ ಕೈಗೊಂಡಿರುವುದಾಗಿ ತಿಳಿಸಿದ್ದಾರೆ.

ಉಪ ಸಮಿತಿ ರಚನೆ: ಸಮಗ್ರ ಕೃಷಿ ವಿಶ್ವವಿದ್ಯಾಲಯ ಮಂಡ್ಯಕ್ಕೆ ಬೇಡ ಎಂದು ಯಾರೂ ಹೇಳಿಲ್ಲ. ಬೆಂಗಳೂರಿನ ಜಿಕೆವಿಕೆಯನ್ನು ಸಮಗ್ರ ವಿಶ್ವವಿದ್ಯಾಲಯ ಮಾಡಬೇಕು ಎಂಬುದು ಹಲವರ ಅಭಿಪ್ರಾಯವಾಗಿದೆ. ಕೃಷಿ ವಿವಿಗೆ ಸಂಬಂಧಿಸಿದಂತೆ ಯಾವುದನ್ನು ಯಾವುದಕ್ಕೆ ಸೇರಿಸಬೇಕು ಎಂಬ ಬಗ್ಗೆ ಮುಖ್ಯಮಂತ್ರಿಯವರು ಉಪ ಸಮಿತಿ ರಚಿಸಿ ನಂತರ ಕ್ಯಾಬಿನೇಟ್‌ನಲ್ಲಿ ತೀರ್ಮಾನಿಸಲಾಗುವುದು ಎಂದು ಸ್ಪಷ್ಟಪಡಿಸಿದರು.

ಮಂಡ್ಯಕ್ಕೆ ಐಐಟಿ ಸಿಗಲಿಲ್ಲ

ಕೃಷಿ ವಿಶ್ವವಿದ್ಯಾಲಯ ಮಂಡ್ಯಕ್ಕೆ ಬರುವುದನ್ನು ಜೆಡಿಎಸ್‌ನವರು ಒಪ್ಪಲು ಹೇಗೆ ಸಾಧ್ಯ. ರೇವಣ್ಣ ಅವರಿಗೆ ಹಾಸನಕ್ಕೆ ಕೃಷಿ ವಿವಿ ಬರಬೇಕೆಂಬ ಆಸೆ ಇತ್ತು. ಅದು ಸಾಧ್ಯವಾಗಲಿಲ್ಲ. ಮಂಡ್ಯಕ್ಕೆ ಬಂದಿರುವುದಕ್ಕೆ ಅವರಿಗೆ ಸಹಿಸಲಾಗುತ್ತಿಲ್ಲ. ಎಸ್.ಎಂ.ಕೃಷ್ಣ ಮುಖ್ಯಮಂತ್ರಿಯಾಗಿದ್ದ ವೇಳೆ ಐಐಟಿ ಮಂಡ್ಯಕ್ಕೆ ಬರಬೇಕಿತ್ತು. ಕೆಆರ್‌ಎಸ್‌ನಲ್ಲಿ ತೆರೆಯುವುದಕ್ಕೆ ತಾಂತ್ರಿಕ ಸಮಿತಿಯೂ ವರದಿ ಕೊಟ್ಟಿತ್ತು. ಹಾಸನ- ಮಂಡ್ಯ ಕಿತ್ತಾಟದಲ್ಲಿ ರಾಯಚೂರಿಗೆ ಹೋಯಿತು. ಜೆಡಿಎಸ್‌ನವರಿಗೆ ಮಂಡ್ಯ ಜನರ ವೋಟು ಬೇಕೇ ಹೊರತು ಅಭಿವೃದ್ಧಿ ಬೇಕಿಲ್ಲ ಎಂದು ಕಟುವಾಗಿ ಹೇಳಿದರು. ಮಂಡ್ಯಕ್ಕೆ ಕೃಷಿ ವಿವಿ ಆಗುವುದು ರೇವಣ್ಣನವರಿಗೆ ಇಷ್ಟ ಇಲ್ಲ. ಹೋರಾಟ ಮಾಡಿದರೆ ಮಾಡಲಿ, ಬೇಡ ಎಂದವರು ಯಾರು. ಸರ್ಕಾರದ ತೀರ್ಮಾನ ಅಂತಿಮವಲ್ಲವೇ ಎಂದು ತಿಳಿಸಿದರು.

ಹಣಕಾಸಿನ ಕೊರತೆ ಒಪ್ಪಿಕೊಂಡ ಸಚಿವ

ಮಂಡ್ಯ ವಿವಿಯನ್ನು ಮೈಸೂರು ವಿವಿ ಜೊತೆ ವಿಲೀನಗೊಳಿಸುವುದಕ್ಕೆ ಹಣಕಾಸಿನ ಕೊರತೆಯೂ ಮತ್ತೊಂದು ಕಾರಣ. ಮಂಡ್ಯ ವಿಶ್ವವಿದ್ಯಾಲಯ ಸ್ಥಾಪನೆಯಾಗಿ ಐದು ವರ್ಷ ಕಳೆದರೂ ಪರಿಪೂರ್ಣ ವಿಶ್ವವಿದ್ಯಾಲಯವಾಗಲು ಸಾಧ್ಯವಾಗಿಲ್ಲ. ಯುಜಿಸಿಯಿಂದ ಅನುದಾನ ಕೊಡುತ್ತಿಲ್ಲ. ರಾಜ್ಯದಿಂದ ಅನುದಾನಕ್ಕೆ ಅವಕಾಶವಿಲ್ಲ. ಇವೆಲ್ಲಾ ತೊಂದರೆಗಳಿರುವುದರಿಂದ ಮೈಸೂರು ವಿಶ್ವವಿದ್ಯಾಲಯದೊಂದಿಗೆ ವಿಲೀನಗೊಳಿಸುವುದೇ ಉತ್ತಮ ಎಂಬ ನಿರ್ಧಾರಕ್ಕೆ ಬರಲಾಗಿದೆ ಎಂದು ಹೇಳಿದರು.

ವಿಪಕ್ಷ ನಾಯಕ ಆರ್ ಅಶೋಕ್ ಆರೋಪ

ಸಿದ್ದು ಆವಾಸ್ ಯೋಜನೆಯಡಿ ಜಿಲ್ಲೆಗೆ 3ಸಾವಿರ ವಸತಿ ಯೋಜನೆ

• ಉದಯವಾಹಿನಿ ಹನೂರು

ಆದಿವಾಸಿ ಸಮುದಾಯದ ಜನತೆಯ ಕಲ್ಯಾಣಕ್ಕೆ ಸಿದ್ದು ಆವಾಸ್ ಯೋಜನೆಯಡಿ ಜಿಲ್ಲೆಗೆ 3ಸಾವಿರ ವಸತಿ ಅನುಕೂಲ ದೊರೆದಿತ್ತು ಅತಿ ಹೆಚ್ಚು ಹಾಡಿಗಳನ್ನು ಹೊಂದಿರುವ ಹನೂರು ವ್ಯಾಪ್ತಿಗೆ 1248 ವಸತಿಗಳನ್ನು ನೀಡಲಾಗಿದೆ ಎಂದು ಶಾಸಕ ಎಂ. ಆರ್. ಮಂಜುನಾಥ್ ತಿಳಿಸಿದರು.

ಪಟ್ಟಣದ ಲೋಕೋಪಯೋಗಿ ಇಲಾಖೆ ವಸತಿ ಗೃಹದಲ್ಲಿ ಶಾಸಕರ ಅಧ್ಯಕ್ಷಯಲ್ಲಿ ಆಯೋಜನೆ ಮಾಡಲಾಗಿದ್ದ ಆದಿವಾಸಿ ಜನಾಂಗದ ಕುಂದು ಕೊರತೆ ಸಭೆಯಲ್ಲಿ ಅವರು ಮಾತನಾಡಿದರು.

ಆಕ್ರಮ ಸಕ್ರಮ ಯೋಜನೆ ಅಡಿಯಲ್ಲಿ ಯಾರು ಭೂಮಿಯನ್ನು ಉಳುಮೆ ಮಾಡುತ್ತಿರುವ ರೈತರಿಗೆ ಆರು ತಿಂಗಳು ಅಥವಾ ಒಂದು ವರ್ಷದ ಒಳಗೆ ಅರ್ಜಿ ಸಲ್ಲಿಸಿದ ಅರ್ಹ ಫಲಾನುಭವಿಗಳಿಗೆ ಭೂಮಿಯನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದು. ಅಭಿವೃದ್ಧಿಗೆ ಹೆಚ್ಚು ಒತ್ತು ನೀಡುತ್ತೇನೆ. ಸಮುದಾಯದ ಮುಖಂಡರುಗಳು ನಮ್ಮ ಬುಡಕಟ್ಟು ಜನಾಂಗದ ಮಕ್ಕಳಿಗೆ ಉತ್ತಮ ಗುಣಮಟ್ಟದ ವಿದ್ಯಾಭ್ಯಾಸ ಕೊರತೆ ಇದೆ ಶಿಕ್ಷಕರ ನೇಮಕಾತಿಯಾಗದೆ ಇರುವುದರಿಂದ ಮಕ್ಕಳಿಗೆ ಕಲಿಯಲು ತೊಂದರೆಯಾಗುತ್ತಿದೆ ಖಾಯಂ ಶಿಕ್ಷಕರ ನೇಮಕ ಮಾಡಿದರೆ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸ ಮಾಡಲು ಅನುಕೂಲವಾಗುತ್ತದೆ ಎಂದು ತಿಳಿಸಿದರು.

ಉದಯವಾಹಿನಿ ಚಿತ್ರ

ನಮ್ಮ ಮುಖಂಡರಿಂದ ನಮ್ಮ ವಾಸ ಮಾಡಲು ಮನೆಯನ್ನು ಕೊಡಿಸಬೇಕೆಂದು ಮಾತನಾಡಿದರು ಇದಕ್ಕೆ ಪ್ರತಿಕ್ರಿಯಿಸಿದ ಶಾಸಕ ಮಂಜುನಾಥ್ ಸರ್ಕಾರಿಂದ ಆದಿವಾಸಿಗೆ ಗ್ರಾಮವಾರು ಭೇಟಿ ನೀಡಿ ಯಾರಿಗೆ ಮನೆಯಿಲ್ಲ ಅವರಿಗೆ ಮನೆಯನ್ನು ನೀಡಲು ಕ್ರಮವಹಿಸಲಾಗುವುದು ಎಂದರು. ಈ ಸಭೆಯಲ್ಲಿ ಜಿಲ್ಲಾ ಪರಿಶಿಷ್ಟ ಪಂಗಡದ ಕಲ್ಯಾಣ ಅಧಿಕಾರಿ ಬಿಂದ್ಯಾ, ಪಟ್ಟಣ ಪಂ. ಅಧ್ಯಕ್ಷೆ ಮಮ್ತಾಜ್ ಬಾನು, ಡಿ.ಸಿ.ಎಫ್ ಪರಮೇಶ್,ತಾಲ್ಲೂಕು ಅಧಿಕಾರಿ ರಾಜೇಶ್, ಎ.ಇ.ಇ ಶಂಕರ್ , ಎ.ಇ. ರಂಗಸ್ವಾಮಿ,ಎ.ಡಿ ರಾಧಾ, ಜೆ.ಜೆ.ಎಂ ಪೂರ್ಣಿಮಾ,ಶಿರಸ್ತೆದಾರ ಮಹಾದೇವ ನಾಯಕ,ವಿ.ಎ ಕುಮಾರ್, ಪ್ರಥಮ ದರ್ಜೆ ಸಹಾಯಕ ಮಹೇಶ್ ,ಜಿಲ್ಲಾ ಬುಡಕಟ್ಟು ಗಿರಿಜನ ಅಭಿವೃದ್ಧಿ ಸಂಘದ ಕಾರ್ಯದರ್ಶಿ ಮಾದೇಗೌಡ ಸೇರಿದಂತೆ ಇನ್ನಿತರರು ಹಾಜರಿದ್ದರು.

ಈ ವೇಳೆ ಬುಡಕಟ್ಟು ಜನಾಂಗದ ಮಹಿಳೆ ಮಾತನಾಡಿ ನಮ್ಮ ಜನಾಂಗದವರಿಗೆ ಆರೋಗ್ಯ ಇಲಾಖೆಯಿಂದ ಯಾವುದೇ ರೀತಿಯ ಆರೋಗ್ಯ ತಪಾಸಣೆ ಮಾಡಲು ಇಲಾಖೆ ಸಿಬ್ಬಂದಿಗಳು ಬರುತ್ತಿಲ್ಲ ಎಂದು ತಿಳಿಸಿದರು. ಹಾಗೆಯೇ ಪೊನ್ನಾಚಿ ಹಾಗೂ ಮಿಣ್ಯಂ ಗ್ರಾಮಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸಂಜೆ ನಾಲ್ಕು ಗಂಟೆಯವರೆಗೆ ಮಾತ್ರ ಚಿಕಿತ್ಸೆ ಸಿಗುತ್ತಿದೆ ನಮ್ಮಗೆ 24/7 ಆಸ್ಪತ್ರೆಯಲ್ಲಿ ಚಿಕಿತ್ಸೆ ಸಿಗುವಂತೆ ಮಾಡಬೇಕೆಂದು ಶಾಸಕರಿಗೆ ಸಭೆಯಲ್ಲಿ ತಿಳಿಸಿದರು.

ಶಕ್ತಿಗಣಪತಿ ಶಿಲಾಮೂರ್ತಿ ಪ್ರತಿಷ್ಠಾಪನೆ

• ಉದಯವಾಹಿನಿ ತಿಪಟೂರು,

ನಗರದ ಬೆಸ್ಕಾಂ ವಿಭಾಗೀಯ ಕಚೇರಿ ಆವರಣದಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಶ್ರೀ ಶಕ್ತಿಗಣಪತಿ ದೇವಾಲಯ ಪ್ರವೇಶ , ಶಕ್ತಿಗಣಪತಿ ಶಿಲಾಮೂರ್ತಿ ಪ್ರತಿಷ್ಠಾಪನಾ ಮಹೋತ್ಸವ ಕಾರ್ಯಕ್ರಮ ನಡೆಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಕೆ.ಷಡಕ್ಷರಿ, ಕಚೇರಿ ಆವರಣದಲ್ಲಿ ವಿಘ್ನ ನಿವಾರಕನ ಪ್ರತಿಷ್ಠಾಪನೆ ತುಂಬಾ ಶ್ರೇಷ್ಠವಾಗಿದ್ದು, ಎಲ್ಲ ನೌಕರರು ಪ್ರತಿನಿತ್ಯ ದಿನದ ಕಾಯಕಕ್ಕೆ ಕಾರ್ಯನಿರ್ವಹಿಸಲು ಬಂದಾಗ ಪೂಜೆ ಮತ್ತು ವಿಘ್ನ ನಿವಾರಕನ ನೆನೆದರೆ ಕಾಯಕದಲ್ಲಿ ತುಂಬಾ ಒಳ್ಳೆಯದಾಗುತ್ತದೆ ಎಂದು ನಂಬಿದ್ದು, ಇಂತಹ ಮಹತ್ಕಾರ್ಯ ಮಾಡಿದ ಸಿಬ್ಬಂದಿಗಳಿಗೆ ಅಭಿನಂದನೆಗಳನ್ನು ಸಲ್ಲಿಸುತ್ತೇನೆ ಎಂದರು.

ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಮನೋಹರ್, ಜಯಪ್ಪ, ಕುಮಾರಸ್ವಾಮಿ, ಬೆಸ್ಕಾಂ ತುಮಕೂರು ವೃತ್ತ ಸಂಘಟನಾ ಕಾರ್ಯದರ್ಶಿ ಎನ್. ನರಸಿಂಹಮೂರ್ತಿ, ಉಮೇಶ್ ನಾಯಕ್ ಸೇರಿದಂತೆ ವಿಭಾಗೀಯ ಅಧಿಕಾರಿಗಳು, ನೌಕರರು, ಸಿಬ್ಬಂದಿ ವರ್ಗ, ಸಾರ್ವಜನಿಕರು ಉಪಸ್ಥಿತರಿದ್ದರು

ಉದಯವಾಹಿನಿ ಚಿತ್ರ

ಬೆಸ್ಕಾಂ ಕಾರ್ಯನಿರ್ವಾಹಕ ಇಂಜಿನಿಯರ್ ಜಿ.ಸೋಮಶೇಖರ್ ಗೌಡ ಮಾತನಾಡಿ, ನಮ್ಮ ಬೆಸ್ಕಾಂ ಇಲಾಖೆ ಸಿಬ್ಬಂದಿಗಳು ದಿನನಿತ್ಯ ಪ್ರಾಣದ ಹಂಗು ತೊರೆದು ಕಾರ್ಯ ನಿರ್ವಹಿಸುತ್ತಿದ್ದಾರೆ. ಆದ್ದರಿಂದ ಇಲಾಖೆಯಲ್ಲಿ ಒಂದು ವಿನಾಯಕನ ಮೂರ್ತಿ ಪ್ರತಿಷ್ಠಾಪಿಸಿದರೆ ಇಲಾಖೆಗೆ ಮತ್ತು ನೌಕರರಿಗೆ ಒಳ್ಳೆಯದಾಗುವುದು ಎಂಬ ನಿಟ್ಟಿನಲ್ಲಿ ಸಿಬ್ಬಂದಿಗಳೊಂದಿಗೆ ಚರ್ಚಿಸಿ, ದೇವಾಲಯ ನಿರ್ಮಿಸಿದ್ದೇವೆ ಎಂದು ತಿಳಿಸಿದರು

ಪೊಲೀಸ್ ಇಲಾಖೆಯಿಂದ ತೆರೆದ ಮನೆ ಕಾರ್ಯಕ್ರಮ

• ಉದಯವಾಹಿನಿ ಹನೂರು

ತಾಲ್ಲೂಕಿನ ವಡ್ಡರದೊಡ್ಡಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಮಕ್ಕಳಿಗೆ ತೆರೆದ ಮನೆ ಕಾರ್ಯಕ್ರಮ ಆಯೋಜಿಸಿ ಠಾಣೆಯ ಕಾರ್ಯವೈಖರಿಗಳ ಬಗ್ಗೆ ಹಾಗೂ ಪ್ರೊಕ್ಸೋ ಕಾಯ್ದೆ, ಬಾಲ್ಯವಿವಾಹ ನಿಷೇಧ ಕಾಯ್ದೆ, ಮಾದಕ ದ್ರವ್ಯಗಳ ಬಳಕೆಯಿಂದಾಗುವ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ ನಡೆಯಿತು.

ತಾಲ್ಲೂಕಿನ ರಾಮಪುರ ಪೊಲೀಸ್ ಠಾಣೆ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ವಡ್ಡರದೊಡ್ಡಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಮಕ್ಕಳಿಗೆ ತೆರೆದ ಮನೆ ಕಾರ್ಯಕ್ರಮ ಆಯೋಜಿಸಿ ಠಾಣೆಯ ಕಾರ್ಯವೈಖರಿಗಳ ಬಗ್ಗೆ ತಿಳಿಸಿಕೊಟ್ಟರು.

ಪ್ರೊಕ್ಸೋ ಕಾಯ್ದೆ, ಬಾಲ್ಯವಿವಾಹ ನಿಷೇಧ ಕಾಯ್ದೆ, ಮಾದಕ ದ್ರವ್ಯಗಳ ಬಳಕೆಯಿಂದಾಗುವ ದುಷ್ಪರಿಣಾಮಗಳು, ಸೈಬರ್ ಅಪರಾಧಗಳು, ರಸ್ತೆ ಸುರಕ್ಷತೆ ಮತ್ತು ಸಂಚಾರ ನಿಯಮಗಳ ಪಾಲನೆ ಹಾಗೂ ಸೈಬರ್ ಕ್ರೈಂ ಸಹಾಯವಾಣಿ 1930 ಮತ್ತು ಈ.ಆರ್.ಎಸ್. ಎಸ್.112 ನ ಬಗ್ಗೆ ಅರಿವು ಮೂಡಿಸಿದ್ದಾರೆ. ಈ ಸಂದರ್ಭದಲ್ಲಿ ರಾಮಾಪುರ ಪೊಲೀಸ್ ಠಾಣೆ ಅಧಿಕಾರಿ ಸಿಬ್ಬಂದಿಗಳು ಶಾಲೆ ಶಿಕ್ಷಕರು ವಿದ್ಯಾರ್ಥಿಗಳು ಹಾಜರಿದ್ದರು.

ಉದಯವಾಹಿನಿ ಚಿತ್ರ

ಪ್ರೊ. ನಂಜುಂಡಸ್ವಾಮಿ ಚಿಂತನೆಗಳು ಪ್ರೇರಣದಾಯಕ

• ಉದಯವಾಹಿನಿ ತುಮಕೂರು,

ಪ್ರೊ. ಎಂ. ಡಿ. ನಂಜುಂಡಸ್ವಾಮಿ ಅವರು ಸಮಾಜವಾದಿ ಚಳವಳಿಯ ಶ್ರೇಷ್ಠ ನಾಯಕರಲ್ಲಿ ಒಬ್ಬರು. ಅವರು ತಮ್ಮ ಜೀವನದ ಉದ್ದಕ್ಕೂ ರೈತರು ಮತ್ತು ದುರ್ಬಲ ವರ್ಗದವರ ಪರವಾಗಿ ಹೋರಾಡಿದರು.

ಅವರ ಚಿಂತನೆಗಳು ಮತ್ತು ಹೋರಾಟಗಳು ಇಂದಿಗೂ ಪ್ರೇರಣಾದಾಯಿಯಾಗಿವೆ ಎಂದು ನಿವೃತ್ತ ಮೌಲ್ಯಮಾಪನ ಕುಲ ಸಚಿವ ಡಾ. ಕೆ. ಜೆ. ಸುರೇಶ್ ಅಭಿಪ್ರಾಯಪಟ್ಟರು.

ತುಮಕೂರು ವಿಶ್ವವಿದ್ಯಾನಿಲಯದ ಪ್ರೊ. ಎಂ.ಡಿ. ನಂಜುಂಡಸ್ವಾಮಿ ಅಧ್ಯಯನ ಪೀಠ, ಸ್ನಾತಕೋತ್ತರ ಅರ್ಥಶಾಸ್ತ್ರ ಅಧ್ಯಯನ, ಸಂಶೋಧನಾ ವಿಭಾಗದ ವತಿಯಿಂದ ಸರ್. ಎಂ. ವಿಶ್ವೇಶ್ವರಯ್ಯ ಸಭಾಂಗಣದಲ್ಲಿ ಏರ್ಪಡಿಸಿದ್ದ ವಿಶೇಷ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಪ್ರೊ. ಎಂ.ಡಿ. ನಂಜುಂಡಸ್ವಾಮಿಯವರು ಹೋರಾಟ ಮತ್ತು ಚಿಂತನೆಗಳು ರೈತರ ಹಕ್ಕುಗಳಿಗಾಗಿ ಮತ್ತು ಆರ್ಥಿಕ ಸುಧಾರಣೆಗಾಗಿ ಮೀಸಲಾಗಿದ್ದವು. ಅವರಿಗೆ ಈ ಮನೋಭಾವ ಮೂಡಲು ಅವರು ಬೆಳೆದ ಸಾಮಾಜಿಕ, ಆರ್ಥಿಕ, ಸಾಂಸ್ಕೃತಿಕ ಹಿನ್ನೆಲೆ ಪ್ರೇರಣೆ ನೀಡಿತು. ಹಾಗಾಗಿ ಅವರು ಸಮಾಜವಾದಿ ಚಳವಳಿಯಲ್ಲಿ ಸಕ್ರಿಯ ಕಾರ್ಯಕರ್ತರಾಗಿ ಭಾಗವಹಿಸಿ ರೈತರ ಸಮಸ್ಯೆಗಳನ್ನು ಪರಿಹರಿಸಲು ನಿರಂತರ ಶ್ರಮಿಸಿದರು ಎಂದರು. ಭಾರತವು ಅತಿ ಹೆಚ್ಚು ಯುವಕರನ್ನು ಹೊಂದಿರುವ ದೇಶ. ನಮ್ಮ ದೇಶದ ಬೆನ್ನೆಲುಬು ರೈತ. ಅತಿ ಹೆಚ್ಚು ಬೆಳೆ ಬೆಳೆಯುವ ಪ್ರದೇಶಗಳು ದೇಶದ ಆರ್ಥಿಕತೆಗೆ ಬಹುಮುಖ್ಯ, ಆದರೆ ನಮ್ಮ ಯುವಜನತೆ ದೇಶ ವಿದೇಶಗಳ ಕಾರ್ಖಾನೆಗಳಲ್ಲಿ ಬಟ್ಟೆ ತಯಾರಿಕೆ, ಜಂಕ್ ಫುಡ್ ತಯಾರಿಕೆಯಂತ ಕೆಲಸಗಳಿಗೆ ಸೇರುತಿದ್ದಾರೆಯೇ ಹೊರತು ಭತ್ತ, ಗೋಧಿ, ರಾಗಿ ಬೆಳೆಗಳನ್ನು ಬೆಳೆಯಲು ಏಕೆ ಮುಂದೆ ಬರುತ್ತಿಲ್ಲ ಎಂದು ಪ್ರಶ್ನಿಸಿದರು. ತುಮಕೂರು ವಿಶ್ವವಿದ್ಯಾನಿಲಯದ ಪರೀಕ್ಷಾಂಗ ಕುಲಸಚಿವ ಪ್ರೊ. ಪ್ರಸನ್ನ ಕುಮಾರ್ ಕೆ. ಮಾತನಾಡಿ, ರೈತರ ಸಂಕಷ್ಟಗಳು ಹೆಚ್ಚಾಗುತ್ತಿದ್ದು ನಾವು ಕೇವಲ ವಿದೇಶಿ ಕಂಪನಿಗಳಿಗೆ ಮಣೆ ಹಾಕುತ್ತಿದ್ದೇವೆ. ರೈತರಿಗೆ ವೈಜ್ಞಾನಿಕ ಬೆಲೆ ಸಿಗುವಂತೆ ಮಾಡಬೇಕು. ವಿದ್ಯಾರ್ಥಿಗಳು ತರಗತಿಗಳಿಗೆ ಸೀಮಿತವಾಗಬಾರದು. ಬದಲಿಗೆ ರೈತರ ಕಷ್ಟಗಳನ್ನು ಅರ್ಥ ಮಾಡಿಕೊಂಡು ಅವರ ಬಗ್ಗೆ ಹೆಮ್ಮೆ ಪಡಬೇಕು ಮತ್ತು ಕೃಷಿಯನ್ನು ಗೌರವಿಸಬೇಕು ಎಂದರು. ರೈತರ ಮಕ್ಕಳು ಎಂದು ನಾವು ನಾಚಿಕೆಪಡಬಾರದು. ಕಠಿಣ ಪರಿಶ್ರಮದಿಂದ ಕಷ್ಟಗಳನ್ನು ಎದುರಿಸಿ ದೇಶದ ಬೆನ್ನೆಲುಬಾಗಿ ನಿಲ್ಲುವ ಸಾಮರ್ಥ್ಯವನ್ನು ಬೆಳೆಸಿಕೊಳ್ಳಬೇಕು ಎಂದರು.

ಉದಯವಾಹಿನಿ ಚಿತ್ರ

ಗ್ರಾ.ಪಂ.ನಲ್ಲಿ ಭಾರಿ ಅಕ್ರಮ, ಅವ್ಯವಹಾರ ಹಣ ದುರುಪಯೋಗದ ಆರೋಪ

• ಉದಯವಾಹಿನಿ ಚಾಮರಾಜನಗರ,

ಜಿಲ್ಲೆಯ ಹನೂರು ತಾಲ್ಲೂಕು ಲೊಕ್ಕನಹಳ್ಳಿ ಗ್ರಾ

ಅಂತರಾಳದಿಂದ... EDITORIAL

ಕ್ಯಾಗಿಂಗ್ ಹೆಸರಲ್ಲಿ ಮೆರೆದ ಕ್ರೌರ್ಯ!

ಕೇರಳವನ್ನು 'ಬುದ್ಧಿಜೀವಿಗಳ ನಾಡು ಎಂದು ಗುರುತಿಸಲಾಗುತ್ತದೆ. ಒಂದು ಕಾಲದಲ್ಲಿ ಜಾತೀಯತೆಯ ಕಾರಣಕ್ಕಾಗಿ ಸ್ವಾಮಿ ವಿವೇಕಾನಂದರಂತಹ ಸಂತರಿಂದಲೇ 'ಜಾತಿವಾದಿಗಳ ಹುಚ್ಚಾಸ್ಪತ್ರೆ' ಎಂದು ಟೀಕೆಗೊಳಗಾಗಲ್ಪಟ್ಟ ಕೇರಳವು ಬೇರೆ ಬೇರೆ ಆಂದೋಲನಗಳು, ಚಳವಳಿಗಳ ದೆಸೆಯಿಂದಾಗಿ, ದೇಶಕ್ಕೆ ಮಾದರಿ ರಾಜ್ಯವಾಗಿ ಬೆಳೆದಿದೆ. ಅತಿ ಹೆಚ್ಚು ಸಾಕ್ಷರತೆಯನ್ನು ಹೊಂದಿರುವ ಕೇರಳ ಅತಿ ಸಣ್ಣ ರಾಜ್ಯವಾದರೂ ಪ್ರವಾಸೋದ್ಯಮ, ಶಿಕ್ಷಣ, ಆರೋಗ್ಯ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಬಹಳಷ್ಟು ಸಾಧನೆಗಳನ್ನು ಮಾಡಿದೆ. ವಿಪರ್ಯಾಸವೆಂದರೆ, ಇಂತಹ ಕೇರಳ ಇಂದು ಮತ್ತೆ ಋಣಾತ್ಮಕ ವಿಷಯಗಳಿಗಾಗಿ ಸುದ್ದಿಯಲ್ಲಿದೆ. ಶಿಕ್ಷಣ ಕ್ಷೇತ್ರದಲ್ಲಿ ಸಾಧಿಸಿರುವ ಸಾಧನೆಗಳಿಗೆ ಮಸಿ ಬಳಿಯುವಂತೆ ಕೇರಳದಲ್ಲಿ ನಡೆಯುತ್ತಿರುವ ರ‍್ಯಾಗಿಂಗ್ ಪ್ರಕರಣಗಳು ದೇಶಾದ್ಯಂತ ಚರ್ಚೆಯ ವಿಷಯವಾಗುತ್ತಿವೆ. ಕೇರಳದ ಕೊಟ್ಟಾಯಂನ ಸರಕಾರಿ ನರ್ಸಿಂಗ್ ಕಾಲೇಜಿನಲ್ಲಿ ಮೂರನೇ ವರ್ಷದಲ್ಲಿ ಕಲಿಯುತ್ತಿರುವ ಐವರು ವಿದ್ಯಾರ್ಥಿಗಳು ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಬರ್ಬರವಾಗಿ ರ‍್ಯಾಗಿಂಗ್ ನಡೆಸಿರುವ ಘಟನೆ ಬೆಳಕಿಗೆ ಬಂದಿದೆ. ಕಿರಿಯ ವಿದ್ಯಾರ್ಥಿಗಳು ಕೊಟ್ಟಾಯಂನ ಗಾಂಧಿನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ ಬಳಿಕ ಈ ಘಟನೆ ಜಾಹೀರಾಗಿದ್ದು, ರ‍್ಯಾಗಿಂಗ್ ನಡೆಸಿದ ಐವರು ಹಿರಿಯ ವಿದ್ಯಾರ್ಥಿಗಳನ್ನು ಬಂಧಿಸಲಾಗಿದೆ. ಇದು ಕೇವಲ ಹುಡುಗಾಟಕ್ಕೆ ನಡೆದ ರ್ಯಾಗಿಂಗ್ ಅಲ್ಲ ಎನ್ನುವುದು ತನಿಖೆಯಿಂದ ಗೊತ್ತಾಗಿದೆ. ರ‍್ಯಾಗಿಂಗ್ ಹೆಸರಿನಲ್ಲಿ ಕಿರಿಯ ವಿದ್ಯಾರ್ಥಿಗಳಿಗೆ ಆರೋಪಿಗಳು ನೀಡಿದ ದೌರ್ಜನ್ಯಗಳನ್ನು ಗಮನಿಸಿದರೆ ಮೈ ಮನಸ್ಸು ನಡುಗುತ್ತದೆ. ಎಳೆಯ ವಿದ್ಯಾರ್ಥಿಗಳಲ್ಲಿ ಇಷ್ಟೊಂದು ಪ್ರಮಾಣದ ಕ್ರೌರ್ಯ ಹೇಗೆ ಸಾಧ್ಯ ಎನ್ನುವ ಪ್ರಶ್ನೆ ಎದುರಾಗುತ್ತದೆ. ಆರೋಪಿಗಳು ವಿದ್ಯಾರ್ಥಿಗಳ ಮೇಲೆ ಕೈವಾರ, ಬೇಡ್‌ಗಳು ಸೇರಿದಂತೆ ಹರಿತ ವಸ್ತುಗಳಿಂದ ಗಾಯಗಳನ್ನು ಮಾಡಿದ್ದಾರೆ. ಅಷ್ಟೇ ಅಲ್ಲ ಅವರ ಗಾಯಗಳಿಗೆ ಉರಿಯುವ ದ್ರಾವಣವನ್ನು ಸುರಿದು ವಿಕೃತವಾಗಿ ಆನಂದಿಸಿದ್ದಾರೆ. ವಿದ್ಯಾರ್ಥಿಗಳು ನೋವಿನಿಂದ ಕಿರುಚುವಾಗ ಅವರ ಬಾಯಿಗಳಿಗೆ ಕ್ರೀಮ್‌ಗಳನ್ನು ಹಚ್ಚಿದ್ದಾರೆ. ಇಷ್ಟೇ ಅಲ್ಲ, ಕಿರಿಯ ವಿದ್ಯಾರ್ಥಿಗಳನ್ನು ನಗ್ನಗೊಳಿಸಿ ಅವರ ಗುಪ್ತಾಂಗಗಳಿಗೆ ಡಂಬೆಲ್ಸ್‌ಗಳನ್ನು ನೇತು ಹಾಕಿದ್ದಾರೆ. ಇಷ್ಟೆಲ್ಲ ಭಯಾನಕ ಕೃತ್ಯಗಳನ್ನು ಎಸಗಿದ್ದರೂ, ಇವು ಕಾಲೇಜು ಆಡಳಿತ ಮಂಡಳಿಯ ಗಮನಕ್ಕೆ ಬಂದಿರಲಿಲ್ಲ, ಪಾಲಕರು ಪ್ರಾಂಶುಪಾಲರನ್ನು ಸಂಪರ್ಕಿಸಿದ ಬಳಿಕವಷ್ಟೇ ಆರೋಪಿಗಳ ಮೇಲೆ ಕ್ರಮ ತೆಗೆದುಕೊಳ್ಳಲಾಗಿದೆ. ತುಸು ಏರು ಪೇರಾಗಿದ್ದರೂ ವಿದ್ಯಾರ್ಥಿಗಳ ಜೀವಕ್ಕೆ ಅಪಾಯವಿತ್ತು. ಅಥವಾ ಪ್ರಕರಣ ಆತ್ಮಹತ್ಯೆಯಲ್ಲಿ ಮುಗಿದು ಬಿಡುತ್ತಿತ್ತು. ಈ ರ‍್ಯಾಗಿಂಗ್ ಕೃತ್ಯವನ್ನು ಕೇರಳ ಸರಕಾರ ಗಂಭೀರವಾಗಿ ಪರಿಗಣಿಸುವುದು ಅತ್ಯಗತ್ಯವಾಗಿದೆ. ಯಾಕೆಂದರೆ, ಹದಿನೈದು ದಿನಗಳ ಹಿಂದೆಯಷ್ಟೇ ಇದೇ ಕೇರಳದಲ್ಲಿ 15 ವರ್ಷದ ವಿದ್ಯಾರ್ಥಿಯೊಬ್ಬ ವಿದ್ಯಾರ್ಥಿಗಳ ರ‍್ಯಾಗಿಂಗ್ ದೌರ್ಜನ್ಯಗಳಿಗೆ ನೊಂದು 26 ಮಹಡಿಯ ಫ್ಲಾಟ್‌ನಿಂದ ಜಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದ ಈ ಪ್ರಕರಣ ರಾಷ್ಟ್ರಮಟ್ಟದಲ್ಲಿ ಸುದ್ದಿಯಾಗಿತ್ತು. ವಿಪರ್ಯಾಸವೆಂದರೆ, ಈತ ನಿತ್ಯ ವಿದ್ಯಾರ್ಥಿಗಳಿಂದ ಅತ್ಯಂತ ಅಮಾನವೀಯವಾಗಿ ದೌರ್ಜನ್ಯಕ್ಕೊಳಗಾಗುತ್ತಿರುವುದು ಪೋಷಕರಿಗೂ ಗೊತ್ತಿರಲಿಲ್ಲ, ಏಕಾಏಕಿ ಆತ್ಮಹತ್ಯೆ ಮಾಡಿಕೊಂಡಾಗ ಆಘಾತಗೊಂಡ ಪೋಷಕರು ಅದಕ್ಕೆ ಕಾರಣಗಳನ್ನು ಹುಡುಕಲು ಮುಂದಾದಾಗ ಸಿಕ್ಕಿದ ಮಾಹಿತಿ ಅವರನ್ನು ಬೆಚ್ಚಿ ಬೀಳಿಸಿತ್ತು. ಆತ ಶಾಲೆಯಲ್ಲಿ ಮತ್ತು ಶಾಲೆಯ ಬಸ್‌ನಲ್ಲಿ ವಿದ್ಯಾರ್ಥಿಗಳಿಂದ ಬರ್ಬರವಾಗಿ ದೌರ್ಜನ್ಯಕ್ಕೊಳಗಾಗಿದ್ದ ದೈಹಿಕವಾಗಿ ಹಲ್ಲೆ ನಡೆಸಿರುವುದು ಮಾತ್ರವಲ್ಲ ಶಾಲೆಯಲ್ಲಿ ಟಾಯ್ಲೆಟ್ ಸೀಟ್‌ನ್ನು ನೆಕ್ಕುವಂತೆ ಅವನಿಗೆ ಬಲವಂತ ಪಡಿಸಲಾಗಿತ್ತು. ಅಷ್ಟೇ ಅಲ್ಲ, ಫ್ಲಶ್ ಮಾಡುವಾಗ ಕಮೋಡ್‌ನ ನೀರಿನಲ್ಲಿ ಆತನ ತಲೆಯನ್ನು ಮುಳುಗಿಸಲಾಗಿತ್ತು. ದೈಹಿಕ ಮತ್ತು ಮಾನಸಿಕ ಆಘಾತದಿಂದ ಕುಗ್ಗಿ ಹೋಗಿದ್ದ ಆತ, ಅಂತಿಮವಾಗಿ ಆತ್ಮಹತ್ಯೆಯನ್ನೇ ಪರಿಹಾರವಾಗಿ ಕಂಡುಕೊಂಡಿದ್ದ ಮೇಲಿನ ಎರಡೂ ಪ್ರಕರಣಗಳನ್ನು ಎರಡು ಆಯಾಮಗಳಲ್ಲಿ ವಿಶ್ಲೇಷಣೆಗೆ ಒಳಪಡಿಸ ಬೇಕಾಗಿದೆ. ಒಂದು, ವಿದ್ಯಾರ್ಥಿಗಳ ಮೇಲೆ ಇಷ್ಟೊಂದು ಭೀಕರವಾಗಿ ರ್ಯಾಗಿಂಗ್ ನಡೆಯುತ್ತಿರುವಾಗಲೂ ಅದು ಯಾಕೆ ಶಾಲಾ ಆಡಳಿತ ಮಂಡಳಿಯ ಗಮನಕ್ಕೆ ಬಂದಿಲ್ಲ ಮತ್ತು ಅವರು ಅದರ ವಿರುದ್ಧ ಯಾಕೆ ಕ್ರಮ ಕೈಗೊಂಡಿಲ್ಲ. ಎನ್ನುವುದು. ರ‍್ಯಾಗಿಂಗ್ ನ ವಿರುದ್ಧ ಕಠಿಣ ಕಾನೂನು ಜಾರಿಯಲ್ಲಿದ್ದರೂ, ಕಾಲೇಜಿನಲ್ಲಿ ಅದು ನಡೆಯುವುದಕ್ಕೆ ಹೇಗೇ ಸಾಧ್ಯವಾಯಿತು? ದೌರ್ಜನ್ಯಕ್ಕೊಳಗಾಗಿರುವ ವಿದ್ಯಾರ್ಥಿಗಳು ದೂರು ನೀಡಿಲ್ಲ ಎನ್ನುವುದನ್ನು ಆಡಳಿತ ಮಂಡಳಿ ತಮ್ಮ ಸಮರ್ಥನೆಯಾಗಿ ಬಳಸಿಕೊಳ್ಳಬಹುದು. ಆದರೆ ದೌರ್ಜನ್ಯಕ್ಕೊಳಗಾಗಿರುವ ವಿದ್ಯಾರ್ಥಿಗಳು ದೂರು ನೀಡಲಾಗದಂತಹ ಅಸಹಾಯಕತೆ ಅಲ್ಲಿ ಯಾಕೆ ಸೃಷ್ಟಿಯಾಗಿತ್ತು. ಇಂತಹ ಕೃತ್ಯಗಳು ನಡೆಯದಂತೆ ನೋಡಿಕೊಳ್ಳಲು, ಒಂದು ವೇಳೆ ನಡೆದರೂ ಅವುಗಳ ವಿರುದ್ಧ ದೂರು ನೀಡುವಂತಹ ವಾತಾವರಣವನ್ನು ಶಾಲೆ, ಕಾಲೇಜಿನೊಳಗೆ ಸೃಷ್ಟಿಸುವುದು ಆಡಳಿತ ಮಂಡಳಿಯ ಹೊಣೆಗಾರಿಕೆಯಾಗಿದೆ. ಆದುದರಿಂದ, ಈ ರ‍್ಯಾಗಿಂಗ್ ನಲ್ಲಿ ಶಾಲಾ ಮುಖ್ಯಸ್ಥರ ಪಾತ್ರವನ್ನು ಗುರುತಿಸುವ ಕೆಲಸ ಅಗತ್ಯವಾಗಿ ನಡೆಯಬೇಕಾಗಿದೆ. ಇದೇ ಸಂದರ್ಭದಲ್ಲಿ ಪೋಷಕರು ಮತ್ತು ವಿದ್ಯಾರ್ಥಿಗಳ ನಡುವಿನ ಸಂವಹನದ ಕೊರತೆಯೂ ಇಂತಹ ಕೃತ್ಯಗಳಿಗೆ ಪರೋಕ್ಷ ಕುಮ್ಮಕ್ಕನ್ನು ನೀಡಬಹುದು, ವಿದ್ಯಾರ್ಥಿಗಳು ಶಾಲೆ, ಕಾಲೇಜುಗಳಲ್ಲಿ ಎದುರಿಸುವ ಒತ್ತಡಗಳಿಗೆ ಪೋಷಕರು ಕಿವಿಯಾಗದೇ ಇದ್ದರೆ ಅದು ಅಂತಿಮವಾಗಿ ವಿದ್ಯಾರ್ಥಿಗಳ ಆತ್ಮಹತ್ಯೆಯಲ್ಲಿ ಮುಕ್ತಾಯವಾಗಬಹುದು. ಕೇರಳದಲ್ಲಿ ಇಂತಹ ರ‍್ರಗಿಂಗ್ ಪ್ರಕರಣಗಳು ಯಾಕೆ ಹೆಚ್ಚುತ್ತಿವೆ ಎನ್ನುವುದರ ಬಗ್ಗೆಯೂ ತನಿಖೆ ನಡೆಯಬೇಕಾಗಿದೆ. ಸಾಧಾರಣವಾಗಿ ಉತ್ತರ ಭಾರತದಲ್ಲಿ ನಡೆಯುವ ರ‍್ಯಾಗಿಂಗ್‌ನ ಹಿಂದೆ ಜಾತೀಯತೆ ಮನಸ್ಸುಗಳು ಕೆಲಸ ಮಾಡುತ್ತವೆ. ಬೇರೆ ಬೇರೆ ಕಾರಣಗಳಿಗಾಗಿ ವಿದ್ಯಾರ್ಥಿಗಳ ಆತ್ಮಹತ್ಯೆ ಪ್ರಕರಣಗಳು ತೀವ್ರ ಪ್ರಮಾಣದಲ್ಲಿ ಹೆಚ್ಚುತ್ತಿವೆ.

ವಿದ್ಯಾರ್ಥಿಗಳ ಜಾತಿ, ಅವರ ಹಿನ್ನೆಲೆ ಇತ್ಯಾದಿಗಳ ಆಧಾರದ ಮೇಲೆ ಅವರ ಮೇಲೆ ಮೇಲ್‌ಜಾತಿಯ ವಿದ್ಯಾರ್ಥಿಗಳು ದೌರ್ಜನ್ಯಗಳನ್ನು ಎಸಗುವುದು ಮತ್ತು ಒತ್ತಡ ತಾಳಿಕೊಳ್ಳಲಾಗದೆ ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡುತ್ತಿರುವುದು ಆಗಾಗ ಮಾಧ್ಯಮಗಳಲ್ಲಿ ಸುದ್ದಿಯಾಗುತ್ತವೆ. ಒಟ್ಟು ದೇಶದಲ್ಲಿ ರ‍್ಯಾಗಿಂಗ್‌ಗೆ ಸಂಬಂಧಪಟ್ಟ ಪ್ರಕರಣಗಳಲ್ಲಿ ಐದೂವರೆ ವರ್ಷಗಳಲ್ಲಿ 25ಕ್ಕೂ ಅಧಿಕ ಕಾಲೇಜು ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಯುಜಿಸಿ ತನ್ನ ವರದಿಯಲ್ಲಿ ಕಳೆದ ವರ್ಷ ತಿಳಿಸಿದೆ.

ಪ್ರಾರ್ಥನೆ, ಧ್ಯಾನ, ಯೋಗ ದೈವತ್ವದ ಸಂಕೇತ

ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ

ಪತಂಜಲಿ ಮುನಿಯ ಅಷ್ಟಾಂಗ ಯೋಗ ಕೃತಿಗಿಂತ ಪೂರ್ವದಲ್ಲಿ ಯೋಗದ ಬಗ್ಗೆ ಇದ್ದಕಲ್ಪನೆ ಹಾಗೂ ವಿವರಣೆಯನ್ನು ತಮ್ಮ ಕೃತಿಯಲ್ಲಿ ಲೇಖಕರು ದಾಖಲಿಸಿ ಯೋಗ ಪದದ ಅರ್ಥ ಅದರ ವಿಭಾಗಗಳ ಬಗ್ಗೆ ತಿಳಿಸಿರುವುದು ತುಂಬಾ ಔಚಿತ್ಯ ಪೂರ್ಣವಾಗಿದೆ. ಯಾವಯಾವ ವಯಸ್ಸಿನವರು ಎಂದರೆ ಮೂರು ವರ್ಷದಿಂದ ನೂರು ವರ್ಷ ದಾಟಿದವರು ಯೋಗ ಮಾಡಬಹುದೆಂದು ತಿಳಿಸಿದ್ದಾರೆ.

ಯೋಗದ ಉಪಯೋಗ ಹಾಗೂ ಆಸನಗಳನ್ನು ಮಾಡುವ ವಿಧಾನಗಳನ್ನು ತಿಳಿಸಿ ದಿನಕ್ಕೊಮ್ಮೆ ಅಥವಾ ದಿನಕ್ಕೆ ಎರಡು ಸಾರಿಯೋಗ ಮಾಡಬಹುದೆಂದು ತಿಳಿಸಿದ್ದಾರೆ. ಗಾಳಿ, ಬೆಳಕು ಇರುವಕಡೆ ಸಮತಟ್ಟಾದ ನೆಲದ ಮೇಲೆ ಯೋಗ ಜಮಖಾನವನ್ನು ಬಳಸಿ ಯೋಗ ಮಾಡಲು ತಿಳಿಸಿದ್ದಾರೆ. ಈಗ ಮಧುಮೇಹ ಬಹಳಷ್ಟು ಜನರಿಗೆ ಇರುವ ಬಗ್ಗೆ ತಿಳಿಸಿ ಆ ಕಾಯಿಲೆಯನ್ನು ಯೋಗಧ್ಯಾನ ಪ್ರಾರ್ಥನೆ ಮಾಡುವುದರೊಂದಿಗೆ ಹಾಗೂ ಜೀವನಶೈಲಿ ಬದಲಾವಣೆ ಮಾಡಿಕೊಳ್ಳುವುದರಿಂದ ಹೋಗಲಾಡಿಸಬಹುದೆಂದು ತಿಳಿಸಿದ್ದಾರೆ. ಆನಂತರ ಪ್ರಾಣಾಯಾಮದ ಪ್ರಯೋಜನದ ಬಗ್ಗೆ ವಿವರಿಸಿದ್ದಾರೆ. ಹೃದಯವು ಎಷ್ಟು ಅಮೂಲ್ಯವಾದದ್ದು ಅದನ್ನು ಯಾವ ರೀತಿ ಜೋಪಾನ ಮಾಡಬೇಕು ಎಂಬುದರ ಬಗ್ಗೆ ವಿವರಿಸಿದ್ದಾರೆ. ಯಾವ ಯಾವ ಆಹಾರವೂ ಆರೋಗ್ಯವನ್ನು ಕಾಪಾಡಿಕೊಳ್ಳಲು ಸಹಕಾರಿಯಾಗಿದೆ ಎಂಬುದನ್ನು ತಿಳಿಸಿ, ಹೃದಯಕ್ಕೆ ಸಂಬಂಧಿಸಿದ ಕಾಯಿಲೆಗಳನ್ನು ವಾಸಿ ಮಾಡಿಕೊಳ್ಳಲು ಸಲಹೆ ನೀಡಿದ್ದಾರೆ.

ಕ್ಯಾನ್ಸರ್ ರೋಗವು ಅಶುದ್ಧ ಆಹಾರ ಸೇವನೆ, ಅಶುದ್ಧ ಗಾಳಿ ಸೇವನೆಯಿಂದ ಬರುವ ಬಗ್ಗೆ ಕೆಲ ಮಹಿಳೆಯರು ಅತಿಯಾಗಿ ಸೌಂದರ್ಯವರ್ಧಕ ಪ್ರಸಾದನ ಬಳಸುವ ಬಗ್ಗೆ ತಿಳಿಸಿದ್ದಾರೆ. ಮಾನಸಿಕ ಖಿನ್ನತೆ ಮಧುಮೇಹ ರಕ್ತದ ಒತ್ತಡ ಪಿತ್ತಜನಕಾಂಗದ ಬಲಹೀನತೆಗೆ ಎಡೆ ಮಾಡಿಕೊಡುವ ಬಗ್ಗೆ ತಿಳಿಸಿ ಯಾವ-ಯಾವ ಆಸನ ಮಾಡುವುದರಿಂದ ಅದ್ಭುತ ರೋಗ ನಿವಾರಣೆ ಮಾಡಿಕೊಳ್ಳಬಹುದೆಂದು ಅದರ ಬಗ್ಗೆ ವಿವರಣೆ ನೀಡಿದ್ದಾರೆ. ಸಮತೋಲನ ಆಹಾರ ಸೇವನೆಯಿಂದ ರೋಗಮುಕ್ತಿಯಾಗುವ ಬಗ್ಗೆ ತಿಳಿಸಿದ್ದಾರೆ. ಅಸ್ತಮ ಕಾಯಿಲೆ ಇರುವವರು ಶೀತ ಕಾರಕ ಆಹಾರ ಸೇವನೆ ಮಾಡದೆ ಪ್ರಾಣಾಯಾಮವನ್ನು ನಿಯಮಿತವಾಗಿ ಪ್ರತಿದಿನ ಮಾಡುವುದರಿಂದ ವಾಸಿ. ಮಾಡಿಕೊಳ್ಳುವ ಬಗ್ಗೆ ತಿಳಿಸಿದ್ದಾರೆ. ಅರಿಶಿನ ಕಾಮಾಲೆರೋಗದ ಬಗ್ಗೆ ತಿಳಿಸಿ ರೋಗ ಇರುವವರು ಆಹಾರದಲ್ಲಿ ಪಥ್ಯವಿದ್ದು ನಿಯಮಿತವಾದ ಪ್ರಾಣಾಯಾಮ ಮಾಡುವುದರಿಂದ ರೋಗವ ತೀವ್ರತೆಯನ್ನು ತಡೆಗಟ್ಟಬಹುದು ಎಂದು ತಿಳಿಸಿದ್ದಾರೆ. ಮೂತ್ರಪಿಂಡದ ಮಹತ್ವ ಅದು ಕೆಲಸ ಮಾಡುವ ರೀತಿಯಲ್ಲಿ ತಿಳಿಸಿ ಒಂದು ವೇಳೆ ಮೂತ್ರಪಿಂಡವು ಕೆಲಸ ಮಾಡದೆ ಇದ್ದರೆ ದೇಹದಲ್ಲಿ ರಕ್ತಶೋಧನೆ ಕಾರ್ಯ ಕುಂಠಿತವಾಗುತ್ತದೆ. ಮೂತ್ರಕೋಶದಲ್ಲಿ ವಿಷ ಪದಾರ್ಥಗಳು ಉಳಿದು ತೊಂದರೆ ಉಂಟಾಗುವ ಬಗ್ಗೆ ಮಾಹಿತಿ ಸಂಪೂರ್ಣವಾಗಿದೆ. ಪ್ರಾಣಾಯಾಮ ಮಾಡುವುದರಿಂದ ಕಿಡ್ನಿಯ ತೊಂದರೆಯನ್ನು ನಿವಾರಣೆ ಮಾಡಿಕೊಳ್ಳುವ ಬಗ್ಗೆ ವಿವರಿಸಿದ್ದಾರೆ. ತಲೆನೋವು ಮೈಗ್ರೇನ್ ಏಕೆ ಬರುತ್ತದೆ ಅದನ್ನು ನಿವಾರಣೆ ಮಾಡಿಕೊಳ್ಳಲು ಪದ್ಮಾಸನ ಭುಜಂಗಾಸನ ಸರ್ವಾಂಗಸನ ಮಾಡುವುದನ್ನು ತಿಳಿಸಿದ್ದಾರೆ. ಕರುಳಿನ ಹುಣ್ಣು (ಅಲ್ಸರ್) ಆಮ್ಲಕಾರಿ ಆಹಾರ ಹುಳಿ ಕ್ಷಾರವನ್ನು ಹೊಂದಿರುವ ಪಾನೀಯ ಸೇವಿಸುವುದರಿಂದ ಕರುಳು ದುರ್ಬಲವಾಗಿ ಆಮ್ಲ ಹೆಚ್ಚಾಗಿ ನಿರಂತರ ಹುಳಿತೇಗು ಬರುತ್ತದೆ. ಕರುಳಿನ ಹುಣ್ಣಿನ ಅಲ್ಸರ್ ಉಂಟಾಗುತ್ತದೆ. ಒತ್ತಡದ ಬದುಕುಯಾಂತ್ರಿಕಜೀವನ ಪಾನ್ ಮಸಾಲ, ಆಲೋಹಾಲ್ ಸೇವನೆಯಿಂದ ಗ್ಯಾಸ್ಟ್ರಿಕ್ ಬರುವ ಬಗ್ಗೆ ತಿಳಿಸಿದ್ದಾರೆ. ಗ್ಯಾಸ್ಟ್ರಿಕ್ ನಿವಾರಣೆಗೆ ಯಾವ ಯಾವ ಆಹಾರ ಸೇವನೆ ಮಾಡಬೇಕು ಯಾವ ಯಾವ ಆಸನ ಮಾಡಿದರೆ ಹೋಗಲಾಡಿಸಬಹುದು ಎಂದು ತಿಳಿಸಿದ್ದಾರೆ. ನಿದ್ರಾಹೀನತೆ ಈ ಕಾಯಿಲೆಯಿಂದ ಮುಕ್ತರಾಗಲು ಪ್ರತಿದಿನ ಕನಿಷ್ಠ 8 ಗಂಟೆಗಳವರೆಗೆ ನಿದ್ದೆ ಮಾಡಬೇಕೆಂದು ಕೆಲವು ಆಸನಗಳು, ಮುದ್ರೆಗಳು, ಮುಖ್ಯವಾಗಿ ಶವಾಸನ ಮಾಡುವುದರಿಂದ ನಿದ್ರಾಹೀನತೆ ಕಾಯಿಲೆ ನಿವಾರಣೆ ಮಾಡಿಕೊಳ್ಳುವ ಬಗ್ಗೆ ತಿಳಿಸಿದ್ದಾರೆ. ಮಲಬದ್ಧತೆಗೆ ಕಾರಣ ಅದರ ನಿವಾರಣೆಗೆ ಬೇಕಾದ ಆಹಾರ ಪದ್ಧತಿ ಹಾಗೂ ಮಾಡಬೇಕಾದ ಆಸನಗಳ ಬಗ್ಗೆ ತಿಳಿಸಿದ್ದಾರೆ. ಮೂಲವ್ಯಾಧಿ ಮಂಡಿ ನೋವುಗಳಿಗೆ ಕಾರಣ ಹಾಗೂ ನಿವಾರಣೆ ಬಗ್ಗೆ ಯಾವ ಯಾವ ಆಸನ ಹಾಕಬೇಕೆಂದು ತಿಳಿಸಿದ್ದಾರೆ.

ಬೆನ್ನು ನೋವು ಯಾರ್ಯಾರಿಗೆ ಬರುತ್ತದೆ ಅದರ ನಿವಾರಣೆಗೆ ಯಾವ ಯಾವ ಆಸನಗಳನ್ನು ಹಾಕಬೇಕೆಂದು ತಿಳಿಸಿದ್ದಾರೆ. ಯೋಗಾಸನದಿಂದ ಪರಿಹಾರಗಳನ್ನು ತಿಳಿಸಿಕೊಟ್ಟಿದ್ದಾರೆ. ಈ ಕೃತಿಯಲ್ಲಿ ಯೋಗ ಕಲಿತರೆ ಆಗುವ ಪ್ರಯೋಜನಗಳು ಹಾಗೂ ಯೋಗ ಅಭ್ಯಾಸ ಮಾಡುವವರ ಅನುಭವವನ್ನು ಒಂದು ಕಡೆ ಕಲೆ ಹಾಕಿ ಅದನ್ನು ದಾಖಲಿಸುವುದರಿಂದ ಕೃತಿಯ ಮೌಲ್ಯವನ್ನು ಹೆಚ್ಚಿಸಿದೆ. ಒಟ್ಟಾರೆ ಈ ಕೃತಿಯು ಯೋಗ ಪದದ ಅರ್ಥ ಆಸನಗಳು ಹಾಗೂ ಪ್ರಾಣಾಯಾಮವನ್ನು ಮಾಡುವ ವಿಧಾನ ಮಧುಮೇಹ, ಅರ್ಬುದ ರೋಗ, ಮಾನಸಿಕ ಖಿನ್ನತೆ, ಅಸ್ತಮಾ ಕಾಯಿಲೆ (ಜಾಂಡಿಸ್) ಕಿಡ್ನಿ ಕಾಯಿಲೆ, ಮೈಗ್ರೇನ್, ಅಲ್ಸರ್, ಬಲಹೀನತೆ, ಮೂಲವ್ಯಾಧಿ, ಮಂಡಿ ನೋವು ಸ್ಥೂಲಕಾಯ ಮುಂತಾದ ಕಾಯಿಲೆಗಳಿಂದ ದೂರವಿರಲು ಯಾವ ಯಾವ ಆಸನ ಮಾಡಬೇಕು ಎಂಬುದರ ಬಗ್ಗೆ ವಿಸ್ತೃತವಾಗಿ ವಿವರಣೆ ನೀಡುವುದರಿಂದ ಈ ಕೃತಿ ಉಪಯುಕ್ತಕರವೆನಿಸಿದೆ. ಧನಂಜಯರವರು ರಚಿಸಿರುವ ಯೋಗ ಸೌರಭ ಕೃತಿಯು ಯೋಗಭ್ಯಾಸ ಮಾಡುವವರಿಗೆ ಪ್ರಾರಂಭಿಕ ಹಂತದಲ್ಲಿ ಯೋಗ ಕಲಿಯುವವರಿಗೆ ತುಂಬಾ ಉಪಯುಕ್ತ ಮಾಹಿತಿಯನ್ನು ಒದಗಿಸುತ್ತದೆ. ಸದೃಢ ದೇಹದಲ್ಲಿ ಸದೃಢ ಮನಸ್ಸಿರುತ್ತದೆ ಯೋಗ-ರೋಗ ನಿವಾರಕವಾದುದು ಎಂಬುದನ್ನು ಯೋಗ ಸೌರಭ ಕೃತಿಯು ಸಾಬೀತು ಪಡಿಸಿದೆ. ಒಟ್ಟಾರೆ ಹೆಚ್.ಸಿ. ಧನಂಜಯರವರ ಈ ಕೃತಿ ಅರ್ಥಪೂರ್ಣವಾಗಿ ಮೂಡಿಬಂದಿದೆ. ಇಲ್ಲಿ ಆಸನ, ಪ್ರಾಣಾಯಾಮ, ಧ್ಯಾನಗಳಿಗೆ ಮಹತ್ವ ನೀಡಿ ಪತಂಜಲಿ ನಿಯಮ ವಿಚಾರಗಳನ್ನು ಯೋಗ ಮುದ್ರೆಗಳ ಬಗ್ಗೆ ತಿಳಿಸದೇ ಇರುವುದು ಈ ಕೃತಿಯಲ್ಲಿ ಕಂಡುಬರುವ ಕೊರತೆ ಎನಿಸಿದೆ. ಆರೋಗ್ಯ ಕಾಪಾಡಿಕೊಳ್ಳುವ ಬಗ್ಗೆ ಇನ್ನೂ ಹೆಚ್ಚು ಹೆಚ್ಚು ಕೃತಿಗಳು ಹೊರಬರಲಿ ಎಂದು ಆಶಿಸಿ ಅವರಿಗೆ ಶುಭಕಾಮನೆಗಳನ್ನು ತಿಳಿಸುತ್ತೇನೆ.

ಅತಿಯಾಗಿ ಕಾಫಿ ಟೀ ಕುಡಿಯುವುದು ಬ್ರಾಂದಿ, ವಿಸ್ಕಿಯ ವ್ಯಸನ ಮಧ್ಯಪಾನ ಧೂಮಪಾನ ಮಾಡುವುದರಿಂದ ಗುಟ್ಕಾ ಜಗಿಯುವುದರಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ವಿವರಿಸಿದ್ದಾರೆ. ನೀರು ಬಹಳ ಅಮೂಲ್ಯವಾದದ್ದು ನೀರನ್ನು ಯಾವಾಗ ಎಷ್ಟು ಕುಡಿಯಬೇಕು ಎಂಬುದರ ಬಗ್ಗೆ ವಿವರಣೆ ನೀಡಿದ್ದಾರೆ.



ಯೋಗ ಧ್ಯಾನ ಪ್ರಾರ್ಥನೆ

ಮಹರ್ಷಿ ಅಧ್ಯಾತ್ಮ ವಿಶ್ವವಿದ್ಯಾಲಯದ ಕಕ್ಷೆಗೆ ಭಕ್ತರ ಭೇಟಿ...!

• ಉದಯವಾಹಿನಿ ಬೆಂಗಳೂರು

ಪ್ರಯಾಗರಾಜ ಮಹರ್ಷಿ ಅಧ್ಯಾತ್ಮ ವಿಶ್ವ ವಿದ್ಯಾಲಯದಿಂದ ಕುಂಭಕ್ಷೇತ್ರದ ಸೆಕ್ಟರ್ 7 ರಲ್ಲಿ ಪ್ರದರ್ಶನಿ ಏರ್ಪಡಿ ಸಲಾಗಿದೆ. ಈ ಪ್ರದರ್ಶನಿಗೆ ಭಕ್ತರಿಂದ ಉತ್ತಮ ಪ್ರತಿಕ್ರಿಯೆ ದೊರೆಯುತ್ತಿದ್ದು ಫೆಬ್ರವರಿ 11 ರ ವರೆಗೆ 10 ಸಾವಿರಗಿಂತಲೂ

ಜಿಲ್ಲೆಯ ಶೈಕ್ಷಣಿಕ ಗುಣಮಟ್ಟ ಸುಧಾರಣೆಗೆ ಮಿಷನ್ ವಿದ್ಯಾಕಾಶಿ ಕಾರ್ಯಕ್ರಮ

● ಈ ಬಾರಿ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಧಾರವಾಡ ಜಿಲ್ಲೆ ಗಣನೀಯ ಸಾಧನೆ ಮಾಡಬೇಕು: ಜಿಲ್ಲಾಧಿಕಾರಿ

• ಉದಯವಾಹಿನಿ ಧಾರವಾಡ

ಈ ಬಾರಿ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಧಾರವಾಡ ಜಿಲ್ಲೆ ಗಣನೀಯ ಸಾಧನೆ ಮಾಡಬೇಕು ಮತ್ತು ಜಿಲ್ಲೆಯ ಶೈಕ್ಷಣಿಕ ಗುಣಮಟ್ಟ ಸುಧಾರಣೆಗೆ ಆದ್ಯತೆ ನೀಡುವ ಉದ್ದೇಶದಿಂದ ಮಿಷನ್ ವಿದ್ಯಾಕಾಶಿ ಎಂಬ ಹೆಸರಿನಡಿ ಧಾರವಾಡ ಜಿಲ್ಲಾಡಳಿತದಿಂದ ಕಾರ್ಯಕ್ರಮ ರೂಪಿಸಲಾಗಿದೆ.

ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಧಾರವಾಡ ಜಿಲ್ಲೆಯ ಮಕ್ಕಳು ಉತ್ತಮ ಫಲಿತಾಂಶ ಪಡೆದು ರಾಜ್ಯದಲ್ಲಿ ಧಾರವಾಡ ಜಿಲ್ಲೆ ಟಾಪ್ 10ರ ಪಟ್ಟಿಯಲ್ಲಿ ಬರಬೇಕು, ಕಲಿಕಾ ಗುಣಮಟ್ಟ ಸುಧಾರಿಸಿ ಆ ಮೂಲಕ ವಿದ್ಯಾಕಾಶಿ ಎಂಬ ಹೆಸರನ್ನು ಇನ್ನಷ್ಟು ಎತ್ತರಕ್ಕೆ ಕೊಂಡೊಯ್ಯಬೇಕು ಎಂಬ ಉದ್ದೇಶ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರ ಅಧ್ಯಕ್ಷತೆಯ ಈ ಮಿಷನ್ ವಿದ್ಯಾಕಾಶಿಯದ್ದಾಗಿದೆ.

ಇನ್ನೇನು ಮಾರ್ಚ್ ತಿಂಗಳಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ ನಡೆಯಲಿವೆ. ಪರೀಕ್ಷೆ ಹಿನ್ನೆಲೆಯಲ್ಲಿ ಧಾರವಾಡ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಸ್ವತಃ ಧಾರವಾಡ ಜಿಲ್ಲೆಯ ವಿವಿಧ ಹೈಸ್ಕೂಲ್‌ಗಳಿಗೆ ಭೇಟಿ ನೀಡಿ, ಎಸ್‌ಎಸ್‌ಎಲ್‌ಸಿ ಮಕ್ಕಳೊಂದಿಗೆ ಅಲ್ಲದೇ ಪಾಲಕರ ಜೊತೆಯೂ ಸಂವಾದ ಮಾಡುತ್ತಿದ್ದಾರೆ.

ಧಾರವಾಡ ತಾಲ್ಲೂಕಿನ ಉಪ್ಪಿನ ಬೆಟಗೇರಿ ಗ್ರಾಮದ ಎಸ್‌ಜಿವಿ ಹೈಸ್ಕೂಲ್‌ಗೆ ಭೇಟಿ ನೀಡಿದ ಡಿಸಿ ದಿವ್ಯ ಪ್ರಭು, ಎಸ್‌ಎಸ್‌ಎಲ್‌ಸಿ ಮಕ್ಕಳೊಂದಿಗೆ ಸಂವಾದ ನಡೆಸಿದರು. ಅನೇಕ ಮಕ್ಕಳು ತಮಗಿರುವ ಸಂದೇಹಗಳನ್ನು ಡಿಸಿ ಅವರಿಗೆ ಕೇಳಿ ಬಗೆಹರಿಸಿಕೊಂಡಿದ್ದು ವಿಶೇಷವಾಗಿತ್ತು. ಜಿಲ್ಲಾಧಿಕಾರಿಗಳು ಮಕ್ಕಳಿಗೆ, ಪರೀಕ್ಷೆ ಹೇಗೆ ಎದುರಿಸಬೇಕು, ಅದಕ್ಕೆ ತಯಾರಿ ಹೇಗೆ ಮಾಡಿಕೊಳ್ಳಬೇಕು, ಎಂಬ ವಿಷಯಗಳನ್ನು ವಿದ್ಯಾರ್ಥಿಗಳಿಗೆ ತಿಳಿ ಹೇಳಿದರು.

ಅಲ್ಲದೇ ಎಸ್.ಡಿ.ಎಂ.ಸಿ ಸದಸ್ಯರೊಂದಿಗೆ ಮತ್ತು ಪಾಲಕರೊಂದಿಗೂ ಜಿಲ್ಲಾಧಿಕಾರಿಗಳು ಸಂವಾದ ನಡೆಸಿದರು. ಮಕ್ಕಳ ಮೇಲೆ ಯಾವ ರೀತಿ ನಿಗಾ ವಹಿಸಬೇಕು, ಶಾಲೆಯಲ್ಲಿ ಶಿಕ್ಷಣದ ಗುಣಮಟ್ಟ ಹೇಗಿದೆ? ಎಂಬ ಎಲ್ಲಾ ವಿಷಯಗಳನ್ನು ಪಾಲಕರೊಂದಿಗೆ ಸಂವಾದ ನಡೆಸಿ ಮಾಹಿತಿ ಪಡೆದುಕೊಂಡರು.

ಎಸ್.ಎಸ್.ಎಲ್.ಸಿ. ಪರೀಕ್ಷೆ ಹತ್ತಿರ ಬಂದಿದೆ. ವಿದ್ಯಾರ್ಥಿಗಳಿಗೆ ಮನೆಯಲ್ಲಿ ಚನ್ನಾಗಿ ಓದುವ ವಾತಾವರಣ ಕಲ್ಪಿಸಬೇಕು. ಟಿ.ವಿ, ಮೊಬೈಲ್‌ಗಳಿಂದ ಮಕ್ಕಳು ದೂರವಿರುವಂತೆ ನೋಡಿಕೊಳ್ಳಬೇಕು. ಪಾಲಕರೂ ಸಹ ಮನೆಯಲ್ಲಿ ಟಿ.ವಿ, ಮೊಬೈಲ್‌ಗಳನ್ನು ಅಗತ್ಯವಿರುವಷ್ಟು ಮಾತ್ರ ಬಳಸಿ, ಮಕ್ಕಳ ಓದಿನ ಕಡೆಗೆ ಗಮನ ಹರಿಸಬೇಕು ಎಂದರು.

ಪುಡಕಲಕಟ್ಟಿ, ಕರಡಿಗುಡ್ಡ, ಯಾದವಾಡ ಮತ್ತು ಉಪ್ಪಿನಬೇಟಗೇರಿಯ ವಿವಿಧ ಪ್ರೌಢಶಾಲೆಯ ಶಿಕ್ಷಕರು ತಮ್ಮ ಶಾಲಾ ಮಕ್ಕಳ ಫಲಿತಾಂಶದ ಬಗ್ಗೆ ಮಾಹಿತಿ ನೀಡಿದರು. ಸಭೆಯಲ್ಲಿ ತಹಶಿಲ್ದಾರ ಡಾ.ಡಿ.ಎಚ್. ಹೂಗಾರ, ತಾಲ್ಲೂಕು ಆರೋಗ್ಯ ಅಧಿಕಾರಿ ಡಾ. ಕೆ.ಎನ್.ತನುಜಾ, ಸಹಾಯಕ ಕೃಷಿ ನಿರ್ದೇಶಕ ಅಣಗೌಡರ, ಕ್ಷೇತ್ರ ಶಿಕ್ಷಣಾಧಿಕಾರಿ ರಾಮಕೃಷ್ಣ ಸದಲಗಿ, ಶಿಕ್ಷಣ ಸಂಯೋಜಕರಾದ ಬಸವರಾಜ ಛಬ್ಬಿ, ಶ್ರೀಕಾಂತ ಗೌಡರ, ಮುಖ್ಯಾಧ್ಯಾಪಕರಾದ ಪುಡಕಲಕಟ್ಟಿ ಪ್ರೌಢಶಾಲೆಯ ನಾರಾಯಣ ಪತ್ತಾರ, ಕರಡಿಗುಡ್ಡ ಕೆಪಿಎಸ್ ಪ್ರೌಢಶಾಲೆಯ ಉಮಾಕಾಂತ ಕರ್ಚಕಟ್ಟಿ, ಯಾದವಾಡ ಸರಕಾರಿ ಪ್ರೌಢಶಾಲೆಯ ಬಿ.ಬಿ.ದುಬ್ಬನಮರಡಿ, ಉಪ್ಪಿನಬೆಟಗೇರಿ ಎಸ್.ಜಿ.ವಿ. ಪ್ರೌಢಶಾಲೆಯ ಎ.ಎ.ಮುಲ್ಲಾ, ಎಂ.ಜೆ. ಹಳವೂರ ಉರ್ದು ಪ್ರೌಢಶಾಲೆಯ ಯಾಕೂಬ ಜೋರಮನ್ನವರ ಹಾಗೂ ಉಪ್ಪಿನಬೇಟಗೇರಿ ಗ್ರಾಮ ಪಂಚಾಯತ ಅಧ್ಯಕ್ಷ ಬಸೀರ ಮಾಳಗಿಮನಿ, ಉಪಾಧ್ಯಕ್ಷೆ ಹೆಗಡೆ, ಎಸ್.ಜಿ.ವಿ ಸಂಸ್ಥೆಯ ಚೇರಮನ್ ವೀರಣ್ಣ ಪರಾಂಡೆ, ಗೌರವ ಕಾರ್ಯದರ್ಶಿ ಗಂಗಪ್ಪ ಜವಳಗಿ, ಸದಸ್ಯರಾದ ಕಲ್ಲಪ್ಪ ಪುಡಕಲಕಟ್ಟಿ, ರಾಮಲಿಂಗಪ್ಪ ನವಲಗುಂದ, ಮಲ್ಲಪ್ಪ ಅಷ್ಟಗಿ, ಧರೆಪ್ಪ ಬೊಬ್ಬಿ, ನಿಂಗಪ್ಪ ಸಂಕಣ್ಣವರ ಸೇರಿದಂತೆ ಗ್ರಾಮದ ಪ್ರಮುಖರಾದ ಮಹಾವೀರ ಅಷ್ಟಗಿ, ಸುರೇಶಬಾಬು ತಳವಾರ ಹಾಗೂ ಇತರರು ಇದ್ದರು.

ಕಾರ್ಯಕ್ರಮದಲ್ಲಿ ಉಪ್ಪಿನಬೆಟಗೇರಿ ಕ್ಲಸ್ಟರ್‌ನಲ್ಲಿ ಬರುವ ವಿವಿಧ ಪ್ರೌಢಶಾಲೆಗಳ ಎಸ್.ಡಿ.ಎಂ.ಸಿ ಅಧ್ಯಕ್ಷರು, ಸದಸ್ಯರು, ಮಕ್ಕಳ ಪಾಲಕರು, ತಂದೆ-ತಾಯಿಗಳು, ಗ್ರಾಮದ ಪ್ರಮುಖರು ಭಾಗವಹಿಸಿದ್ದರು.

ಉದಯವಾಹಿನಿ ಚಿತ್ರ

ಜೀವನದಲ್ಲಿ ಉನ್ನತ ಗುರಿ ಇರಬೇಕು. ಪ್ರತಿದಿನ ವೇಳಾಪಟ್ಟಿ ಅನುಸಾರ ಅಭ್ಯಾಸ ಮಾಡಬೇಕು. ಕಠಿಣ ಎನಿಸುವ ವಿಷಯಗಳನ್ನು ಮೊದಲು ಓದಬೇಕು. ಒತ್ತಡಕ್ಕೆ, ಉದ್ವೇಗಕ್ಕೆ ಒಳಗಾಗದೇ ಪರೀಕ್ಷೆಗಳನ್ನು ಬರೆಯುವ ಅಭ್ಯಾಸ ಮಾಡಿಕೊಳ್ಳಬೇಕು. ಅದಕ್ಕಾಗಿ ಜಿಲ್ಲೆಯ ಎಲ್ಲಾ ಶಾಲೆಗಳಲ್ಲಿ ರೂಢಿ ಪರೀಕ್ಷೆಗಳನ್ನು ಬರೆಸಲಾಗುತ್ತಿದೆ. ಇದರಿಂದ ವಿದ್ಯಾರ್ಥಿಗಳಲ್ಲಿನ ಪರೀಕ್ಷಾ ಭಯ ದೂರವಾಗುತ್ತದೆ -ಜಿಲ್ಲಾಧಿಕಾರಿ

ಒಳ್ಳೆಯ ಅಧಿಕಾರಿ ಆಗಬೇಕು

ಎಲ್ಲ ಮಕ್ಕಳು ಕಷ್ಟಪಟ್ಟು ಪ್ರಾಮಾಣಿಕತೆಯಿಂದ ನಿರಂತರವಾಗಿ ಓದಿ, ತಮ್ಮಂತೆ ಜಿಲ್ಲಾಧಿಕಾರಿ ಆಗಬೇಕು. ಐಎಎಸ್, ಐಪಿಎಸ್ ಹುದ್ದೆಗಳಿಗೆ ಆಯ್ಕೆ ಆಗಬೇಕು. ಅಂತಹ ಕನಸು, ಛಲ ಈಗಿನಿಂದಲೇ ಬೆಳಿಸಿಕೊಳ್ಳಬೇಕು. ತಾವು ಸಹ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ನಮ್ಮ ರಾಜ್ಯಕ್ಕೆ ರ್‍ಯಾಂಕ್ ಬಂದಿದ್ದೆ, ನಂತರ ಡಿಸಿ ಆಗಿರುವೆ. ನೀವು ರಾಜ್ಯಕ್ಕೆ ಉತ್ತಮ ರ್‍ಯಾಂಕ್ ಪಡೆದು, ಒಳ್ಳೆಯ ಅಧಿಕಾರಿ ಆಗಬೇಕು ಎಂದು ವಿದ್ಯಾರ್ಥಿಗಳಿಗೆ ಹುರಿದುಂಬಿಸಿದರು.

ಮಕ್ಕಳ ಓದಿನ ಕಡೆಗೆ ಗಮನ ಹರಿಸಿ

ಮಿನಿ ನ್ಯೂಸ್

ರೈತ ಸಂಘದಿಂದ ಪ್ರತಿಭಟನೆ

• ಉದಯವಾಹಿನಿ, ಬಸವನಬಾಗೇವಾಡಿ

ದಾರಿ ಸಮಸ್ಯೆ ಇತ್ಯರ್ಥಕ್ಕೆ ಕಾನೂನು ತಿದ್ದುಪಡಿ ಮಾಡಿ ತಹಶೀಲ್ದಾರರಿಗೆ ದಾರಿ ಮಾಡಿಕೊಡುವ ಸಂಪೂರ್ಣ ಅಧಿಕಾರ ನೀಡಲು ಅಗ್ರಹ ಲಾಲ್ ಬಹದ್ದೂರ್ ಶಾಸ್ತ್ರಿ ಜಲಾಶಯ ಬಸವಸಾಗರ ಜಲಾಶಯದ ನೀರು ಮರುಹಂಚಿಕೆ ಮಾಡುವುದು ರಾಜ್ಯದ ರೈತರ ಜಮೀನು ದಾರಿ ಸಮಸ್ಯೆ ಬಗೆಹರಿಸಲು ಕಾನೂನು ತಿದ್ದುಪಡಿ ಮಾಡಿ ಸುಗ್ರೀವಾಜ್ಞೆ ಹೊರಡಿಸುವುದು ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಜಲಾಶಯ ಬಸವಸಾಗರ ಜಲಾಶಯದ ನೀರು ಮರುಹಂಚಿಕೆ ಮಾಡುವುದು ಸೇರಿದಂತೆ ವೀರ ಬೇಡಿಕೆಗಳಿಗೆ ಆಗ್ರಹಿಸಿ ಅಖಂಡ ಕರ್ನಾಟಕ ರೈತ ಸಂಘದ ಜಿಲ್ಲಾ ಘಟಕದ ವತಿಯಿಂದ ಬೃಹತ್ ಪ್ರತಿಭಟನೆ ನಡೆಸಿ ಸರಕಾರಕ್ಕೆ ಮನವಿ ಸಲ್ಲಿಸಲಾಯಿತು.

ಜಿಲ್ಲಾಮಟ್ಟದ ಸಭೆಯನ್ನು ಬಸವನ ಬಾಗೇವಾಡಿಯ ಬಸವೇಶ್ವರ ದೇವಸ್ಥಾನದ ಉದ್ಯಾನವನದಲ್ಲಿ ಜಿಲ್ಲಾ ಮಟ್ಟದ ಸಭೆಯಲ್ಲಿ ರೈತರ ಸಮಸ್ಯೆಗಳನ್ನು ಚರ್ಚಿಸಿ ನಂತರ ಬಸವೇಶ್ವರ ದೇವಸ್ಥಾನದಿಂದ ಪಾದಯಾತ್ರೆ ಮೂಲಕ ತಹಶೀಲ್ದಾರ್ ಕಚೇರಿಗೆ ತೆರಳಿ ಪ್ರತಿಭಟನೆ ನಡೆಸಿ ಮುಖ್ಯಮಂತ್ರಿ ಹಾಗೂ ಕಂದಾಯ ಸಚಿವರಿಗೆ ಮತ್ತು ಜಲ ಸಂಪನ್ಮೂಲ ಸಚಿವರಿಗೆ ಬರೆದ ಪ್ರತ್ಯೇಕ ಮನವಿ ಪತ್ರವನ್ನು ಶಿರಸ್ದಾರರ ಎ ಎಚ್ ಬಳೂರಿಗೆ ಅವರಿಗೆ ಮನವಿ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಅಖಂಡ ಕರ್ನಾಟಕ ರೈತ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ, ಅರವಿಂದ್ ಕುಲಕರ್ಣಿ ಹಾಗೂ ನೂತನ ತಾಲ್ಲೂಕ ಘಟಕದ ಅಧ್ಯಕ್ಷರಾದ ಉಮೇಶ್ ವಾಲಿಕಾರ್ ಮಾತನಾಡಿದರು.

ಹಿಂದುಳಿದ ಕ್ಷೇತ್ರವೆನ್ನುವ ಹಣೆಪಟ್ಟಿಗೆ ತಿಲಾಂಜಲಿ ಇಡುವೆ: ಶಾಸಕ

• ಉದಯವಾಹಿನಿ, ಕೂಡ್ಲಿಗಿ

ಕೂಡ್ಲಿಗಿ ತಾಲ್ಲೂಕು ಹಾಗೂ ಕ್ಷೇತ್ರವು ಬಹಳಷ್ಟು ಅತೀ ಹಿಂದುಳಿದಿದೆ ಎನ್ನುವ ಹಣೆಪಟ್ಟಿಯನ್ನು ಅಳಿಸಿ ಹಾಕಿ ಅಭಿವೃದ್ಧಿ ಪಡಿಸುವಲ್ಲಿ ಕ್ಷೇತ್ರದ ಶಾಸಕನಾದ ನಂತರ ನೂರಾರು ಕೋಟಿ ಅನುದಾನ ತರುವ ಜೊತೆಗೆ ಮಾದರಿ ಕ್ಷೇತ್ರವಾಗಿ ಮಾಡುವಲ್ಲಿ ಹಗಲಿರುಳು ಶ್ರಮಿಸುತ್ತಿದ್ದೇನೆ ಎಂದು ಕೂಡ್ಲಿಗಿ ಶಾಸಕ ಡಾ ಶ್ರೀನಿವಾಸ ತಿಳಿಸಿದರು.

ಅವರು ತಾಲ್ಲೂಕಿನ ಹುಡೇಂ ಗ್ರಾಮದಲ್ಲಿ ತಾಯಕನಹಳ್ಳಿಯಿಂದ ಹುಡೇಂವರೆಗೆ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ 8.07 ಕೋಟಿ ರೂ.ವೆಚ್ಚದ ರಸ್ತೆ ಅಗಲೀಕರಣ ಹಾಗೂ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡುತ್ತಾ

ಉದಯವಾಹಿನಿ ಚಿತ್ರ

2023ರಲ್ಲಿ ನಡೆದ ಚುನಾವಣೆ ಸಂದರ್ಭ ರಸ್ತೆಗಳ ಸ್ಥಿತಿ ಕಂಡು ಅಭಿವೃದ್ಧಿ ಮಾಡುವುದಾಗಿ ಕೊಟ್ಟ ಮಾತು ಉಳಿಸಿಕೊಂಡಿದ್ದೇನೆ ,ಕ್ಷೇತ್ರ ಗಡಿಭಾಗದ ರಸ್ತೆಗಳು ತೀರಾ ಹದಗೆಟ್ಟಿದ್ದನ್ನು ಗಮನಿಸಿದ ನಾನು ಶಾಸಕನಾದ ನಂತರ ಸಾಕಷ್ಟು ಅಭಿವೃದ್ಧಿ ಮಾಡುವ ಮೂಲಕ ಜನರಿಗೆ ಸೌಲಭ್ಯ ಒದಗಿಸಿದ್ದೇನೆ.

ಅಲ್ಲದೆ ಕ್ಷೇತ್ರ ವ್ಯಾಪ್ತಿಯಲ್ಲಿ 3 ದಿನದಲ್ಲಿ 30 ಕೋಟಿ ರೂ. ವೆಚ್ಚದ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಿದ್ದೇನೆ. ಇದಲ್ಲದೆ, ಆಸ್ಪತ್ರೆಗಳ ಉನ್ನತೀಕರಣ, ಮೂಲ ಸೌಲಭ್ಯ ಕಲ್ಪಿಸುವುದು ಸೇರಿ ನಾನಾ ಕಾರ್ಯಗಳನ್ನು ಮಾಡಿದ್ದೇನೆ. ಬಡವರು ಮಕ್ಕಳು ಶಿಕ್ಷಣ ಕಲಿಯುವಂಥ ಶಾಲೆಗಳಿಗೆ ಕೊಠಡಿಗಳ ನಿರ್ಮಾಣ, ಶುದ್ಧ ಕುಡಿವ ನೀರಿನ ಘಟಕ ಸೇರಿ ಸಾಕಷ್ಟು ಅಭಿವೃದ್ಧಿಗೆ ಒತ್ತು ನೀಡಿದ್ದೇನೆ. ನಮ್ಮ ಕ್ಷೇತ್ರವು ತೀರಾ ಹಿಂದುಳಿದ ಪ್ರದೇಶವಾಗಿದ್ದರಿಂದ ಅಭಿವೃದ್ಧಿಯೊಂದೇ ನನ್ನ ಗುರಿಯಾಗಿದೆ. ಆ ನಿಟ್ಟಿನಲ್ಲಿ ಎಲ್ಲಾ ಹಳ್ಳಿಗಳಲ್ಲೂ ಅಭಿವೃದ್ಧಿಗೆ ಪಣ ತೊಟ್ಟಿದ್ದೇನೆ ಎಂದು ತಿಳಿಸಿದರು. ಪ್ಯಾರಿಮಾಬೀ ಗನಿಸಾಬ್, ಮುಖಂಡರಾದ ಕೆ.ಮೂರ್ತೆಪ್ಪ ಸಾಹುಕಾರ, ರಾಮಚಂದ್ರಪ್ಪ, ಬೋಸೆಮಲ್ಲಯ್ಯ, ಬಗ್ಗಲರ ಪಾಪಣ್ಣ, ಗುಡ್ಡದ ಬೋಸಯ್ಯ, ಅಜ್ಜಣ್ಣ, ಯಲ್ಲಪ್ಪ, ಜಿ.ಓಬಣ್ಣ ಸದಸ್ಯರು ಇದ್ದರು.

ಪುಲ್ವಾಮಾ ಇತಿಹಾಸದ ದುಃಖದ ಭಾಗ ನಮ್ಮ ವೀರ ಸೈನಿಕರು ಮಾಡಿದ ತ್ಯಾಗ ನೆನಪಿಸುತ್ತೆ: ಅನೀಲಕುಮಾರ ಬೀರಾದಾರ

• ಉದಯವಾಹಿನಿ, ಚಿಂಚೋಳಿ

ಪುಲ್ವಾಮಾ ನಮ್ಮ ಇತಿಹಾಸದ ದುಃಖದ ಭಾಗವಾಗಿದ್ದು ನಮ್ಮ ವೀರ ಸೈನಿಕರು ಮಾಡಿದ ತ್ಯಾಗಗಳನ್ನು ನೆನಪಿಸುತ್ತದೆ,ಅವರ ಶೌರ್ಯ ಯಾವಾಗಲೂ ನೆನಪಿಸಿಕೊಳ್ಳುತ್ತೇವೆ ಎಂದು ಆರ್.ಟಿ ಐ ತಾಲ್ಲೂಕಾಧ್ಯಕ್ಷ ಅನೀಲಕುಮಾರ ಬೀರಾದಾರ ಅಣವಾರ ಹೇಳಿದರು.

ಪಟ್ಟಣದಲ್ಲಿ ರಾತ್ರಿ ಗಾಂಧಿ ವೃತ್ತದ ಬಳಿ ಪುಲ್ವಾಮಾ ದಾಳಿಯಲ್ಲಿ ಹುತಾತ್ಮರಾದ ವೀರ ಯೋಧರಿಗೆ ಕ್ಯಾಂಡಲ್ ದ್ವಿಪ ಹಚ್ಚುವ ಮೂಲಕ ಭಾರತೀಯ ವಿಧ್ಯಾನಿಕೇತನ ಕಿರಿಯ ಪ್ರಾಥಮಿಕ ಶಾಲೆಯ ಮಕ್ಕಳು ಮತ್ತು ವಿವಿಧ ರಾಜಕೀಯ ಮುಖಂಡರು,ಸಂಘಟನೆಯ ಮುಖಂಡರು ಗೌರವ ನಮನ ಸಲ್ಲಿಸಿ ಮಾತನಾಡಿದ ಅವರು,ಪುಲ್ವಾಮಾ ಎಂಬುವುದು ನೋವು ತರುವ ಹೆಸರು ಆದರೆ ನಮ್ಮ ಸ್ಥಿತಿಸ್ಥಾಪಕತ್ವವನ್ನು ಸಹ ತೋರಿಸುತ್ತದೆ, ಹುತಾತ್ಮರನ್ನು ಗೌರವಿಸುವ ಮೂಲಕ ನಮ್ಮ ದೇಶಕ್ಕೆ ಹಾನಿ ಮಾಡಲು ಬಯಸುವವರ ವಿರುದ್ಧ ಒಗ್ಗಟ್ಟಿನಿಂದ ನಾವೆಲ್ಲರೂ ನಿಲ್ಲುವುದಾಗಿ ನಾವು ಪ್ರತಿಜ್ಞೆ ಮಾಡಬೇಕು. 2019ರ ಫೆ.14ರಂದು ಮಧ್ಯಾಹ್ನ ವೇಳೆ ಜಮ್ಮು ಕಾಶ್ಮೀರ ಶ್ರೀನಗರ ರಾಷ್ಟ್ರೀಯ ಹೆದ್ದಾರಿ ಕೇಂದ್ರ ಮೀಸಲು ಪೋಲಿಸ್ ಪಡೆ 2000ಕ್ಕೂ ಹೆಚ್ಚು ಸದಸ್ಯರ ಬೆಂಗಾವಲು ಪಡೆಯು ಪ್ರಯಾಣಿಸುತ್ತಿತ್ತು ಏಕಾಏಕಿ ನಮ್ಮ ಶತ್ರುಗಳು ನಮ್ಮ ಬಸ್ಸಿಗೆ ಡಿಕ್ಕಿ ಹೊಡೆದು ಭಾರಿ ಸ್ಫೂಟಕ್ಕೆ ಕಾರಣವಾಗಿ ಇತ್ತೀಚಿನ ಇತಿಹಾಸದಲ್ಲಿ ಭಾರತೀಯ ಭದ್ರತಾ ಪಡೆಗಳ ಮೇಲೆ ನಡೆದ ಅತ್ಯಂತ ರಕ್ತಸಿಕ್ತ ದಾಳಿಗಳಲ್ಲಿ ಒಂದಾದ ಈ ದಾಳಿಯು ದುರಂತವಾಗಿ ನಮ್ಮ 40ಜನ ಸೈನಿಕರನ್ನು ಬಲಿ ತೆಗೆದುಕೊಂಡಿತ್ತು.

ಹಾಗಾಗಿ ನಾವೆಲ್ಲರೂ ಒಗ್ಗಟ್ಟಿನಿಂದ ಇರಬೇಕು ಮೊದಲು ದೇಶ ಆಮೇಲೆ ಜಾತಿಧರ್ಮ ದೇಶ ಉಳಿದರೆ ಮಾತ್ರ ನಾವೆಲ್ಲರೂ ಉಳಿಯಲು ಸಾಧ್ಯ ಇಂಥಹ ಇತಿಹಾಸವನ್ನು ನಾವೆಲ್ಲರೂ ತಿಳಿದುಕೊಳ್ಳಬೇಕು,ಗಡಿಯಲ್ಲಿ ಯೋಧರು ದೇಶ ಕಾಯುತ್ತಿದ್ದಾರೆ ನಾವು ದೇಶದ ಒಳಗೆ ನೆಮ್ಮದಿ ಜೀವನ ಕಳೆಯುತ್ತಿದ್ದೇವೆ ಎಂದು ನೆನಪಿಸಿಕೊಳ್ಳಬೇಕು ಎಂದರು. ಆರ್.ಗಣಪತರಾವ, ಯುವ ಕರ್ನಾಟಕ ವೇದಿಕೆ ಜಿಲ್ಲಾಧ್ಯಕ್ಷ ಸಚಿನ್ ಚವ್ಹಾಣ, ಅಮರ ಲೋಡನೂರ್,ಕುರುಬ ಸಮಾಜದ ಅಧ್ಯಕ್ಷ ಹಣಮಂತ ಪೂಜಾರಿ,ಚೇತನ್ ನಿರಾಳಕರ್, ಅಂಬರೀಶ್ ರಾಯಕೋಡ, ಸಾಗರ್‌ಆನಂದಿ, ಉಮೇಶ ಬೆಳಕೇರಿ,ಅಭಿಷೇಕ,ಆರ್.ಟಿ.ಐ ಜಿಲ್ಲಾಧ್ಯಕ್ಷ ರಾಜೇಂದ್ರ ಪ್ರಸಾದ ,ಮುದ್ದುಮಕ್ಕಳು ಇದ್ದರು.

ಉದಯವಾಹಿನಿ ಚಿತ್ರ

ನಾವೆಲ್ಲರೂ ಮೊದಲು ಭಾರತ ದೇಶದ ಮಕ್ಕಳು ಪುಲ್ವಾಮಾ ದಾಳಿಯಲ್ಲಿ ಹುತಾತ್ಮರಾದ ಯೋಧರಿಗೆ ಜೀವಯಿರುವವರೆಗೆ ಸ್ಮರಿಸೋಣ ನಮ್ಮ ಯೋಧರು ಕಷ್ಟ ಪಟ್ಟು ದೇಶದ ಗಡಿ ಭಾಗದಲ್ಲಿ ಶತ್ರುಗಳು ನುಸುಳದಂತೆ ಕಾಯುತ್ತಾರೆ ಆಗ ನಾವೆಲ್ಲರೂ ದೇಶದ ಒಳಗೆ ಆರೋಗ್ಯವಂತರಾಗಿದ್ದೇವೆ
-ಕೆಎಂ ಬಾರಿ, ಹಿರಿಯ ಮುಖಂಡ

ಸ್ತನ ಕ್ಯಾನ್ಸರ್ ಕುರಿತು ಮಹಿಳೆಯರಲ್ಲಿ ಜಾಗೃತಿ ಅವಶ್ಯ ಡಾ. ಮಂಜುನಾಥ್, ಸರ್ಕಾರಿ ಆಸ್ಪತ್ರೆ ಹೊಳಲ್ಕೆರೆ

• ಉದಯವಾಹಿನಿ, ಚಿತ್ರದುರ್ಗ

ಭಾರತೀಯ ವೈದ್ಯಕೀಯ ಸಂಘದ ಹೊಳಲ್ಕೆರೆ ಶಾಖೆ ಹಾಗೂ ಇಂಡಿಯಾನಾ ಎಸ್ ಜಿ ಎಂ ಹಾಟ್ ಸೆಂಟರ್, ಚಿತ್ರದುರ್ಗ ಇವರ ಸಹಯೋಗದಲ್ಲಿ ಭಾರತೀಯ ಯೋಗ ಶಿಕ್ಷಣ ಸಂಸ್ಥೆ ಚಿತ್ರದುರ್ಗ ಇವರು ದಿನಾಂಕ 15 ಫೆಬ್ರವರಿ 2025ರ ಶನಿವಾರ ನಗರದ ತುರುವನೂರು ರಸ್ತೆಯ ಶ್ರೀ ಪ್ರಸನ್ನ ವೆಂಕಟೇಶ್ವರ ಕಲ್ಯಾಣ ಮಂಟಪದಲ್ಲಿ ಸಾರ್ವಜನಿಕರಿಗಾಗಿ ಉಚಿತ ಆರೋಗ್ಯ ತಪಾಸಣೆ ಶಿಬಿರ ಏರ್ಪಡಿಸಿದ್ದರು. ಸುಮಾರು 50ಕ್ಕೂ ಹೆಚ್ಚು ಜನರು ಇದರ ಲಾಭವನ್ನು ಪಡೆದರು ಆರೋಗ್ಯ ತಪಾಸಣೆ ಗುಂಬಣ್ಣ ಮಹಿಳೆಯರಿಗಾಗಿ ಆಯೋಜಿಸಿದ್ದ ಮಹಿಳೆಯರ ಸ್ತಾನ ಕ್ಯಾನ್ಸರ್ ಕುರಿತು ವಿಶೇಷ ಮಾಹಿತಿ ನೀಡಿದ ಹೊಳಲ್ಕೆರೆ ಸರ್ಕಾರಿ ಆಸ್ಪತ್ರೆಯ ವೈದ್ಯರಾದ ಡಾಕ್ಟರ್ ಮಂಜುನಾಥ್ ಮಾತನಾಡಿ ಸ್ತನ ಕ್ಯಾನ್ಸರ್ ಒಂದು ಗಂಭೀರವಾದ ಕಾಯಿಲೆಯಾಗಿದ್ದು, ಅದರ ಬಗ್ಗೆ ಜಾಗೃತರಾಗಿರುವುದು ಮತ್ತು ಆರಂಭಿಕ ಹಂತದಲ್ಲಿ ಪತ್ತೆಹಚ್ಚುವುದು ಬಹಳ ಮುಖ್ಯ. ಸ್ತನದಲ್ಲಿ ಯಾವುದೇ ಬದಲಾವಣೆಗಳನ್ನು ಗಮನಿಸಿದರೆ, ತಕ್ಷಣ ವೈದ್ಯರನ್ನು ಸಂಪರ್ಕಿಸಿ ಸೂಕ್ತ ಚಿಕಿತ್ಸೆ ಪಡೆದರೆ ತಕ್ಷಣವೇ ಕಾಯಿಲೆಯನ್ನು ಸಂಪೂರ್ಣ ಗುಣಪಡಿಸಬಹುದಾಗಿದೆ ಎಂದು ಹೇಳಿದರು. ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಮಧುಮೇಹ ರಕ್ತದೊತ್ತಡ ಹಾಗೂ ಹೃದಯ ತಪಾಸಣೆ ನಡೆಸಲಾಯಿತು.

ಭಾರತೀಯ ಯೋಗ

ದಿನ ಭವಿಷ್ಯ

ರಾಹುಕಾಲ	ಸಾಯಂಕಾಲ	04:30 ರಿಂದ 06:00
ಗುಳಿಕಕಾಲ	ಮಧ್ಯಾಹ್ನ	03:00 ರಿಂದ 04:30
ಯಮಗಂಡಕಾಲ	ಮಧ್ಯಾಹ್ನ	12:00 ರಿಂದ 01:30

ಮೇಷ ಇಂದು ಹಿಂದಿನ ಕೆಟ್ಟ ನಿರ್ಧಾರಗಳು ಹತಾಶೆ ಮತ್ತು ಮಾನಸಿಕ ಪ್ರಕ್ಷುಬ್ಧತೆಗೆ ಕಾರಣವಾಗುತ್ತದೆ –ನೀವು ಮುಂದೇನು ಮಾಡಬೇಕೆಂದು ನಿರ್ಧರಿಸಲಾಗದೇ ಸಲುಕಿಕೊಂಡಿರಬಹುದು.

ವೃಷಭ ಆರೋಗ್ಯವು ಇತರರೊಂದಿಗೆ ಸಂತೋಷವನ್ನು ಹಂಚಿಕೊಳ್ಳುವ ಮೂಲಕ ಅರಳುತ್ತದೆ. ನಿಮ್ಮ ಜೀವನ ಸಂಗಾತಿಯೊಂದಿಗೆ ಸೇರಿ ಇಂದು ನೀವು ಭವಿಷ್ಯಕ್ಕೆ ಯಾವುದೇ ಆರ್ಥಿಕ ಯೋಜನೆಯನ್ನು ಮಾಡಬಹುದು.

ಮಿಥುನ ಇಂದು ಧಾರ್ಮಿಕ ಮತ್ತು ಆಧ್ಯಾತ್ಮಿಕ ಆಸಕ್ತಿಗಳನ್ನು ಅನುಸರಿಸಲೂ ಒಂದು ಒಳ್ಳೆಯ ದಿನ. ಹಿಂದೆ ತಮ್ಮ ಹಣವನ್ನು ಹೂಡಿಕೆ ಮಾಡಿದ ಜನರು ಇಂದು ಆ ಹಣದಿಂದ ಲಾಭ ಪಡೆಯುವ ಸಾಧ್ಯತೆಯಿದೆ.

ಕರ್ಕಾಟಕ ಇಂದು ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ಮನೆಯ ಸಣ್ಣ ವಸ್ತುಗಳ ಮೇಲೆ ನಿಮ್ಮ ಸಾಕಷ್ಟು ಹಣ ಹಾಳಾಗಬಹುದು, ಇದರ ಕಾರಣದಿಂದ ನೀವು ಮಾನಸಿಕ ಒತ್ತಡಗೊಳಗಾಗಬಹುದು.

ಸಿಂಹ ನಿಮ್ಮಲ್ಲಿ ಇಂದು ಚುರುಕುತನವನ್ನು ನೋಡಬಹುದು. ಆರೋಗ್ಯವು ನಿಮ್ಮನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ನೀವು ನಿಮ್ಮ ತಂತ್ರಗಳನ್ನು ಅಳವಡಿಸಿದಲ್ಲಿ ಇಂದು ಸ್ವಲ್ಪ ಹೆಚ್ಚುವರಿ ಹಣ ಸಂಪಾದಿಸುತ್ತೀರಿ.

ಕನ್ಯಾ ನಿಮಗೆ ಹಣದ ಅಗತ್ಯ ವಿರಬಹುದು ಆದರೆ ಅದು ನಿಮಗೆ ದೊರೆಯುವುದಿಲ್ಲ. ಒಂದು ಕುಟುಂಬದ ಒಟ್ಟಾಗುವಿಕೆಯಲ್ಲಿ ನೀವೇ ಕೇಂದ್ರಬಿಂದುವಾಗಿರುತ್ತೀರಿ. ಶಾಶ್ವತವಾದ ಪ್ರೀತಿ ನಿಮ್ಮ ಪ್ರೀತಿಪಾತ್ರರಿಗೆ ಒಂದು ಸೆಲೆಯಾಗಿದೆ.

ತುಲಾ ಸ್ನೇಹಿತರು ಮತ್ತು ಕುಟುಂಬದ ಸದಸ್ಯರು ನಿಮಗೆ ಪ್ರೋತ್ಸಾಹ ನೀಡುತ್ತಾರೆ. ಇಂದು ನಿಮ್ಮ ಪ್ರೇಮಿಯನ್ನು ನಿರಾಸೆಗೊಳಿಸಬೇಡಿ ? ಇದು ನಂತರ ನಿಮ್ಮನ್ನು ಪಶ್ಚಾತ್ತಾಪಗೊಳ್ಳುವಂತೆ ಮಾಡುತ್ತದೆ.

ವೃಶ್ಚಿಕ ನಿಮ್ಮನ್ನು ನೀವೇ ನೋಡಿಕೊಳ್ಳುವ ಬಯಕೆಗೆ ಇತರರ ಅಗತ್ಯಗಳು ಕಡಿವಾಣ ಹಾಕುತ್ತವೆ. ವಿಶ್ರಾಂತಿ ಪಡೆಯುವ ಸಲುವಾಗಿ ನೀವು ಇಷ್ಟಪಡುವುದನ್ನೇನಾದರೂ ಮಾಡಿ.

ಧನಸ್ಸು ಇದು ಹೃದಯ ರೋಗಿಗಳಿಗೆ ಕಾಫಿ ಬಿಡಲು ಸರಿಯಾದ ಸಮಯ. ಯಾವುದೇ ಮುಂದುವರಿದ ಬಳಕೆ ನಿಮ್ಮ ಹೃದಯದ ಮೇಲೆ ಅನವಶ್ಯಕ ಒತ್ತಡ ತರುತ್ತದೆ.

ಮಕರ ನಿಮ್ಮ ಪ್ರಚಂಡ ಪ್ರಯತ್ನ ಹಾಗೂ ಕುಟುಂಬದ ಸದಸ್ಯರ ಸಕಾಲಿಕ ಬೆಂಬಲ ಬಯಸಿದ ಫಲಿತಾಂಶಗಳು ತರುತ್ತದೆ. ಆದರೆ ಪ್ರಸ್ತುತ ಚೇತನವನ್ನು ಕಾಯ್ದುಕೊಳ್ಳಲು ಶ್ರಮಿಸುತ್ತಿರಿ.

ಕುಂಭ ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ನೀವು ಪ್ರಯಾಣ ಮಾಡುತ್ತಿದ್ದರೆ ನಿಮ್ಮ ಅಮೂಲ್ಯ ವಸ್ತುಗಳ ಬಗ್ಗೆ ವಿಶೇಷ ಗಮನ ಹರಿಸಿ.

ಮೀನ ನಿಮ್ಮ ಸಾಮಾನ್ಯ ಜ್ಞಾನದ ಜೊತೆಗೆ ನಿಮ್ಮ ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸು ತರುವುದರಿಂದ ತಾಳ್ಮೆಯಿಂದಿರಿ. ಬಯಸದೆ ಇರುವ ಯಾವುದೇ ಅತಿಥಿ ಇಂದು ನಿಮ್ಮ ಮನೆಗೆ ಬರಬಹುದು.

ಸಂತ ಶ್ರೀ ಸೇವಾಲಾಲ್ ಜಯಂತಿಯಲ್ಲಿ ಸಾಹಿತಿ ಖಂಡೂ ಬಂಜಾರ

ಭೂಮಿಯ ಮೇಲಿರುವ ಸಕಲ ಜೀವರಾಶಿಗಳಿಗೂ ಒಳ್ಳೆಯದನ್ನೇ ಬಯಸಿದವರು ಸಂತ ಶ್ರೀ ಸೇವಾಲಾಲ್: ಬಿ.ಕೆ.ನಾಯ್ಕ್

• ಉದಯವಾಹಿನಿ ಚಿತ್ರದುರ್ಗ

ಉದಯವಾಹಿನಿ ಚಿತ್ರ

ಭೂಮಿಯ ಮೇಲಿರುವ ಸಕಲ ಜೀವರಾಶಿಗಳಿಗೂ ಒಳ್ಳೆಯದನ್ನೇ ಬಯಸಿದವರು ಸಂತ ಶ್ರೀ ಸೇವಾಲಾಲ್ ಎಂದು ಕೊಳಹಾಳ್ ಸರ್ಕಾರಿ ಪ್ರೌಢ ಶಾಲೆ ಶಿಕ್ಷಕ ಹಾಗೂ ಸಾಹಿತಿ ಖಂಡೂ ಬಂಜಾರ (ಬಿ.ಕೆ.ನಾಯ್ಕ್) ಹೇಳಿದರು. ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಸಂತ ಶ್ರೀ ಸೇವಾಲಾಲ್ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರಪಂಚದಲ್ಲಿ ಇರುವವರೆಲ್ಲರಿಗೂ ಒಳ್ಳೆಯದಾಗಲಿ ಎಂದು ಲೇಸನ್ನು ಬಯಸಿದ ಸಂತ ಸೇವಾಲಾಲ್ ಅವರು, ಮರ ಕಡೆದು ಜೀವ ಇಲ್ಲದಿರುವ ಒಣಗಿದ ಬಡ್ಡೆಯೂ ಸಹ ಚಿಗುರೊಡೆಯಲಿ ಎಂದು ದೇವರಲ್ಲಿ ಪ್ರಾರ್ಥಿಸಿದ ಏಕೈಕ ವ್ಯಕ್ತಿ ಎಂದು ಹೇಳಿದರು.

ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮಾತನಾಡಿ, ಬಂಜಾರ ಎಂಬುವುದು ಒಂದು ಜಾತಿ ಅಲ್ಲ. ಅದೊಂದು ಸಂಸ್ಕೃತಿ. ಅವರ ಕರಕುಶಲತೆ ವಿಭಿನ್ನ ಹಾಗೂ ವಿಶಿಷ್ಟ, ಸೃಜನಶೀಲತೆಯಿಂದ ಕೂಡಿದೆ ಎಂದು ಹೇಳಿದರು.

ಬಂಜಾರ ಸಮುದಾಯ ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದು. ತಮ್ಮ ದುಡಿಮೆಯ ಜೊತೆಗೆ ಸರ್ಕಾರದ ಮೀಸಲಾತಿ, ಸೌಲಭ್ಯ ಸದ್ಬಳಕೆ ಮಾಡಿಕೊಂಡು ಮಕ್ಕಳಿಗೆ ಶಿಕ್ಷಣ ಕೊಡಿಸಬೇಕು. ಶಿಕ್ಷಣದಿಂದ ಮಾತ್ರ ಮಾರ್ಪಾಡು ಸಾಧ್ಯ ಎಂದು ಹೇಳಿದರು. ಉಪವಿಭಾಗಾಧಿಕಾರಿ ವೆಂಕಟೇಶ್ ನಾಯ್ಕ್ ಮಾತನಾಡಿ, ಸಮುದಾಯ ಹಾಗೂ ಇತಿಹಾಸದ ಉಳಿವಿಗಾಗಿ ಸಂಘಟನೆ ಅವಶ್ಯಕವಾಗಿದೆ. ಸಂಸ್ಕೃತಿ, ಸಂಸ್ಕಾರ ಉಳಿಸಿಕೊಂಡು ಮುಂದಿನ ಪೀಳಿಗೆ ಕೊಂಡ್ಯೊಯುವ ಕೆಲಸವಾಗಬೇಕು ಎಂದು ಅಭಿಪ್ರಾಯಪಟ್ಟರು. ಜಿಲ್ಲಾ ಬಂಜಾರ (ಲಂಬಾಣಿ) ಸಂಘದ ಅಧ್ಯಕ್ಷ ಆರ್. ನಾಗೇಂದ್ರನಾಯ್ಕ ಮಾತನಾಡಿ, ಮೂರು ಶತಮಾನಗಳ ಹಿಂದೆಯೇ ಸಮಾಜವನ್ನು ಸಂಘಟಿಸಿರುವಂತಹ ಮಹಾನ್ ಗುರುಗಳಾದ ಸೇವಾಲಾಲ್ ಅವರ ಆದರ್ಶಗಳನ್ನು ನಾವು ನಮ್ಮ ಜೀವನದಲ್ಲಿ ಅಳವಡಿಸಿಕೊಂಡರೆ ನಿಜವಾಗಿಯೂ ಸಮಾಜದ ಮುಖ್ಯವಾಹಿನಿಗೆ ಬರಲು ಸಾಧ್ಯವಿದೆ ಎಂದು ಹೇಳಿದರು.

ಸರ್ಕಾರದ ಸವಲತ್ತು ಪಡೆಯಲು ಸಹ ನಾವು ಸಂಘಟನೆಯಾಗಬೇಕು. ಯಾವುದೇ ಸಮುದಾಯ ಮುಖ್ಯವಾಹಿನಿಗೆ ಬರಲು ಶಿಕ್ಷಣ ಬಹಳ ಮುಖ್ಯ. ಶಿಕ್ಷಣ ಕೊಟ್ಟಾಗ ಮಾತ್ರ ಸಮುದಾಯ ಮುಖ್ಯವಾಹಿನಿಗೆ ಬರಲಿದೆ. ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಕೊಡುವ, ಆರ್ಥಿಕವಾಗಿ ಹಿಂದುಳಿದವರಿಗೆ ಶಿಕ್ಷಣ ಕೊಡುವ ಕೆಲಸ ಮಾಡಬೇಕಿದೆ ಎಂದು ತಿಳಿಸಿದರು.

ಸರ್ಕಾರದ ಸೌಲಭ್ಯ ಸದ್ಬಳಕೆ

> ನಮ್ಮ ದೇಹದಲ್ಲಿರುವ ಕಾಮ, ಕ್ರೋಧ, ಲೋಭ, ಮೋಹ, ಮದ, ಮಾತ್ಸರ್ಯ ಎಂಬ ಅರಿಷಡ್ವರ್ಗಗಳನ್ನು ಸುಟ್ಟು ಹಾಕಬೇಕು. ಸತ್ಯ ಮತ್ತು ಧರ್ಮವನ್ನು ಮುನ್ನಡೆಸಬೇಕು. ಜೊತೆಗೆ ನಿಮಗೆ ಕೈಲಾದರೆ ಹಸಿದವರಿಗೆ ಅನ್ನ, ನೀರು ಕೊಡಿ ಎಂಬ ಸಂದೇಶವನ್ನು ಸಂತ ಸೇವಾಲಾಲ್ ಅವರು ಸಾರಿದ್ದಾರೆ ಎಂದರು. ಸಂತ ಶ್ರೀ ಸೇವಾಲಾಲ್ ಅವರ ತತ್ವಾದರ್ಶ, ಮಾರ್ಗದರ್ಶನಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡು ಉತ್ತಮ ಸಮಾಜ ನಿರ್ಮಿಸಿಲು ನಾವೆಲ್ಲರೂ ಶ್ರಮಿಸೋಣ –ಬಿ.ಕೆ.ನಾಯ್ಕ್
> ಶಾಲೆ ಶಿಕ್ಷಕ ಹಾಗೂ ಸಾಹಿತಿ

> ಪ್ರತಿ ವರ್ಷದಂತೆ ಈ ಬಾರಿಯೂ ಸಂತ ಶ್ರೀ ಸೇವಾಲಾಲ್ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದೆ. ದಾರ್ಶನಿಕರು, ಸಮಾಜ ಸೇವಕರು, ಪಾವಡ ಪುರುಷರು, ಗೋಪಾಲಕರು, ಸಂತರು, ಶ್ರೇಷ್ಠರೂ ಎನಿಸಿಕೊಂಡಿರುವ ಸಂತ ಶ್ರೀ ಸೇವಾಲಾಲ್ ಜಯಂತಿ ಆಚರಣೆ ಮಾಡುತ್ತಿರುವುದು ಸ್ವಾಗತಾರ್ಹ ವಿಚಾರವಾಗಿದೆ ಎಂದರು. ಎಲ್ಲಾ ಜನಾಂಗದಲ್ಲಿಯೂ ಶ್ರೇಷ್ಠ ದಾರ್ಶನಿಕರು ಹುಟ್ಟಿ ತಮ್ಮ ಜ್ಞಾನವನ್ನು ಜನಾಂಗಕ್ಕೆ ಹಾಗೂ ಸಮಾಜಕ್ಕೆ ಧಾರೆ ಎರೆದಿದ್ದಾರೆ. ಸಂತ ಶ್ರೀ ಸೇವಾಲಾಲ್ ಅವರು ಮಹಾಜ್ಞಾನಿಯೂ ಹಾಗೂ ತ್ರಿಕಾಲ ಜ್ಞಾನಿ ಎಂತಲೂ ಕರೆಯುತ್ತೇವೆ ಎಂದರು. ನಮ್ಮ ಬಂಜಾರ ಭಾಷೆ ಇಡೀ ವಿಶ್ವದಲ್ಲಿಯೇ ಒಂದು ತರನಾಗಿದೆ ಎಂದು ತಿಳಿಸಿದ ಅವರು, ಅನೇಕ ಲಾವಣಿ ಪದಗಳು, ಲಂಬಾಣಿ ನೃತ್ಯಗಳು, ಭಜನೆ ಹೀಗೆ ಅನೇಕ ಬಂಜಾರ ಸಂಸ್ಕೃತಿಯ ಮೂಲಕ ಸಂತ ಶ್ರೀ ಸೇವಾಲಾಲ್ ಅವರನ್ನು ಸ್ಮರಿಸಿಕೊಳ್ಳಲಾಗುತ್ತದೆ
> –ಕೆ.ಮಂಜುನಾಥ ನಾಯ್ಕ್, ಜಿಲ್ಲಾ ಬಂಜಾರ (ಲಂಬಾಣಿ) ಸಂಘದ ಕಾರ್ಯದರ್ಶಿ

ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ. ಗುರುನಾಥ, ಆಹಾರ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್, ಜಿಲ್ಲಾ ಬಂಜಾರ (ಲಂಬಾಣಿ) ಸಂಘದ ಗೌರವಾಧ್ಯಕ್ಷ ಜಿ.ರಾಜನಾಯ್ಕ, ಮುಖಂಡರಾದ ಮಾಧವ ನಾಯ್ಕ್, ಪ್ರಕಾಶ್ ರಮಾನಾಯ್ಕ್, ವಸಂತ್ ನಾಯ್ಕ್, ರಮೇಶ್ ನಾಯ್ಕ್, ದುರ್ಗ ನಾಯ್ಕ್, ರಮೇಶ್ ನಾಯ್ಕ್, ಸುಮೀತ್ ನಾಯ್ಕ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು. ಹೊಸದುರ್ಗ ತಾಲ್ಲೂಕು ಪೀಲಾಪುರ ಗ್ರಾಮದ ಕಂಠೇಶ್ ಮತ್ತು ತಂಡದವರು ಗೀತಗಾಯನ ನಡೆಸಿಕೊಟ್ಟರು.

ಚಿತ್ರದುರ್ಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಸಂತ ಶ್ರೀ ಸೇವಾಲಾಲ್ ಜಯಂತಿ ಕಾರ್ಯಕ್ರಮದಲ್ಲಿ ಸಂತ ಶ್ರೀ ಸೇವಾಲಾಲ್ ಭಾವ ಚಿತ್ರಕ್ಕೆ ಸಂಸದ ಗೋವಿಂದ ಎಂ.ಕಾರಜೋಳ ಪುಷ್ಪನಮನ ಸಲ್ಲಿಸಿದರು. ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ವೆಂಕಟೇಶ್ ನಾಯ್ಕ್ ಇದ್ದರು.

ಕೊಂಕಲ ಶ್ರೀ ದ್ಯಾವಮ್ಮ ದೇವಿಯ ಗಂಗಾಸ್ನಾನ ಕಾರ್ಯಕ್ರಮ

• ಉದಯವಾಹಿನಿ ವಡಗೇರಾ

ಉದಯವಾಹಿನಿ ಚಿತ್ರ

ಪ್ರತಿ ವರ್ಷದಂತೆ ಈ ವರ್ಷವೂ ತಾಲ್ಲೂಕಿನ ಕೊಂಕಲ ಗ್ರಾಮದ ಗ್ರಾಮ ದೇವತೆಯಾದ ಶ್ರೀ ದ್ಯಾವಮ್ಮದೇವಿಯ ಮೂರ್ತಿಯ ಗಂಗಾಸ್ನಾನ ಪೂಜೆಯ ಪ್ರಯುಕ್ತ ಗ್ರಾಮದ ಹತ್ತಿರವಿರುವ ಕೃಷ್ಣಾ ನದಿಗೆ ತೆರಳಿ ಅಲ್ಲಿ ದೇವಿಯ ಮೂರ್ತಿಗೆ ಗಂಗಾಸ್ನಾನ ಪೂಜೆಯ ಅತ್ಯಂತ ಸಂಭ್ರಮ ಸಡಗರದಿಂದ ಜರುಗಿತು.

ಗಂಗಾಸ್ನಾನದ ನಂತರ ಡೊಳ್ಳು ಬಾಜಾ ಭಜಂತ್ರಿ ಮಹಿಳೆಯರ ತುಂಬಾ ಕಳಸದ ಜೊತೆಗೆ ವಿವಿಧ ವಾದ್ಯಗಳೊಂದಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮೂಲಕ ಗ್ರಾಮಕ್ಕೆ ತಲುಪಿದ ನಂತರ ಶ್ರೀ ದ್ಯಾವಮ್ಮ ದೇವಿಯ ದೇವಸ್ಥಾನದಲ್ಲಿ ದೇವಿಯ ಮೂರ್ತಿಯನ್ನು ಪ್ರತಿಷ್ಠಾಪಿಸಲಾಯಿತು .ನಂತರ ಗ್ರಾಮದ ಭಕ್ತಾದಿಗಳು ದೇವಿಗೆ ಊಡಿ ತುಂಬಿ ಪೂಜೆ ಸಲ್ಲಿಸಿ ನೈವೇದ್ಯ ಅರ್ಪಿಸಿದರು. ಈ ಸಂದರ್ಭದಲ್ಲಿ ಪರಮಪೂಜ್ಯ ಶ್ರೀ ನಿಂಗಣ್ಣ ತಾತಾ ಗೊಂದೆನೂರ, ದೇವಣ್ಣ ವಿಶ್ವಕರ್ಮ ಚನ್ನೂರ, ಅಮೀನರಡ್ಡಿ ಪಾಟೀಲ, ಅಶೋಕ ಡೋಣ್ಣೆಗೌಡರ, ಭೀಮರಾಯ ಬಾವೂರ, ಬಸಲಿಂಗಪ್ಪ ತೇಲಗರ, ದೊಡ್ಡಯ್ಯಸ್ವಾಮಿ, ಶರಣಯ್ಯಸ್ವಾಮಿ, ಬಸ್ಸಯ್ಯ ಕೊದಂಡ, ಶಿವಕುಮಾರ ಕೊಂಕಲ್, ನಿಂಗಯ್ಯ, ಮಾಳಿಂಗರಾಯ ನಾಗರಾಳ, ಭೀರಲಿಂಗ ಪೂಜಾರಿ, ದೇವರಾಜ ಡೋಣ್ಣೆಗೌಡರ, ಶರಣಪ್ಪ ಮಡಿವಾಳ, ಸಾಹೇಬರಡ್ಡಿ ಪೋಟೋ, ಮಾನಪ್ಪ ವೆಂಕಟಪೂರ, ಕರೆಪ್ಪ ಜಲ್ಲಿ, ಸೈದಪ್ಪ ಹಳಿಮನಿ, ಶರಣಪ್ಪ, ಅಯ್ಯಳಪ್ಪ, ಮಲ್ಲಿಕಾರ್ಜುನ ಹೂಗಾರ, ಆಂಜನೇಯ ಬಾವೂರ, ಶಿವರಾಜ, ಚಂದ್ರಾಯ, ದೇವರಾಜ, ಮಲ್ಲಣ್ಣ ಹಲಗಿ, ಮರೆಪ್ಪ ಹಲಗಿ, ಮಂಜುನಾಥ ಕಲೆಗಾರ, ಬಸವರಾಜ ಹಾಗೂ ಗ್ರಾಮಸ್ಥರು ಭಾಗವಹಿಸಿದ್ದರು.

ಉಪನಿರ್ದೇಶಕ ಶ್ರೀಧರ ಅಮಾನತುಗೊಳಿಸಿ: ಅಭಿಕಾಳೆ

• ಉದಯವಾಹಿನಿ, ಬೀದರ

ಉದಯವಾಹಿನಿ ಚಿತ್ರ

ಮಿಶನ್ ಶಕ್ತಿ ಯೋಜನೆಯಲ್ಲಿ ಜಿಲ್ಲಾ ಸಂಯೋಜಕರ ಹುದ್ದೆ, ಸ್ಪೆಶಲಿಸ್ಟ್ ಇನ್ ಫೈನಾನ್ಸಿಯಲ್ ಲಿಟರೆಸಿ ಐಂಡ್ ಅಕೌಂಟೆಂಟ್ ಹುದ್ದೆ, ರಾಷ್ಟ್ರೀಯ ಪೋಷಣ್ ಅಭಿಯಾನ ಯೋಜನೆಯಲ್ಲಿ ತಾಲ್ಲೂಕಾ ಸಂಯೋಜಕ ಭಾಲ್ಕಿ ಹಾಗೂ ಸರ್ಕಾರಿ ಆಸ್ಪತ್ರೆಯ ಸಖಿ ಒನ್ ಸ್ಟಾಪ್ ಸೆಂಟರ್ ಘಟಕದಲ್ಲಿ ಆಡಳಿತಾಧಿಕಾರಿ ಹುದ್ದೆಗಳನ್ನು ಸರ್ಕಾರಿ ನಿಯಮಗಳನ್ನು ಗಾಳಿಗೆ ತೂರಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ಶ್ರೀಧರ್ ಎಂ ಅವರು ನೇಮಕಾತಿ ಮಾಡಿಕೊಂಡಿದ್ದಾರೆ ಎಂದು ಜಿಲ್ಲಾ ಜೆಡಿಎಸ್ ವಿದ್ಯಾರ್ಥಿ ಘಟಕದ ಅಧ್ಯಕ್ಷ ಅಭಿಕಾಳೆ ಆರೋಪಿಸಿದರು.

ಇಲಾಖೆಯ ಉಪನಿರ್ದೇಶಕರು ಅರ್ಹ ಅಭ್ಯರ್ಥಿಗಳನ್ನು ನೇಮಕಾತಿ ಮಾಡಿಕೊಳ್ಳದೇ ಭ್ರಷ್ಟಾಚಾರ ಎಸಗಿದ್ದು ಮೇಲ್ನೋಟಕ್ಕೆ ಕಂಡು ಬರುತ್ತಿದ್ದು, ನೇಮಕಾತಿಯಲ್ಲಿ ಯಾವುದೇ ಮಾನದಂಡಗಳನ್ನು ಅನುಸರಿಸಿಲ್ಲ. ಅಭ್ಯರ್ಥಿಗಳೊಂದಿಗೆ ಕೇಳಲು ಹೋದರೆ ಎಲ್ಲವೂ ನಿಯಮದಂತೆಯೇ ನೇಮಕ ಮಾಡಿಕೊಳ್ಳಲಾಗಿದೆ ಎಂದು ಹಾರಿಕೆ ಉತ್ತರ ನೀಡುತ್ತಿದ್ದಾರೆ. ಮೇಲಾಧಿಕಾರಿಗಳಿಗೆ ಭೇಟಿಯಾಗಿ ಎಂದು ಅಹಂಕಾರದಿಂದ ಮಾತನಾಡುತ್ತಿದ್ದಾರೆ. ಆದ್ದರಿಂದ ಅವರಿಗೆ ಕರ್ತವ್ಯದಿಂದ ಅಮಾನತುಗೊಳಿಸಿ, ಕಾನೂನಿನ ಪ್ರಕಾರ ಸೂಕ್ತ ಶಿಕ್ಷೆ ವಿಧಿಸಬೇಕೆಂದು ಅಭಿಕಾಳೆ ಗಂಭೀರ ಆರೋಪ ಮಾಡಿದ್ದಾರೆ. ಮಿಶನ್ ಶಕ್ತಿ ಯೋಜನೆಯ ಜಿಲ್ಲಾ ಸಂಯೋಜಕ ಹುದ್ದೆಯಲ್ಲಿ ಅರ್ಹ ಅಭ್ಯರ್ಥಿ ರವಿವರ್ಮ ಅವರು ಶೇ. 75 ಅಂಕಗಳು ಗಳಿಸಿದರೂ ಕೂಡಾ, 72% ಪ್ರತಿಶತ ಅಂಕ ಗಳಿಸಿದ ಅನರ್ಹ ಅಭ್ಯರ್ಥಿ, ಕಂಪ್ಯೂಟರ್ ಜ್ಞಾನವಿಲ್ಲದ ರೋಮಾ ರಾಜಕುಮಾರ ಅವರನ್ನು ಆಯ್ಕೆ ಮಾಡಲಾಗಿದೆ. ರಾಷ್ಟ್ರೀಯ ಪೋಷಣ್ ಅಭಿಯಾನ ಭಾಲ್ಕಿಯಲ್ಲಿ ಬೀದರ ಅಭ್ಯರ್ಥಿಯನ್ನು ನೇಮಕ ಮಾಡಿಕೊಳ್ಳಲಾಗಿದೆ ಎಂದರು.

> ಅರ್ಹ ಅಭ್ಯರ್ಥಿಗಳು ಸಂದರ್ಶನಕ್ಕೆ ಹಾಜರಾದರೂ ಅವರ ಮೂಲ ದಾಖಲೆ ಪರಿಶೀಲನೆ ಮಾಡಿಲ್ಲ. ಗಣಕಯಂತ್ರ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಮಾಡಿದ ಕಾರ್ಯವನ್ನು ಒಂದು ಅರೆ ಸರ್ಕಾರಿ ಸೇವೆ ಸಂಸ್ಥೆಯಲ್ಲಿ ಪರೀಕ್ಷೆ ನಡೆಸಿ ಹಾಗೂ ಅಲ್ಲಿ ಮುದ್ರಣ ಯಂತ್ರ ಲಭ್ಯವಿಲ್ಲದೆ 3 ಗಂಟೆಗಳ ನಂತರ ಕಾರ್ಯನಿರ್ವಹಿಸಿದ ಹಾಳೆಗಳ ಮೇಲೆ ಅಭ್ಯರ್ಥಿಗಳ ಸಹಿಯನ್ನು ಮಾಡಿಸಿಕೊಂಡಿದ್ದಾರೆ –ಅಭಿ ಕಾಳೆ

ಸಮ್ಮೇಳನಕ್ಕೆ ಅಧಿಕೃತ ಚಾಲನೆ: ಸಿ.ಎಸ್.ನಾಡಗೌಡರು ರಾಷ್ಟ್ರಧ್ವಜಾರೋಹಣ

• ಉದಯವಾಹಿನಿ, ಮುದ್ದೇಬಿಹಾಳ

ಉದಯವಾಹಿನಿ ಚಿತ್ರ

ಪಟ್ಟಣದ ವಿಬಿಸಿ ಪ್ರೌಢಶಾಲೆ ಆವರಣದಲ್ಲಿರುವ ಸಿದ್ಧೇಶ್ವರ ವೇದಿಕೆಯ ಮುಂಭಾಗ ಶಾಸಕ ಸಿ.ಎಸ್.ನಾಡಗೌಡರು ರಾಷ್ಟ್ರಧ್ವಜಾರೋಹಣ, ಕಸಾಪ ಗೌರವ ಸಲಹೆಗಾರ ರಾಜು ಕಲಬುರ್ಗಿ ನಾಡಧ್ವಜ, ಕಸಾಪ ಅಧ್ಯಕ್ಷ ಕಾಮರಾಜ ಬಿರಾದಾರ ಪರಿಷತ್ತಿನ ಧ್ವಜ ಆರೋಹಣಗೊಳಿಸುವ ಮೂಲಕು ಶನಿವಾರ ಬೆಳಿಗ್ಗೆ ಸಮ್ಮೇಳನಕ್ಕೆ ಅಧಿಕೃತ ಚಾಲನೆ ನೀಡಿದರು.

ಇದೇ ವೇಳೆ ಮಾತೋಶ್ರೀ ಗಂಗಮ್ಮ ವೀರಪ್ಪ ಚಿನಿವಾರ ಪ್ರಧಾನ ವೇದಿಕೆಯನ್ನು ಕಾಂಗ್ರೇಸ್ ಮುಖಂಡ ಸಿ.ಬಿ.ಅಸ್ಕಿ, ಐಎನ್‌ಬಿಸಿಡಬ್ಲುಎಫ್ ಮಹಿಳಾ ಘಟಕದ ರಾಜ್ಯಾಧ್ಯಕ್ಷೆ ಸಂಗೀತಾ ನಾಡಗೌಡ, ಮುಖಂಡರಾದ ಮಾರುತಿ ನಲವಡೆ, ಮಹಾಂತೇಶ ಗಂಗನಗೌಡರ ಜಂಟಿಯಾಗಿ ಉದ್ಘಾಟಿಸಿದರು. ವೈರಾಗ್ಯ ಚಕ್ರವರ್ತಿ ಘನಮಠ ಶಿವಯೋಗಿ ಮುಖ್ಯ ಮಹಾದ್ವಾರ, ಶರಣೆ ತಂಗಡಗಿ ನೀಲಮ್ಮ, ಬಸರಕೋಡದ ಶ್ರೀ ಪವಾಡ ಬಸವೇಶ್ವರ, ವೈದ್ಯರತ್ನ ಡಾ.ಆರ್.ಆರ್.ಪದಕಿ ಹೆಸರಿನ ಮಹಾದ್ವಾರಗಳನ್ನು, ಶ್ರೀ ವೀರೇಶ್ವರ ಶರಣರ ದಾಸೋಹ ಮನೆ, ಮಲಿಕಸಾಬ ನದಾಫ ಅಮರಗೋ

● ಎಫ್-35 ಆಫರ್‌ಗೆ ನಡುಗಿದ ಪಾಕ್, ನೆರೆ ರಾಷ್ಟ್ರಕ್ಕೆ ಆಪ್ತಮಿತ್ರರ ಮಾಸ್ಟರ್ ಸ್ಟ್ರೋಕ್

ಪಾಕಿಸ್ತಾನದ ನಿದ್ದೆಗೆಡಿಸಿದ ಮೋದಿ-ಟ್ರಂಪ್ ಭೇಟಿ

ಹೊಸದಿಲ್ಲಿ : ಪ್ರಧಾನಿ ನರೇಂದ್ರ ಮೋದಿ ಅವರ ಅಮೆರಿಕ ಭೇಟಿ ಪಾಕಿಸ್ತಾನದ ನಿದ್ದೆಗೆಡಿಸಿದೆ. ಅದರಲ್ಲೂ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮೋದಿಯನ್ನು ನಡೆಸಿಕೊಂಡಿದ್ದು, ಮಾತನಾಡಿದ್ದು ಕಂಡು ಪಾಕಿಸ್ತಾನಕ್ಕೆ ಗರ ಬಡಿದಂತಾಗಿದೆ.

ಅದಲ್ಲದೇ ಭಾರತದ ಜೊತೆ ಟ್ರಂಪ್ ಮಾಡಿಕೊಂಡಿರುವ ಒಪ್ಪಂದಗಳನ್ನು ನೋಡಿ ನೆರೆ ರಾಷ್ಟ್ರ ಪಾಕಿಸ್ತಾನದ ನಾಯಕರು ಶಾಕ್‌ಗೆ ಒಳಗಾಗಿದ್ದಾರೆ. ಅದರಲ್ಲೂ ಭಾರತಕ್ಕೆ ಟ್ರಂಪ್ ನೀಡಿರುವ ಡೆಡ್ಲಿ ಕಿಲ್ಲರ್ ಎಫ್-35 ಫೈಟರ್ ಜೆಟ್ ಆಫರ್ ಕೇಳಿ ಪಾಕಿಸ್ತಾನದ ಕೈ ಕಾಲು ಆಡುತ್ತಿಲ್ಲ.

ಟ್ರಂಪ್ ಘೋಷಣೆ ಬೆನ್ನಲ್ಲೇ ರಿಯಾಕ್ಟ್ ಮಾಡಿರುವ ಪಾಕಿಸ್ತಾನ ಭಾರತಕ್ಕೆ ಎಫ್-35 ಕೊಡಬೇಡಿ, ಅದು ಪ್ರಾದೇಶಿಕ ಅಶಾಂತಿಗೆ ಕಾರಣವಾಗುತ್ತೆ ಎಂದು ಗೋಗರೆದಿದೆ. ಇನ್ನು ಭಯೋತ್ಪಾದನೆ ವಿಚಾರದಲ್ಲಿ ಮೋದಿ-ಟ್ರಂಪ್ ನೀಡಿದ ಗುದ್ದಿಗೆ ಪಾಕಿಸ್ತಾನ ಬಾಲ ಸುಟ್ಟ ಬೆಕ್ಕಿನಂತಾಗಿದೆ.

ಹೌದು, ಪ್ರಧಾನಿ ಮೋದಿ ಎರಡು ದಿನಗಳ ಅಮೆರಿಕ ಪ್ರವಾಸ ಬಹುತೇಕ ಯಶಸ್ವಿಯಾಗಿದೆ. ಟ್ರಂಪ್ ಮೋದಿಯನ್ನು ತಮ್ಮ ಆತ್ಮೀಯ ಸ್ನೇಹಿತ ಎಂಬುದನ್ನು ಇಡೀ ಜಗತ್ತಿಗೆ ಮತ್ತೊಮ್ಮೆ ತೋರಿಸಿದ್ದಾರೆ. ಈ ವೇಳೆ ಭಾರತದ ಜೊತೆ ಹಲವು ಒಪ್ಪಂದಗಳನ್ನು ಕೂಡ ಅಮೆರಿಕ ಮಾಡಿಕೊಂಡಿದೆ.

ಇದರ ನಡುವೆಯೇ ಡೊನಾಲ್ಡ್ ಟ್ರಂಪ್ ಭಾರತಕ್ಕೆ ಎಫ್-35 ಸ್ಟೆಲ್ತ್ ಫೈಟರ್ ಜೆಟ್‌ಗಳನ್ನು ನೀಡಲು ಪ್ರಯತ್ನಿಸುತ್ತೇವೆ ಎಂದು ಘೋಷಣೆ ಮಾಡಿದ್ದಾರೆ. ಈ ಒಂದು ಘೋಷಣೆ ಪಾಕಿಸ್ತಾನದ ಆತಂಕಕ್ಕೆ ಕಾರಣವಾಗಿದೆ. ಟ್ರಂಪ್ ಹೇಳಿಕೆ ಬೆನ್ನಲ್ಲೇ ಪ್ರತಿಕ್ರಿಯಿಸಿರುವ ಪಾಕ್, ಭಾರತವು ಅಮೆರಿಕದಿಂದ ಐದನೇ ತಲೆಮಾರಿನ ಸ್ಟೆಲ್ತ್ ಫೈಟರ್ ಜೆಟ್ ಈ-35 ಅನ್ನು ಪಡೆದರೆ, ಪ್ರಾದೇಶಿಕ ಮಿಲಿಟರಿ ಸಮತೋಲನಕ್ಕೆ ಅಡ್ಡಿಯುಂಟಾಗುತ್ತದೆ ಮತ್ತು ದಕ್ಷಿಣ ಏಷ್ಯಾದಲ್ಲಿ ಶಾಶ್ವತ ಶಾಂತಿಯನ್ನು ಸಾಧಿಸುವ ಪ್ರಯತ್ನಗಳಿಗೆ ಹಿನ್ನಡೆಯಾಗುತ್ತದೆ ಎಂದು ಕಳವಳ ವ್ಯಕ್ತಪಡಿಸಿದೆ.

ಇದರ ನಡುವೆ 26/11 ಮುಂಬೈ ದಾಳಿಯ ಆರೋಪಿ ತಹವ್ವೂರ್ ರಾಣಾನನ್ನು ಭಾರತಕ್ಕೆ ಹಸ್ತಾಂತರಿಸಲು ಕೂಡ ಟ್ರಂಪ್ ಅನುಮತಿ ನೀಡಿರುವುದು ಪಾಕಿಸ್ತಾನಕ್ಕೆ ಇರಿಸು-ಮುರಿಸು ಉಂಟು ಮಾಡಿದೆ. ದಾಳಿಯಲ್ಲಿ ತಹವ್ವೂರ್ ರಾಣಾ ಪಾಕಿಸ್ತಾನದ ಪಾತ್ರವನ್ನು ವಿಚಾರಣೆ ವೇಳೆ ಬಿಚ್ಚಿಟ್ಟರೆ ಹೇಗೆ ಎಂಬ ಆತಂಕ ಪಾಕಿಸ್ತಾನವನ್ನು ಕಾಡುತ್ತಿದೆ.

ಒಟ್ಟಿನಲ್ಲಿ, ಮೋದಿ ಅಮೆರಿಕ ಪ್ರವಾಸ ಪಾಕಿಸ್ತಾನದ ಎದೆಯಲ್ಲಿ ದಿಗಿಲು ಹುಟ್ಟಿಸಿರುವುದು ಅದರ ತತಕ್ಷಣದ ಪ್ರತಿಕ್ರಿಯೆಯಲ್ಲಿ ಗೊತ್ತಾಗುತ್ತಿದ್ದು, ಭಾರತ-ಅಮೆರಿಕ ದೋಸ್ತಿಗೆ ಚೀನಾವನ್ನು ಗುರಾಣಿಯಾಗಿ ಬಳಸುತ್ತಾ ಕಾದುನೋಡಬೇಕಿದೆ.

ಈ-35ನಿಂದ ಪ್ರಾದೇಶಿಕ ಅಶಾಂತಿ ಎಂದ ಪಾಕಿಸ್ತಾನ

ಟ್ರಂಪ್-ಮೋದಿ ಜಂಟಿ ಸುದ್ದಿಗೋಷ್ಠಿ ಬೆನ್ನಲ್ಲೇ ಸುದ್ದಿಗೋಷ್ಠಿ ನಡೆಸಿದ ಪಾಕಿಸ್ತಾನ ವಿದೇಶಾಂಗ ಸಚಿವಾಲಯದ ವಕ್ತಾರರು, ಭಾರತಕ್ಕೆ ಸುಧಾರಿತ ಮಿಲಿಟರಿ ತಂತ್ರಜ್ಞಾನಗಳ ಯೋಜಿತ ವರ್ಗಾವಣೆಯ ಬಗ್ಗೆ ಪಾಕಿಸ್ತಾನ ತೀವ್ರ ಕಳವಳ ವ್ಯಕ್ತಪಡಿಸುತ್ತದೆ. ಇಂತಹ ಕ್ರಮಗಳು ಈ ಪ್ರದೇಶದಲ್ಲಿ ಮಿಲಿಟರಿ ಅಸಮತೋಲನವನ್ನು ಹೆಚ್ಚಿಸುತ್ತವೆ. ದಕ್ಷಿಣ ಏಷ್ಯಾದಲ್ಲಿ ಶಾಶ್ವತ ಶಾಂತಿ ಸ್ಥಾಪನೆಯ ಉದ್ದೇಶಕ್ಕೆ ಹಿನ್ನಡೆಯಾಗಲಿದೆ. ದಕ್ಷಿಣ ಏಷ್ಯಾದಲ್ಲಿ ಶಾಂತಿ ಮತ್ತು ಭದ್ರತೆಯ ವಿಷಯಗಳ ಬಗ್ಗೆ ಸಮಗ್ರ ಮತ್ತು ವಸ್ತುನಿಷ್ಠವಾಗಿ ಯೋಚಿಸುವಂತೆ ನಾವು ಅಮೆರಿಕಕ್ಕೆ ಒತ್ತಾಯಿಸುತ್ತೇವೆ ಎಂದು ಹೇಳಿದ್ದಾರೆ. ಅದಲ್ಲದೇ ಅಮೆರಿಕ ಭಾರತದ ಪರ ನಿಂತಿರುವುದಕ್ಕೆ ಏಕಪಕ್ಷೀಯವಾಗಿ ನಿಲುವನ್ನು ತೆಗೆದುಕೊಳ್ಳಬಾರದು ಎಂದು ಪಾಕ್ ಹೇಳಿದೆ.

ಇದು ಒನ್ ಸೈಡೆಡ್, ಮಿಸ್ ಲೀಡಿಂಗ್ ಎಂದು ಆತಂಕ

ಇಷ್ಟು ದಿನ ಭಾರತದ ವಿರೋಧವನ್ನು ಲೆಕ್ಕಕ್ಕೆ ತೆಗೆದುಕೊಳ್ಳದೇ ತನ್ನ ಹಳೇ ಚಾಳಿಯನ್ನು ಮುಂದುವರಿಸಿದ್ದ ಪಾಕಿಸ್ತಾನಕ್ಕೆ ಮೋದಿ ಅಮೆರಿಕದಲ್ಲಿ ಮುಟ್ಟಿ ನೋಡಿಕೊಳ್ಳುವಂತೆ ಉತ್ತರ ನೀಡಿದ್ದಾರೆ. ವಿಶ್ವದ ದೊಡ್ಡಣ್ಣ ಅಮೆರಿಕದ ಬಾಯಲ್ಲಿ ಪಾಕಿಸ್ತಾನದ ಭಯೋತ್ಪಾದನೆ ಬಗ್ಗೆ ಮಾತಾಡಿಸಿ ಪಾಕಿಸ್ತಾನಕ್ಕೆ ಶಾಕ್ ನೀಡಿದ್ದಾರೆ. ಇದರ ಬೆನ್ನಲ್ಲೇ ಬಾಲ ಸುಟ್ಟ ಬೆಕ್ಕಿನಂತೆ ಒದ್ದಾಡುತ್ತಿರುವ ಪಾಕಿಸ್ತಾನ, ಟ್ರಂಪ್ - ಮೋದಿ ಹೇಳಿಕೆಯನ್ನು ಏಕಪಕ್ಷೀಯ, ದಾರಿ ತಪ್ಪಿಸುವ ಮತ್ತು ರಾಜತಾಂತ್ರಿಕ ಮಾನದಂಡಗಳಿಗೆ ವಿರುದ್ಧ ಎಂದು ಕರೆದಿದೆ. ಅದಲ್ಲದೇ ಪಾಕಿಸ್ತಾನದ ತ್ಯಾಗಗಳನ್ನು ಗುರುತಿಸದೇ ಇಂತಹ ಹೇಳಿಕೆಯನ್ನು ಜಂಟಿ ಹೇಳಿಕೆಯಲ್ಲಿ ಆಶ್ಚರ್ಯವಾಗಿದೆ ಎಂದು ವ್ಯಕ್ತಪಡಿಸಿರುವುದು ಕುತೂಹಲ ಕೆರಳಿಸಿದೆ.

ಮಿನಿ ನ್ಯೂಸ್

ಪತಿಯ ವಿಕೃತಕಾಮಕ್ಕೆ ಬೇಸತ್ತು ಪ್ರಾಣ ಕಳೆದುಕೊಂಡ ನವವಿವಾಹಿತೆ

ವಿಶಾಖಪಟ್ಟಣ: ಲೈಂಗಿಕ ವಿಡಿಯೋಗಳನ್ನು ತೋರಿಸಿ ಹಿಂಸೆ ನೀಡುತ್ತಿದ್ದ ವಿಕೃತ ಕಾಮಿ ಪತಿಯ ಧೋರಣೆಯಿಂದ ಬೇಸತ್ತು ನವವಿವಾಹಿತೆ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ವಿಶಾಖಪಟ್ಟಣಂದ ಗೋಪಾಲಪಟ್ಟಣದ ನಂದಮೂರಿ ಕಾಲೋನಿಯಲ್ಲಿ ನಡೆದಿದೆ.

28 ವರ್ಷದ ವಸಂತ ಆತ್ಮಹತ್ಯೆಗೆ ಶರಣಾದ ನವವಿವಾಹಿತೆ. ಪತಿ ತನ್ನ ಲೈಂಗಿಕ ವೀಡಿಯೊಗಳನ್ನು ತೋರಿಸಿ ಚಿತ್ರಹಿಂಸೆ ನೀಡುತ್ತಿದ್ದ ಎನ್ನಲಾಗಿದೆ ಆತನ ಚಿತ್ರಹಿಂಸೆ ಸಹಿಸಲಾಗದೆ ವಸಂತ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾಳೆ ಎಂದು ವರದಿಯಾಗಿದೆ.

ಈ ಸಂಬಂಧ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಪತಿ ನಾಗೇಂದ್ರ ಬಾಬುನನ್ನು ವಶಕ್ಕೆ ಪಡೆದುಕೊಂಡು ತನಿಖೆ ನಡೆಸಿದ್ದಾರೆ. ತನ್ನ ಪತಿ ನಾಗೇಂದ್ರಬಾಬು ಪ್ರತಿದಿನ ಅಶ್ಲೀಲ ವಿಡಿಯೋಗಳನ್ನು ತೋರಿಸಿ ಟಾರ್ಚರ್ ಮಾಡುತ್ತಿದ್ದಾನೆ ಎಂದು ಆಕೆ ತನ್ನ ಕುಟುಂಬಸ್ಥರ ಜತೆ ಅಳಲು ತೊಡಿಕೊಂಡಿದ್ದಳು. ಈ ಕುರಿತಾಗಿ ನಾಗೇಂದ್ರಬಾಬು ಜತೆ ಮಾತನಾಡುವುದಾಗಿ ಹೇಳಿದ್ದರು. ಆದರೆ, ಅಷ್ಟರಲ್ಲೇ ವಸಂತ ಪ್ರಾಣವನ್ನೇ ಕಳೆದುಕೊಂಡಿದ್ದಾಳೆ. ನಾಗೇಂದ್ರ ಬಾಬುನೇ ನಮ್ಮ ಮಗಳಿಗೆ ಟಾರ್ಚರ್ ಕೊಟ್ಟು ಕೊಟ್ಟು ಕೊಲೆ ಮಾಡಿದ್ದಾನೆ ಎಂದು ಮೃತರ ಕುಟುಂಬಸ್ಥರು ಆರೋಪಿಸಿದ್ದಾರೆ. 28 ವರ್ಷದ ವಸಂತಾ ಹಲವು ಕನಸು ಇಟ್ಟುಕೊಂಡು 34 ವರ್ಷದ ನಾಗೇಂದ್ರ ಬಾಬು ಎನ್ನುವಾತನನ್ನು ಮದುವೆಯಾಗಿದ್ದಳು. ಆದ್ರೆ, ಮದುವೆಯಾದ ಹೊಸತರಲ್ಲೇ ನಾಗೇಂದ್ರ ಬಾಬುವಿನ ವಿಕೃತ ಮನಸ್ಥಿತಿ ಬಯಲಾಗಿದೆ.

ಭೀಕರ ಅಪಘಾತ, 10 ಭಕ್ತರ ಸಾವು

ಪ್ರಯಾಗ್‌ರಾಜ್: ಮಹಾಕುಂಭಕ್ಕೆ ತೆರಳುತ್ತಿದ್ದ 10 ಭಕ್ತರು ಉತ್ತರ ಪ್ರದೇಶದ ಮಿರ್ಜಾಪುರ-ಪ್ರಯಾಗ್‌ರಾಜ್ ಹೆದ್ದಾರಿಯಲ್ಲಿ ನಡೆದ ಭೀಕರ ರಸ್ತೆ ಅಪಘಾತದಲ್ಲಿ ಮೃತಪಟ್ಟಿದ್ದಾರೆ. ಬಸ್ ಹಾಗೂ ಬೊಲೆರೋ ವಾಹನ ಮುಖಾಮುಖಿ ಡಿಕ್ಕಿಯಾಗಿ ಬೊಲೆರೋದಲ್ಲಿದ್ದ 10 ಮಂದಿ ಸಾವನ್ನಪ್ಪಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಇತರ 16 ಮಂದಿ ಗಂಭೀರವಾಗಿ ಗಾಯಗೊಂಡಿದ್ದು ಅವರನ್ನು ಸ್ಥಳೀಯ ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ. ಮೃತರು ಛತ್ತೀಸ್‌ಗಢದ ಕೊರ್ಬಾ ಜಿಲ್ಲೆಯ ಮೂಲದವರು ಎಂದು ತಿಳಿದು ಬಂದಿದೆ. ಗಂಗಾ, ಯಮುನಾ ಮತ್ತು ಪೌರಾಣಿಕ ಸರಸ್ವತಿ ನದಿಗಳ ಸಂಗಮವಾದ ಸಂಗಮದಲ್ಲಿ ಸ್ನಾನ ಮಾಡಲು ಛತ್ತೀಸ್‌ಗಢದ ಕೊರ್ಬಾ ಜಿಲ್ಲೆಯಿಂದ ಭಕ್ತರು ಪ್ರಯಾಣಿಸುತ್ತಿದ್ದರು.

ಭಕ್ತರನ್ನು ಕರೆದೊಯ್ಯುತ್ತಿದ್ದ ಬೊಲೆರೊ ಮಧ್ಯ ಪ್ರದೇಶದ ರಾಜ್‌ಗಢ ಜಿಲ್ಲೆಯಿಂದ ಪ್ರಯಾಣಿಸುತ್ತಿದ್ದ ಬಸ್ ಡಿಕ್ಕಿ ಹೊಡೆದಿದೆ. ಇನ್ನು ಈ ದುರ್ಘಟನೆ ಬಗ್ಗೆ ಯೋಗಿ ಆದಿತ್ಯನಾಥ್ ಮಾಹಿತಿ ಪಡೆದುಕೊಂಡಿದ್ದು, ಪರಿಹಾರ ಕಾರ್ಯಗಳನ್ನು ತ್ವರಿತಗೊಳಿಸುವಂತೆ ಮತ್ತು ಗಾಯಾಳುಗಳಿಗೆ ಸರಿಯಾದ ಚಿಕಿತ್ಸೆ ನೀಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಅಮೆರಿಕದ ಆರ್ಥಿಕತೆಗೆ ಭಾರತೀಯ ವಿದ್ಯಾರ್ಥಿಗಳಿಂದ ಪ್ರತಿವರ್ಷ 8 ಶತಕೋಟಿ ಡಾಲರ್ ಕೊಡುಗೆ

ವಾಷಿಂಗ್ಟನ್: ಅಮೆರಿಕದಲ್ಲಿರುವ ಸುಮಾರು 3 ಲಕ್ಷ ಭಾರತೀಯ ವಿದ್ಯಾರ್ಥಿಗಳು ಪ್ರತಿ ವರ್ಷ ಅಮೆರಿಕ ಆರ್ಥಿಕತೆಗೆ 8 ಬಿಲಿಯನ್ ಡಾಲರ್ ಕೊಡುಗೆ ನೀಡುತ್ತಿದ್ದಾರೆ. ಭಾರತೀಯ ವಿದ್ಯಾರ್ಥಿಗಳ ಈ ಕೊಡುಗೆಯನ್ನು ಸ್ವತಃ ಟ್ರಂಪ್ ಮತ್ತು ಮೋದಿ ದೃಢಿಕರಿಸಿದ್ದಾರೆ. ಮಾತ್ರವಲ್ಲ, ಎರಡೂ ದೇಶಗಳಿಗೆ ಪರಸ್ಪರ ಭದ್ರತೆಯನ್ನು ಉತ್ತೇಜಿಸುವತ್ತ ಗಮನ ಹರಿಸಿದ್ದಾರೆ.

ಕ್ರಿಮಿನಲ್ ಫೆಸಿಲಿಟೇಟರ್‌ಗಳು ಮತ್ತು ಅಕ್ರಮ ವಲಸೆ ಜಾಲಗಳ ವಿರುದ್ಧ ಬಲವಾದ ಕ್ರಮವನ್ನು ತೆಗೆದುಕೊಳ್ಳುವ ಮೂಲಕ ಅಕ್ರಮ ವಲಸೆ ಮತ್ತು ಮಾನವ ಕಳ್ಳಸಾಗಣೆಯನ್ನು ಆಕ್ರಮಣಕಾರಿಯಾಗಿ ಪರಿಹರಿಸಲು ಉಭಯ ನಾಯಕರು ತಮ್ಮ ಬದ್ಧತೆಯನ್ನು ವ್ಯಕ್ತಪಡಿಸಿದರು.

ಮೋದಿ ಮತ್ತು ಅಧ್ಯಕ್ಷ ಟ್ರಂಪ್ ನಡುವಿನ ದ್ವಿಪಕ್ಷೀಯ ಸಭೆಯ ನಂತರ ಬಿಡುಗಡೆಯಾದ ಜಂಟಿ ಹೇಳಿಕೆಯು ಜಾಗತಿಕ ಕೆಲಸದ ಸ್ಥಳದ ರಚನೆಯನ್ನು ಉತ್ತೇಜಿಸಲು ಅನುಕೂಲಕರ ಚೌಕಟ್ಟುಗಳನ್ನು ಹಾಕಲು ನಾಯಕರು ಒಪ್ಪಿಕೊಂಡಿದ್ದಾರೆ ಎಂದು ತಿಳಿದುಬಂದಿದೆ.

ಅಧ್ಯಕ್ಷ ಟ್ರಂಪ್ ಮತ್ತು ಪ್ರಧಾನಿ ಮೋದಿ ಅವರು ಉಭಯ ದೇಶಗಳ ನಡುವಿನ ಜನರ-ನಡುವಿನ ಸಂಬಂಧವನ್ನು ಮುಂದುವರೆಸುವ ಮಹತ್ವವನ್ನು ಗಮನಿಸಿದರು. ಈ ಸಂದರ್ಭದಲ್ಲಿ, 300,000ಕ್ಕೂ ಹೆಚ್ಚು ಬಲಿಷ್ಠ ಭಾರತೀಯ ವಿದ್ಯಾರ್ಥಿ ಸಮುದಾಯವು ಯುಎಸ್ ಆರ್ಥಿಕತೆಗೆ ವಾರ್ಷಿಕ 8 ಶತಕೋಟಿಗೂ ಹೆಚ್ಚು ಕೊಡುಗೆ ನೀಡುತ್ತದೆ ಮತ್ತು ಹಲವಾರು ನೇರ ಮತ್ತು ಪರೋಕ್ಷ ಉದ್ಯೋಗಗಳನ್ನು ಸೃಷ್ಟಿಸಲು ಸಹಾಯ ಮಾಡಿದೆ ಎಂದು ಅವರು ಗಮನಿಸಿದರು.

ನಾವೀನ್ಯ ತೆಯನ್ನು ಬೆಳೆಸುವಲ್ಲಿ ಅಂತರ ರಾಷ್ಟ್ರೀಯ ಶೈಕ್ಷಣಿಕ ಸಹಯೋಗಗಳ ಪ್ರಾಮುಖ್ಯತೆ ಯನ್ನು ಗುರುತಿಸಿ, ಕಲಿಕೆಯ ಫಲಿತಾಂಶಗಳನ್ನು ಸುಧಾರಿಸುವುದು ಮತ್ತು ಭವಿಷ್ಯದ-ಸಿದ್ಧ ಕಾರ್ಯಪಡೆಯ ಅಭಿವೃದ್ಧಿ, ಜಂಟಿ/ದ್ವಿಪದವಿ ಮತ್ತು ಅವಳಿ ಕಾರ್ಯಕ್ರಮಗಳಂತಹ ಪ್ರಯತ್ನಗಳ ಮೂಲಕ ಉನ್ನತ ಶಿಕ್ಷಣ ಸಂಸ್ಥೆಗಳ ನಡುವಿನ ಸಹಯೋಗವನ್ನು ಬಲಪಡಿಸಲು ಇಬ್ಬರೂ ನಾಯಕರು ನಿರ್ಧರಿಸಿದರು.

ಕೇಜ್ರಿವಾಲ್ ಶೀಷ್ ಮಹಲ್ ಅಕ್ರಮದ ತನಿಖೆಗೆ ಆದೇಶ

ನವದೆಹಲಿ: ಮಾಜಿ ಸಿಎಂ ಅರವಿಂದ್ ಕೇಜ್ರಿವಾಲ್ ಅವರ ಅಧಿಕೃತ ನಿವಾಸ ಶೀಷಮಹಲ್ ನಿರ್ಮಾಣದಲ್ಲಿ ನಡೆದಿದೆ ಎನ್ನಲಾದ ಅಕ್ರಮ ಪತ್ತೆಯ ತನಿಖೆಗೆ ಕೇಂದ್ರ ಸರ್ಕಾರ ಮುಂದಾಗಿದೆ. ಕೇಂದ್ರ ಲೋಕೋಪಯೋಗಿ ಇಲಾಖೆ (ಸಿಪಿಡಬ್ಲ್ಯೂಡಿ) ನೀಡಿದ ವರದಿ ಆಧಾರದ ಮೇಲೆ ಕೇಂದ್ರ ಸರ್ಕಾರ ನಡೆದಿದೆ ಎನ್ನಲಾದ ಅಕ್ರಮಗಳ ಕುರಿತು ತನಿಖೆಗೆ ಆದೇಶಿಸಿದೆ.

ದೆಹಲಿಯ ಮಾಜಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರ ಮಾಜಿ ಅಧಿಕೃತ ನಿವಾಸದ ನವೀಕರಣದಲ್ಲಿ 40,000 ಚದರ ಗಜಗಳಷ್ಟು (8 ಎಕರೆ) ವಿಸ್ತಾರವಾದ ಅತಿರಂಜಿತ ನಿವಾಸವಾದ 6 ಫ್ಲಾಗ್‌ಸ್ಟಾಫ್ ರಸ್ತೆ ಬಂಗಲೆಯನ್ನು ನಿರ್ಮಿಸಲು ಕಟ್ಟಡದ ನಿಯಮಗಳನ್ನು ಉಲ್ಲಂಘಿಸಲಾಗಿದೆ ಎಂಬ ಆರೋಪಗಳ ಬಗ್ಗೆ ವಿವರವಾದ ತನಿಖೆ ನಡೆಸಲು ಸಿಪಿಡಬ್ಲ್ಯೂಡಿ ಗೆ ಸೂಚಿಸಲಾಗಿದೆ.

ದೆಹಲಿ ಬಿಜೆಪಿ ಮುಖ್ಯಸ್ಥ ವೀರೇಂದ್ರ ಸಚ್ ದೇವ ಅವರು ಲೆಫ್ಟಿನೆಂಟ್ ಗವರ್ನರ್ ವಿಕೆ ಸಕ್ಸೇನಾ ಅವರನ್ನು 6 ಫ್ಲಾಗ್ ಸ್ಟಾಫ್ ರಸ್ತೆ ಬಂಗಲೆಯೊಂದಿಗೆ ನಾಲ್ಕು ಸರ್ಕಾರಿ ಆಸ್ತಿಗಳ ವಿಲೀನವನ್ನು ರದ್ದುಗೊಳಿಸುವಂತೆ ಒತ್ತಾಯಿಸಿದ್ದಾರೆ. ಸಚ್ ದೇವ ಅವರು ಲೆಫ್ಟಿನೆಂಟ್ ಗವರ್ನರ್ ಸಕ್ಸೇನಾ ಅವರಿಗೆ ಬರೆದ ಪತ್ರದಲ್ಲಿ, ನಾಲ್ಕು ಸರ್ಕಾರಿ ಆಸ್ತಿಗಳನ್ನು ಅನಧಿಕೃತವಾಗಿ ವಿಲೀನಗೊಳಿಸುವ ಮೂಲಕ ಬಂಗಲೆಯ ವಿಸ್ತರಣೆಯನ್ನು ಕೈಗೊಳ್ಳಲಾಗಿದೆ ಎಂದು ಆರೋಪಿಸಿದ್ದಾರೆ.

ದೆಹಲಿಯಲ್ಲಿ ಬಿಜೆಪಿ ಸರ್ಕಾರ ರಚಿಸಿದರೆ, ಹೊಸದಾಗಿ ಆಯ್ಕೆಯಾದ ಮುಖ್ಯಮಂತ್ರಿ ಬಂಗಲೆಯನ್ನು ಆಕ್ರಮಿಸುವುದಿಲ್ಲ ಎಂದು ಅವರು ಘೋಷಿಸಿದ್ದಾರೆ. ಪುನರ್ ನಿರ್ಮಾಣಗೊಂಡ ಬಂಗಲೆಯು 2015 ರಿಂದ ಅಕ್ಟೋಬರ್ 2024 ರವರೆಗೆ ಕೇಜ್ರಿವಾಲ್ ಅವರ ಅಧಿಕೃತ ನಿವಾಸವಾಗಿ ಕಾರ್ಯನಿರ್ವಹಿಸಿತು.

ಮಹಾಕುಂಭದಲ್ಲಿ 50 ಕೋಟಿಗೂ ಹೆಚ್ಚು ಭಕ್ತರಿಂದ ಪುಣ್ಯಸ್ನಾನ, ಯೋಗಿ ವ್ಯವಸ್ಥೆಗೆ ಶ್ಲಾಘನೆ

ಪ್ರಯಾಗರಾಜ್: ಉತ್ತರಪ್ರದೇಶದ ಪ್ರಯಾಗರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭಮೇಳದ ಸಂದರ್ಭದಲ್ಲಿ ಈ ವರೆಗೂ 50 ಕೋಟಿಗೂ ಹೆಚ್ಚು ಭಕ್ತರು ತ್ರಿವೇಣಿ ಸಂಗಮದಲ್ಲಿ ಪವಿತ್ರ ಸ್ನಾನ ಮಾಡಿದ್ದಾರೆ.144 ವರ್ಷಗಳ ನಂತರ ಪ್ರಯಾಗ್‌ರಾಜ್‌ನಲ್ಲಿ ಮಹಾಕುಂಭ ಮೇಳ ನಡೆಯುತ್ತದೆ.

ಜನವರಿ 13ರಿಂದ ಫೆಬ್ರವರಿ 14ರವರೆಗೂ ಮಹಾಕುಂಭದಲ್ಲಿ ಸ್ನಾನ ಮಾಡುವವರ ಸಂಖ್ಯೆ 50 ಕೋಟಿ ದಾಟಿದೆ. ಪವಿತ್ರ ಪ್ರಯಾಗ್‌ರಾಜ್‌ನಲ್ಲಿ ತ್ರಿವೇಣಿ ಸಂಗಮದಲ್ಲಿ ಸ್ನಾನ ಮಾಡಲು ಉತ್ತರಪ್ರದೇಶ ಸರ್ಕಾರ ಉತ್ತಮ ವ್ಯವಸ್ಥೆ ಮಾಡಿದೆ. ಹೀಗಾಗಿ ಎಲ್ಲರೂ ಸುರಕ್ಷಿತವಾಗಿ ಸ್ನಾನ ಮಾಡಲು ಸಾಧ್ಯವಾಗುತ್ತಿದೆ. ಫೆ.14ರಂದು ಒಂದೇ ದಿನ ಮಧ್ಯಾಹ್ನ 1 ಗಂಟೆವರೆಗೆ ಸುಮಾರು 55 ಲಕ್ಷ ಜನರು ಮಹಾಕುಂಭದಲ್ಲಿ ಸ್ನಾನ ಮಾಡಿದ್ದಾರೆ ಎಂದು ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಹೇಳಿದ್ದಾರೆ.

ಮಾನವನ ಇತಿಹಾಸದಲ್ಲಿಯೇ ಯಾವುದೇ ಧಾರ್ಮಿಕ, ಸಾಂಸ್ಕೃತಿಕ, ಸಾಮಾಜಿಕ ಕಾರ್ಯಕ್ರಮದಲ್ಲಿ ಭಾಗವಹಿಸಿದ ಅತಿ ದೊಡ್ಡ ಸಭೆ ಇದಾಗಿದೆ. ಭಾರತದಲ್ಲಿ ಆಳವಾಗಿ ಬೇರೂರಿರುವ ಆಧ್ಯಾತ್ಮಿಕ ಮತ್ತು ಸಾಂಸ್ಕೃತಿಕ ನೀತಿಯನ್ನು ಒತ್ತಿ ಹೇಳಿದ ಸಿಎಂ ಯೋಗಿ, ದೇಶದಲ್ಲಿ 110 ಕೋಟಿ ಸನಾತನ ಧರ್ಮದ ಅನುಯಾಯಿಗಳಿದ್ದು, ಇಂತಹ ಬೃಹತ್ ಭಾಗವಹಿಸುವಿಕೆಯು ಸನಾತನ ಧರ್ಮದ ಶಾಶ್ವತ ಮೌಲ್ಯಗಳಲ್ಲಿನ ಅಚಲ ನಂಬಿಕೆಯನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದ್ದಾರೆ.

ವಿವಿಧ ದೇಶಗಳ ಭಕ್ತರಿಂದ ಪುಣ್ಯಸ್ನಾನ

- ಭಾರತ- 1,41,93,16,933
- ಚೀನಾ 1,40,71,81,209
- ಅಮೆರಿಕ- 34,20,34,432
- ಇಂಡೋನೇಷ್ಯಾ- 28,35,87,097
- ಪಾಕಿಸ್ತಾನ- 25,70,47,044
- ನೈಜೀರಿಯಾ- 24,27,94,751
- ಬ್ರೆಜಿಲ್ 22,13,59,387
- ಬಾಂಗ್ಲಾದೇಶ-17,01,83,916
- ರಷ್ಯಾ-14,01,34,279
- ಮೆಕ್ಸಿಕೊ- 13,17,41,347

ಒಬಾಮ ಸಲಿಂಗಕಾಮಿ, ಪತ್ನಿ ಮಿಶೆಲ್ ಹೆಣ್ಣಲ್ಲ, ಗಂಡು

ಎರೋಲ್ ಮಸ್ಕ್ ಸ್ಫೋಟಕ ಹೇಳಿಕೆ

ವಾಷಿಂಗ್ಟನ್: ಅಮೆರಿಕದ ಮಾಜಿ

ದರ್ಶನ್ ಹುಟ್ಟುಹಬ್ಬಕ್ಕೆ ಡೆವಿಲ್ ಟೀಸರ್



ದರ್ಶನ್ ಹುಟ್ಟುಹಬ್ಬ ಫೆಬ್ರವರಿ 16 ರಂದು ಇದೆ. ಈ ದಿನ ದರ್ಶನ್ ನಟನೆಯ 'ಡೆವಿಲ್' ಸಿನಿಮಾದ ಟೀಸರ್ ಬಿಡುಗಡೆ ಆಗಲಿದೆ. ದರ್ಶನ್ ಜೈಲಿಗೆ ಹೋದ ಬಳಿಕ ಈ ಸಿನಿಮಾದ ಚಿತ್ರೀಕರಣ ನಿಂತು ಹೋಗಿತ್ತು. ಡೆವಿಲ್ ಸಿನಿಮಾದ ಟೀಸರ್ ದರ್ಶನ್ ಹುಟ್ಟುಹಬ್ಬಕ್ಕೆ ಬಿಡುಗಡೆ ಆಗುವ ಜೊತೆಗೆ ಸಿನಿಮಾದ ಹೆಸರಲ್ಲೂ ಸಣ್ಣ ಬದಲಾವಣೆ ಮಾಡಲಾಗಿದೆ. ದರ್ಶನ್ ರ ಹುಟ್ಟುಹಬ್ಬದಂದು 'ಡೆವಿಲ್' ಸಿನಿಮಾದ ಟೀಸರ್ ಬಿಡುಗಡೆ ಆಗಲಿದೆ. ದರ್ಶನ್ ಜೈಲಿಗೆ ಹೋಗುವ ಸಮಯದಲ್ಲಿ 'ಡೆವಿಲ್' ಸಿನಿಮಾದ ಚಿತ್ರೀಕರಣ ಚಾಲ್ತಿಯಲ್ಲಿತ್ತು. 'ಡೆವಿಲ್' ಚಿತ್ರೀಕರಣದ ಸಮಯದಲ್ಲಿಯೇ ದರ್ಶನ್ ಅನ್ನು ಬಂಧಿಸಲಾಗಿತ್ತು. ಇದೀಗ ಕಳೆದ ಏಳೆಂಟು ತಿಂಗಳಿನಿಂದಲೂ 'ಡೆವಿಲ್' ಸಿನಿಮಾದ ಚಿತ್ರೀಕರಣ ಬಂದ್ ಆಗಿದ್ದು, ಇದೀಗ ದರ್ಶನ್ ಹುಟ್ಟುಹಬ್ಬವಾದ ಫೆಬ್ರವರಿ 16 ರಂದು ಸಿನಿಮಾದ ಟೀಸರ್ ಬಿಡುಗಡೆ ಮಾಡಲಾಗುತ್ತಿದೆ. 'ಡೆವಿಲ್' ಸಿನಿಮಾದ ಹೆಸರನ್ನು ಸಹ ತುಸು ಬದಲಾವಣೆ ಮಾಡಲಾಗಿದೆ. 'ಈ ಮೊದಲು 'ಡೆವಿಲ್' ಸಿನಿಮಾಕ್ಕೆ 'ದಿ ಹೀರೋ' ಎಂಬ ಅಡಿ ಬರಹ ಇತ್ತು. ಆದರೆ ಈಗ 'ದಿ ಡೆವಿಲ್' ಎಂದಷ್ಟೆ ಇದೆ. 'ದಿ ಹೀರೋ' ಅಡಿಬರಹವನ್ನು ತೆಗೆದು ಹಾಕಲಾಗಿದೆ.

ದೀಪಿಕಾ ಪಡುಕೋಣೆ ಮಗಳ ಫೋಟೋಗಳು ವೈರಲ್ ಆಗಿದೆ ದೀಪಿಕಾ ಪಡುಕೋಣೆ ಮಗಳ ಮೊದಲ ಫೋಟೊ!

ದೀಪಿಕಾ ಪಡುಕೋಣೆ ಮಗಳ ಫೋಟೋಗಳು ವೈರಲ್ ಆಗಿವೆ. ಆದರೆ ಈಗ ಜನ ಸ್ಮಾರ್ಟ್ ಆಗಿದ್ದಾರೆ. ಫೊಟೋ ನೋಡ್ತಿದ್ದಂತೆ ಇದು ಎಐ ಫೋಟೋಸ್ ಎಂದಿದ್ದಾರೆ. ಬಾಲಿವುಡ್ ನಟಿ ದೀಪಿಕಾ ಪಡುಕೋಣೆ ಮಗಳ ಫೋಟೋಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿ ಎಲ್ಲರ ಗಮನ ಸೆಳೆದವು. ಅಭಿಮಾನಿಗಳು ಇದನ್ನು ಅವರ ಮಗಳು ದುವಾ ಪಡುಕೋಣೆ ಸಿಂಗ್ ಎಂದು ನಂಬಿದರು. ಆದರೆ, ಈ ಫೋಟೋಗಳು ನಿಜವಲ್ಲ, ಕೃತಕ ಬುದ್ಧಿಮತ್ತೆ (ಎಐ) ಬಳಸಿ ಸೃಷ್ಟಿಸಲಾದವು ಎಂಬುದು ಈಗ ದೃಢಪಟ್ಟಿದೆ! ದೀಪಿಕಾ ಮಗಳ ಫೋಟೋಗಳನ್ನು ಎಐ ಬಳಸಿ ಸೃಷ್ಟಿಸಲಾಗಿದೆ. ಈ ಫೋಟೋಗಳು ದೀಪಿಕಾ ಪಡುಕೋಣೆ ಅಭಿಮಾನಿ ಪೇಜ್‌ನಲ್ಲಿ ಶೇರ್ ಮಾಡಲಾಯಿತು. ಈ ಫೋಟೋಗಳಲ್ಲಿ ಅವರು ಪಿಂಕ್ ಡ್ರೆಸ್ ಧರಿಸಿ, ಮಗುವನ್ನು ಎತ್ತಿಕೊಂಡಿರುವ ದೃಶ್ಯವಿತ್ತು. ಬಹಳಷ್ಟು ಜನ ಈ ಫೋಟೋಗಳನ್ನು ಮಗು ಹುಟ್ಟಿದ ಕ್ಷಣದ ಆಸ್ಪತ್ರೆಯ ಫೋಟೋಗಳು ಎಂದು ಭಾವಿಸಿದರು. ಅಮ್ಮ-ಮಗಳ ಜೋಡಿ ಹಳದಿ ಮತ್ತು ಬಿಳಿ ಬಣ್ಣದ ಉಡುಪಿನಲ್ಲಿ ಸಹ ಒಂದಷ್ಟು ಫೋಟೋಗಳು ವೈರಲ್ ಆಗಿದ್ದವು.

2500 ರೂ.ಗೆ ಶಂಕರ್ ನಾಗ್ ರೀತಿ ನಟನೆ ಮಾಡಿದ ಯಶ್



ಒಂದಾನೊಂದು ಕಾಲದಲ್ಲಿ ನಟ ಯಶ್ ಅವರು ಟಿವಿ ಸೀರಿಯಲ್ ಮೂಲಕ ಬಣ್ಣದ ಲೋಕಕ್ಕೆ ಬಂದವರು. ಪಾಪ, ಚಿಕ್ಕಪುಟ್ಟ ರೋಲ್ ಮಾಡ್ಕೊಂಡು, ಸೀರಿಯಲ್‌ನಲ್ಲೂ ನಾಯಕನ ಬದಲು ಸಹನಟರಾಗಿ ಸಹ ನಟಿಸಿದವರು. ಸಿನಿಮಾದಲ್ಲಿಯೂ ಅಷ್ಟೇ, ಮೊಗ್ಗಿನ ಮನಸ್ಸು..

ಅಂಥವರು ಕೇವಲ 2500 ರೂಪಾಯಿಗೆ ಏನಾದ್ರೂ ಮಾಡಿದ್ರೆ ತಪ್ಪೇನು? ಅಷ್ಟಕ್ಕೂ ಅವ್ರು 2500 ರೂ. ಗೆ ಅದೇನು ಮಾಡಿದ್ರು ಅಂತ ಜಾಸ್ತಿ ತಲೆ ಕೆಡಸಿಕ್ಕೋಬೇಡಿ. ಇದು ತಮಾಷೆಗೆ ನಡೆದಿದ್ದು. ಜೀ ಕನ್ನಡದಲ್ಲಿ ಸೃಜನ್ ಲೋಕೇಶ್ ಅವರು ನಡೆಸಿಕೊಡುತಿದ್ದ ಕಾಮಿಡಿ ಶೋಗೆ, ಹಳೆಯ ಕಾಲದಲ್ಲಿ ಅಂದರೆ ಹಲವು ವರ್ಷಗಳ ಹಿಂದೆ, ಅದೊಂದು ದಿನ ನಟ ಯಶ್ ಅವರು ಸೆಲೆಬ್ರಿಟಿ ಗೆಸ್ಟ್ ಆಗಿ ಬಂದಿದ್ದರು. ಆಗ ನಟ, ನಿರೂಪಕ ಸೃಜನ್ ಅವರು ನಟ ಯಶ್ ಅವರಿಗೆ ಒಂದು ಚಾಲೆಂಜ್ ಕೊಟ್ಟಿದ್ದಾರೆ. ಆ ಚಾಲೆಂಜ್ ಏನು ಅಂದ್ರೆ, ನಟ ಲೈವ್ ಅಲ್ಲಿ, ಅಂದ್ರೆ ಸ್ಟೇಜ್ ಮೇಲೇನೇ ನಟ ರಿಯಲ್ ಸ್ಟಾರ್ ಉಪೇಂದ್ರ ಅವರ 'ಎ' ಚಿತ್ರದ ಡೈಲಾಗ್ ಹೇಳ್ಬೇಕು. ಅಲ್ಲಿದ್ದವರೊಬ್ಬರಿಗೆ ಅದು ಮೆಚ್ಚುಗೆ ಆದ್ರೆ ನಟ ಯಶ್‌ಗೆ ಅವರು ಹಣವನ್ನು ನೀಡ್ತಾರೆ ಅಂದಿದಾರೆ. ಆಗ ಆ ಚಾಲೆಂಜ್ ಸ್ವೀಕರಿಸಿದ ನಟ ಯಶ್ ಅವರು ಅದನ್ನು ನಟ ಶಂಕರ್ ನಾಗ್ ಸ್ಟೈಲ್‌ನಲ್ಲಿ ಹೇಳಿ ಬಹುಮಾನ ಪಡೆದಿದ್ದಾರೆ. ಆಗ ನಟ ಯಶ್ ಅವರು ಪಡೆದ ಬಹುಮಾನ 2500 ರೂಪಾಯಿ ಈಗ ಅವರು ತುಂಬಾ ದೊಡ್ಡ ಸ್ಟಾರ್ ಆಗಿ ಬೆಳೆದ ಮೇಲೆ ಕಮ್ಮಿ ಎನ್ನಿಸಬಹುದು ಅಷ್ಟೇ..!

ಅಂದಹಾಗೆ, ನಟ ಯಶ್ ಅವರು ಸದ್ಯ 'ಪ್ಯಾನ್ ವರ್ಲ್ಡ್' ಸಿನಿಮಾ ಟಾಕ್ಸಿಕ್ ಹಾಗೂ ಬಾಲಿವುಡ್ ಬಿಗ್ ಬಜೆಟ್ ಸಿನಿಮಾ 'ರಾಮಾಯಣ'ದಲ್ಲಿ ನಟಿಸುತ್ತಿದ್ದಾರೆ. ಈ ಎರಡೂ ಸಿನಿಮಾಗಳೂ ಭಾರೀ ನಿರೀಕ್ಷೆ ಮೂಡಿಸಿವೆ ಎಂದು ಹೊಸದಾಗಿ ಹೇಳಬೇಕಿಲ್ಲ. ಈ ಎರಡೂ ಸಿನಿಮಾಗಳಲ್ಲಿಯೂ ಯಶ್ ಪಾತ್ರ ಬಹಳಷ್ಟು ವಿಭಿನ್ನವಾಗಿದೆ.

ಡಾಲಿ ಮದುವೆ ಜಾಲಿ ಜಾಲಿ

ಡಾಲಿ ಧನಂಜಯ್ ಮದುವೆ ಮೈಸೂರಿನಲ್ಲಿ ಬಲು ಅದ್ಧೂರಿಯಾಗಿ ನಡೆಯುತ್ತಿದೆ. ಮದುವೆಗೆ ಎರಡು ಬೃಹತ್ ಸೆಟ್ ನಿರ್ಮಾಣ ಮಾಡಲಾಗಿದೆ. ಸೆಟ್ ನಿರ್ಮಾಣ ಮಾಡಿರುವ ಅರುಣ್ ಸಾಗರ್ ಅವರು ಸೆಟ್‌ಗಳ ವಿಶೇಷತೆಗಳ ಬಗ್ಗೆ ಮಾಹಿತಿ ನೀಡಿದ್ದಾರೆ. ಅಲ್ಲದೆ ವೆಡ್ಡಿಂಗ್ ಪ್ಲ್ಯಾನರ್ ಧನು ಸಹ ಡಾಲಿ ಮದುವೆ ಎಷ್ಟು ಅದ್ಧೂರಿ ಎಂಬುದನ್ನು ಹೇಳಿದ್ದಾರೆ.

ಡಾಲಿ ಮದುವೆಗೆಂದು ಬೃಹತ್ ಗಾತ್ರದ ಸೆಟ್ ಅನ್ನು ಹಾಕಲಾಗಿದೆ. ಖ್ಯಾತ ನಟ, ಕಲಾ ನಿರ್ದೇಶಕ ಅರುಣ್ ಸಾಗರ್ ಅವರು ಡಾಲಿ ಧನಂಜಯ್ ಹಾಗೂ ಧನ್ಯತಾ ಅವರ ಮದುವೆಗೆ ಎರಡು ಬೃಹತ್ ಸೆಟ್ ಹಾಕಿದ್ದಾರೆ. ಹಾಕಿರುವ ಸೆಟ್ ಬಗ್ಗೆ ಮಾಹಿತಿ ಹಂಚಿಕೊಂಡಿರುವ ಅರುಣ್ ಸಾಗರ್, 'ಡಾಲಿ ಧನಂಜಯ್ ಅವರ ಮದುವೆಗೆ ಎರಡು ರೀತಿಯ ಸೆಟ್ ನಿರ್ಮಾಣ ಮಾಡಲಾಗಿದೆ. ಮೈಸೂರಿನಲ್ಲಿ ಮದುವೆ ನಡೆಯುತ್ತಿದ್ದು, ಸ್ವತಃ ಡಾಲಿ ಧನಂಜಯ್‌ಗೆ ಮೈಸೂರು ಮೆಚ್ಚಿನ ನಗರವಾದ್ದರಿಂದ ಮೈಸೂರನ್ನೇ ಥೀಮ್ ಆಗಿ ಇಟ್ಟುಕೊಂಡು ಸೆಟ್ ಡಿಸೈನ್ ಮಾಡಲಾಗಿದೆ' ಎಂದಿದ್ದಾರೆ. ಆರತಕ್ಷತೆಗೆ ಮೈಸೂರು ಅರಮನೆ, ಅರಮನೆಯ ಆರ್ಚ್ ಹಾಗೂ ಮೈಸೂರಿನ ಕಲೋನಿಯಲ್ ಬಿಲ್ಡಿಂಗ್‌ಗಳಿಂದ ಸ್ಫೂರ್ತಿ ಪಡೆದುಕೊಂಡು ಈ ಸೆಟ್ ನಿರ್ಮಾಣ ಮಾಡಲಾಗಿದೆ. ಒಟ್ಟಾರೆಯಾಗಿ ಆರತಕ್ಷತೆಯ ಸೆಟ್‌ಗೆ ಮೈಸೂರಿನ ಆರ್ಕಿಟೆಕ್ಚರ್ ಸ್ಫೂರ್ತಿ ನೀಡಿದೆ' ಎಂದಿದ್ದಾರೆ ಅರುಣ್ ಸಾಗರ್. ಇನ್ನು ಮದುವೆಯ ಮಂಟಪಕ್ಕೂ ಭಿನ್ನವಾದ ಸೆಟ್ ಹಾಕಿದ್ದು, ದೇಗುಲಗಳ ಗೋಪುರಗಳ ಸೆಟ್ ಅನ್ನು ಅದಕ್ಕಾಗಿ ನಿರ್ಮಿಸಲಾಗಿದೆ.

ದೇಗುಲಗಳ ಗೋಪುರಗಳ ಸೆಟ್

'ಹೈದ್ರಾಬಾದ್ ಹುಡುಗಿ' ರಶ್ಮಿಕಾ ಮತ್ತೊಂದು ಶಾಕಿಂಗ್ ಸ್ಟೇಟ್‌ಮೆಂಟ್!

ಹುಟ್ಟಿದ ಊರು, ಆಡಿ ಬೆಳೆದ ನೆಲವನ್ನೇ ಮರೆತ ನಟಿ ರಶ್ಮಿಕಾ ಮಂದಣ್ಣ ನಾನು ಹೈದರಾಬಾದ್ ಹುಡುಗಿ ಅಂತ ಹೇಳಿ ಮತ್ತೆ ಟ್ರೋಲ್ ಆಗ್ತಿದ್ದಾರೆ. ಇದರ ನಡುವೆಯೇ ಮತ್ತೊಂದು ಶಾಕಿಂಗ್ ಕಮೆಂಟ್ ಮಾಡಿದ್ದಾರೆ.

ನಟಿ ರಶ್ಮಿಕಾ ಮಂದಣ್ಣ ಸಾಲು ಸಾಲು ಹಿಟ್ ಸಿನಿಮಾಗಳನ್ನು ನೀಡ್ತಿರುವ ಖುಷಿಯಲ್ಲಿದ್ದಾರೆ. ಕನ್ನಡದ ಚಿತ್ರರಂಗದಿಂದಲೇ ಎಂಟ್ರಿ ಕೊಟ್ಟ ರಶ್ಮಿಕಾ ಇದೀಗ ಕರುನಾಡನ್ನೇ ಮರೆತು ನಾನು ಹೈದ್ರಾಬಾದಿನವಳು ಎಂದು ಮತ್ತೆ ಟ್ರೋಲ್ ಆಗ್ತಿದ್ದಾರೆ. ಇದೀಗ ರಶ್ಮಿಕಾ ಮಂದಣ್ಣ ಮತ್ತೊಂದು ಕಮೆಂಟ್ ಮಾಡಿದ್ದಾರೆ. ನಟಿ ರಶ್ಮಿಕಾ ಮಂದಣ್ಣ ಸದ್ಯ ಟ್ರೆಂಡಿಂಗ್‌ನಲ್ಲಿದ್ದಾರೆ. ನ್ಯಾಷನಲ್ ಕ್ರಶ್ ಆಗಿ ಮಿಂಚುತ್ತಿರುವ ರಶ್ಮಿಕಾ ಮಂದಣ್ಣ, ಬಾಲಿವುಡ್ನಲ್ಲೂ ತನ್ನ ಪ್ರತಿಭೆಯನ್ನು ತೋರಿಸುತ್ತಿದ್ದಾರೆ. ಚಲೋ ಚಿತ್ರದ ಮೂಲಕ ಟಾಲಿವುಡ್ ಗೆ ಎಂಟ್ರಿ ಕೊಟ್ಟ ರಶ್ಮಿಕಾ, ಸಾಲು ಸಾಲು ತೆಲುಗು ಸಿನಿಮಾ ಕೊಟ್ಟು ಹಿಟ್ ನಟಿಯಾದ್ರು. ಟಾಲಿವುಡ್ ಸೂಪರ್ ಹಿಟ್ ಚಿತ್ರಗಳಲ್ಲಿ ನಟಿಸುವ ಮೂಲಕ ಸ್ಟಾರ್ ನಟಿಯ ಪಟ್ಟವನ್ನು ರಶ್ಮಿಕಾ ಮಂದಣ್ಣ ತನ್ನದಾಗಿಸಿಕೊಂಡ್ರು. ರಶ್ಮಿಕಾ ಮುಟ್ಟಿದ್ದೆಲ್ಲಾ ಚಿನ್ನವಾಗಿದೆ. ಬಾಲಿವುಡ್‌ನಲ್ಲೂ ಬ್ಯಾಕ್ ಟು ಬ್ಯಾಕ್ ಹಿಟ್ ಕೊಟ್ಟಿದ್ದಾರೆ. ವಿಕ್ಕಿ ಕೌಶಲ್ ಅಭಿನಯದ ಛಾವಾ ಚಿತ್ರದಲ್ಲಿ ನ್ಯಾಷನಲ್ ಕ್ರಶ್ ರಶ್ಮಿಕಾ ಕಾಣಿಸಿಕೊಂಡಿದ್ದು, ಸಿನಿಮಾ ತೆರೆಕಂಡ ಮೊದಲ ದಿನವೇ ಪಾಸಿಟಿವ್ ಟಾಕ್ ಕೇಳಿ ಬಂದಿದೆ.

ಫೆಬ್ರವರಿ 14 ರಂದು ಬಿಡುಗಡೆಯಾದ 'ಛಾವಾ' ಚಿತ್ರ ಬಾಲಿವುಡ್‌ನಲ್ಲಿ ಅತಿ ಹೆಚ್ಚು ಓಪನಿಂಗ್ ಗಳಿಸಿದೆ. ಅನಿಮಲ್ ಬಳಿಕ ಮತ್ತೊಂದು ಹಿಟ್ ಸಿನಿಮಾ ಬುಟ್ಟಿಗೆ ಹಾಕಿಕೊಂಡ ಖುಷಿಯಲ್ಲಿ ನಟಿ ರಶ್ಮಿಕಾ ಮಂದಣ್ಣ ಇದ್ದಾರೆ. ಇದೇ ವೇಳೆ ತನ್ನ ವೃತ್ತಿ ಜೀವನದ ಬಗ್ಗೆ ಶಾಕಿಂಗ್ ಕಮೆಂಟ್ ಗಳನ್ನು ಮಾಡಿದ್ದಾರೆ. ಭವಿಷ್ಯದ ಚಿತ್ರಗಳ ಬಗ್ಗೆ ಮಾತಾಡಿದ ರಶ್ಮಿಕಾ, ಕಥೆ ಇಷ್ಟವಾದ್ರೆ ಯಾವುದೇ ಪಾತ್ರವಾದ್ರೂ ನಾನು ಹಿಂದೆ ಸರಿಯೋದಿಲ್ಲ ಎಂದು ಹೇಳಿದ್ರು. ಚಿತ್ರದ ಕಥೆ ನಮ್ಮ ಪರವಾಗಿರಬೇಕಾದ್ರೆ ತೊಂದರೆಗಳು ಎದುರಾಗಬಹುದು. ಆದ್ರೆ ನಾನು ಆ ಕಥೆಯ ಪ್ರಮುಖ ಭಾಗ ವಾಗಿರಬೇಕು. ಯಾವುದೇ ಪಾತ್ರವಾದರೂ ನಾನು ಭಯವಿಲ್ಲದೆ ಮಾಡುತ್ತೇನೆ ಎಂದು ರಶ್ಮಿಕಾ ಮಂದಣ್ಣ ಹೇಳಿದರು. ಕಥೆ ತನಗೆ ಇಷ್ಟವಾದರೆ, ಹೆಚ್ಚು ಚಿಂತೆ ಮಾಡದೆ ಎರಡು ಮಕ್ಕಳ ತಾಯಿ ಅಥವಾ ಅಜ್ಜಿಯ ಪಾತ್ರಕ್ಕೂ ನಾನು ಓಕೆ ಹೇಳಿತ್ತೇನೆ ಎಂದು ರಶ್ಮಿಕಾ ಮಂದಣ್ಣ ಹೇಳಿದರು.

ಪಾಕ್ ಪಡೆಯನ್ನು ಮಕಾಡೆ ಮಲಗಿಸಿದ ನ್ಯೂಝಿಲೆಂಡ್

ರನ್ ಗಳಿಸಲು ಪಾಕ್ ಪರದಾಟ

ಪಾಕಿಸ್ತಾನ್ ಕ್ರಿಕೆಟ್ ಬೋರ್ಡ್ ಆಯೋಜಿಸಿದ್ದ ತ್ರಿಕೋನ ಸರಣಿ ಏಕದಿನ ಸರಣಿಯಲ್ಲಿ ಪಾಕಿಸ್ತಾನ್, ಸೌತ್ ಆಫ್ರಿಕಾ ಮತ್ತು ನ್ಯೂಝಿಲೆಂಡ್ ತಂಡಗಳು ಕಣಕ್ಕಿಳಿದಿದ್ದವು. ಈ ಸರಣಿಯ ಎರಡೂ ಪಂದ್ಯಗಳಲ್ಲೂ ಸೌತ್ ಆಫ್ರಿಕಾ ತಂಡ ಸೋಲನುಭವಿಸಿತ್ತು. ಅದರಂತೆ ಪಾಕಿಸ್ತಾನ್ ಮತ್ತು ನ್ಯೂಝಿಲೆಂಡ್ ತಂಡಗಳು ಫೈನಲ್‌ಗೆ ಪ್ರವೇಶಿಸಿದ್ದವು. ಆದರೆ ಅಂತಿಮ ಪಂದ್ಯದಲ್ಲಿ ಆತಿಥೇಯರನ್ನು ಬಗ್ಗು ಬಡಿಯುವಲ್ಲಿ ನ್ಯೂಝಿಲೆಂಡ್ ಯಶಸ್ವಿಯಾಗಿದೆ.

ಪಾಕಿಸ್ತಾನದಲ್ಲಿ ನಡೆದ ತ್ರಿಕೋನ ಏಕದಿನ ಸರಣಿಯ ಫೈನಲ್ ಪಂದ್ಯದಲ್ಲಿ ನ್ಯೂಝಿಲೆಂಡ್ ತಂಡ ಭರ್ಜರಿ ಜಯ ಸಾಧಿಸಿದೆ. ಕರಾಚಿಯ ನ್ಯಾಷನಲ್ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆದ ಈ ಪಂದ್ಯದಲ್ಲಿ ಟಾಸ್ ಗೆದ್ದ ಪಾಕಿಸ್ತಾನ್ ತಂಡವು ಬ್ಯಾಟಿಂಗ್ ಆಯ್ದುಕೊಂಡಿತು. ಆದರೆ ಕಿವೀಸ್ ಬೌಲರ್‌ಗಳ ಕರಾರುವಾಕ್ ದಾಳಿ ಮುಂದೆ ಪಾಕ್ ಬ್ಯಾಟರ್‌ಗಳು ರನ್‌ಗಳಿಸಲು ಪರದಾಡಿದರು. ಪರಿಣಾಮ 54 ರನ್ ಕಲೆಹಾಕುವಷ್ಟರಲ್ಲಿ ಫಖರ್ ಝಮಾನ್ (10), ಬಾಬರ್ ಆಝಂ (29) ಹಾಗೂ ಸೌದ್ ಶಕೀಲ್ (8) ಪೆವಿಲಿಯನ್‌ಗೆ ಮರಳಿದರು. ಈ ಹಂತದಲ್ಲಿ ಮೊಹಮ್ಮದ್ ರಿಝ್ವಾನ್ (46) ಹಾಗೂ ಸಲ್ಮಾನ್ ಅಘಾ (45) ಉತ್ತಮ ಜೊತೆಯಾಟವಾಡುವ ಮೂಲಕ ತಂಡದ ಮೊತ್ತವನ್ನು 150 ರನ್‌ಗಳ ಗಡಿದಾಟಿಸಿದರು. ಇದಾಗ್ಯೂ ಪಾಕಿಸ್ತಾನ್ ತಂಡ 49.3 ಓವರ್‌ಗಳಲ್ಲಿ 242 ರನ್‌ಗಳಿಗೆ ಆಲೌಟ್ ಆಯಿತು. ನ್ಯೂಝಿಲೆಂಡ್ ಪರ ವಿಲಿಯಂ ಒರೋಕ್ 4 ವಿಕೆಟ್ ಪಡೆದರೆ, ಮಿಚೆಲ್ ಸ್ಯಾಂಟ್ನರ್ ಹಾಗೂ ಮೈಕೆಲ್ ಬ್ರೇಸ್‌ವೆಲ್ ತಲಾ 2 ವಿಕೆಟ್ ಕಬಳಿಸಿ ಮಿಂಚಿದರು.

243 ರನ್‌ಗಳ ಗುರಿ: 50 ಓವರ್‌ಗಳಲ್ಲಿ 243 ರನ್‌ಗಳ ಸುಲಭ ಗುರಿ ಪಡೆದ ನ್ಯೂಝಿಲೆಂಡ್ ತಂಡಕ್ಕೆ ಡೆವೊನ್ ಕಾನ್ವೆ (48) ಉತ್ತಮ ಆರಂಭ ಒದಗಿಸಿದರು. ಇನ್ನು ಮೂರನೇ ಕ್ರಮಾಂಕದಲ್ಲಿ ಕಣಕ್ಕಿಳಿದ ಕೇನ್ ವಿಲಿಯಮ್ಸನ್ 34 ರನ್ ಬಾರಿಸಿದರೆ, ನಾಲ್ಕನೇ ಕ್ರಮಾಂಕದಲ್ಲಿ ಬ್ಯಾಟ್ ಬೀಸಿದ ಡೇರಿಲ್ ಮಿಚೆಲ್ 58 ಎಸೆತಗಳಲ್ಲಿ 57 ರನ್ ಚಚ್ಚಿದರು. ಈ ಮೂಲಕ ನ್ಯೂಝಿಲೆಂಡ್ ತಂಡವು 45.2 ಓವರ್‌ಗಳಲ್ಲಿ 243 ರನ್‌ಗಳಿಸಿ 5 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ. ವಿಶೇಷ ಎಂದರೆ ಫೆಬ್ರವರಿ 19 ರಿಂದ ಶುರುವಾಗಲಿರುವ ಚಾಂಪಿಯನ್ಸ್ ಟ್ರೋಫಿಯ ಮೊದಲ ಪಂದ್ಯದಲ್ಲಿ ಪಾಕಿಸ್ತಾನ್ ಮತ್ತು ನ್ಯೂಝಿಲೆಂಡ್ ತಂಡಗಳೇ ಮುಖಾಮುಖಿಯಾಗಲಿದೆ. ಇದೀಗ ಪ್ರಮುಖ ಟೂರ್ನಿಗೂ ಮುನ್ನ ಪಾಕ್‌ತಂಡವನ್ನು ಬಗ್ಗು ಬಡಿಯುವಲ್ಲಿ ಕಿವೀಸ್ ಪಡೆ ಯಶಸ್ವಿಯಾಗಿದೆ.

ನ್ಯೂಝಿಲೆಂಡ್ ಪ್ಲೇಯಿಂಗ್ 11: ವಿಲ್ ಯಂಗ್ , ಡೆವೊನ್ ಕಾನ್ವೇ , ಕೇನ್ ವಿಲಿಯಮ್ಸನ್ , ಡೇರಿಲ್ ಮಿಚೆಲ್ , ಟಾಮ್ ಲ್ಯಾಥಮ್ (ವಿಕೆಟ್ ಕೀಪರ್) , ಗ್ಲೆನ್ ಫಿಲಿಪ್ಸ್ , ಮೈಕೆಲ್ ಬ್ರೇಸ್‌ವೆಲ್ , ಮಿಚೆಲ್ ಸ್ಯಾಂಟ್ನರ್ (ನಾಯಕ) , ನಾಥನ್ ಸ್ಮಿತ್ , ಜಾಕೋಬ್ ಡಫಿ , ವಿಲಿಯಂ ಒರೋರ್ಕ್.

ಪಾಕಿಸ್ತಾನ್ ಪ್ಲೇಯಿಂಗ್ 11: ಫಖರ್ ಝಮಾನ್ , ಬಾಬರ್ ಆಝಂ , ಸೌದ್ ಶಕೀಲ್ , ಮೊಹಮ್ಮದ್ ರಿಝ್ವಾನ್ (ನಾಯಕ) , ಸಲ್ಮಾನ್ ಅಘಾ , ತಯ್ಯಬ್ ತಾಹಿರ್ , ಖುಷ್ದಿಲ್ ಶಾ , ಫಹೀಮ್ ಅಶ್ರಫ್ , ಶಾಹೀನ್ ಅಫ್ರಿದಿ , ನಸೀಮ್ ಶಾ , ಅಬ್ರಾರ್ ಅಹ್ಮದ್.

ಪಾಕಿಸ್ತಾನದಲ್ಲಿ ವಿರಾಟ್ ಕೊಹ್ಲಿ ಕ್ರೇಝ್

ಟೀಮ್ ಇಂಡಿಯಾದ ಸ್ಟಾರ್ ಆಟಗಾರ ವಿರಾಟ್ ಕೊಹ್ಲಿಗೆ ವಿಶ್ವದಾದ್ಯಂತ ಅಭಿಮಾನಿಗಳಿರುವುದು ಗೊತ್ತೇ ಇದೆ. ಅದರಲ್ಲೂ ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನದಲ್ಲೂ ಸಾಕಷ್ಟು ಅಭಿಮಾನಿಗಳಿರುವುದು ವಿಶೇಷ. ಇದಕ್ಕೆ ಸಾಕ್ಷಿ ಪಾಕಿಸ್ತಾನ್-ನ್ಯೂಝಿಲೆಂಡ್ ನಡುವಣ ಪಂದ್ಯದ ವೇಳೆ ವಿರಾಟ್ ಕೊಹ್ಲಿ ಹೆಸರು ಕೇಳಿ ಬಂದಿರುವುದು. ಕರಾಚಿಯ ನ್ಯಾಷನಲ್ ಸ್ಟೇಡಿಯಂ ಬಳಿ ಪಾಕಿಸ್ತಾನ್ ಮತ್ತು ನ್ಯೂಝಿಲೆಂಡ್ ನಡುವಣ ತ್ರಿಕೋನ ಸರಣಿಯ ಫೈನಲ್ ಪಂದ್ಯ ವೀಕ್ಷಿಸಲು ಅಭಿಮಾನಿಗಳು ನೆರೆದಿದ್ದರು.

ಈ ವೇಳೆ ಮಾಧ್ಯಮವೊಂದು ಪಾಕ್ ಕ್ರಿಕೆಟ್ ಪ್ರಿಯರಲ್ಲಿ ತಮ್ಮ ನೆಚ್ಚಿನ ಆಟಗಾರರ ಬಗ್ಗೆ ಕೇಳಿದ್ದಾರೆ. ಇದಕ್ಕೆ ಅಲ್ಲಿದ್ದ ಗುಂಪಿನಿಂದ ಕೇಳಿ ಬಂದ ಉತ್ತರ ವಿರಾಟ್ ಕೊಹ್ಲಿ, ಅಷ್ಟೇ ಅಲ್ಲದೆ ನಾವು ಆರ್‌ಸಿಬಿ ತಂಡದ ಅಭಿಮಾನಿಗಳು ಎಂದು ಸಹ ಹೇಳಿದ್ದಾರೆ. ಇದೇ ವೇಳೆ ಅಭಿಮಾನಿಯೊಬ್ಬ ಆರ್‌ಸಿಬಿ ಜರ್ಸಿಯಲ್ಲೂ ಕಾಣಿಸಿಕೊಂಡಿರುವುದು ವಿಶೇಷ. ಇದೀಗ ಪಾಕಿಸ್ತಾನದಲ್ಲಿನ ವಿರಾಟ್ ಕೊಹ್ಲಿ ಅಭಿಮಾನಿಗಳ ವಿಡಿಯೋ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ. ಅಂದಹಾಗೆ ಪಾಕಿಸ್ತಾನದಲ್ಲಿ ವಿರಾಟ್ ಕೊಹ್ಲಿ ಅಭಿಮಾನಿಗಳು ರಾರಾಜಿಸುತ್ತಿರುವುದು ಇದೇ ಮೊದಲೇನಲ್ಲ. ಈ ಹಿಂದೆ ಪಾಕಿಸ್ತಾನ್ ಸೂಪರ್ ಲೀಗ್‌ನಲ್ಲೂ ಕಿಂಗ್ ಕೊಹ್ಲಿ ಅಭಿಮಾನಿಗಳು ಪೋಸ್ಟರ್‌ಗಳನ್ನು ಹಿಡಿದುಕೊಂಡಿದ್ದರು.

ಅಲ್ಲದೆ ಭಾರತ ಮತ್ತು ಪಾಕಿಸ್ತಾನ್ ನಡುವಣ ಪಂದ್ಯದ ವೇಳೆ ಪಾಕ್ ತಂಡದ ಜರ್ಸಿಯಲ್ಲಿ ವಿರಾಟ್ ಕೊಹ್ಲಿಯ ಹೆಸರನ್ನು ಬರೆಸಿಕೊಂಡಿ